22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 291 | ನವದೆಹಲಿ | ಬೆಲೆ ₹ 10 | ಏಪ್ರಿಲ್ 27 2025, ಭಾನುವಾರ

INDIAN COMMUNICATION CONGRESS

KSJCTA

BRIDGEWATER STATE UNIVERSITY

## Bridgewater State University

IN ASSOCIATION WITH

INDIAN COMMUNICATION CONGRESS(ICC) & KARNATAKA STATE JOURNALISM AND COMMUNICATION TEACHERS' ASSOCIATION (KSJCTA)

presents

## ONE-WEEK INTERNATIONAL FACULTY DEVELOPMENT PROGRAMME

### Framing the Future: Teaching Journalism, Film, and Communication in the Digital Era

**April 28 to May 03, 2025 | 06:00PM – 07:30PM | ZOOM PLATFORM**



Inaugral Addrss:

**PRESIDENT FREDERICK W. CLARK, JR., ESQ.**

Bridgewater State University, Bridgewater, USA



Chief Convenor:

**PROF. B K RAVI**

Executive Chairman, Indian Communication Congress (ICC) & President, KSJCTAHon 'ble Vice Chancellor, Koppal University, StatePublic University, Karnataka



Opening Remarks:

**PROF. BIPLAB LOHA CHOWDHURY**

Chairman, Indian Communication Congress (ICC) and Professor,Centre for Journalism & Mass Communication Visva-Bharati University

## OUR SPEAKERS



**PROF. JABBAR AL-OBAIDI**

BRIDGEWATER UNIVERSITY

28 April 2025



**DR. SANDEEP SHASTRI**

POLITICAL SCIENTIST

29 April 2025



**PROF. KRISHNA SANKAR KUSUMA**

PROFESSOR, JAMIA MILLIA ISLAMIA

30 April 2025



**P. SAINATH**

FOUNDER-EDITOR, PARI

01 May 2025



**PROF. K. G. SURESH**

COMMUNICATION STRATEGIST

02 May 2025



**DR. PAUL JEAN**

BRIDGEWATER UNIVERSITY

03 May 2025

## CONVENORS



**DR SHARADA T**

Head, Dept of JMC, NMKRV College For WomenTresurer, KSJCTA

+91 9448997280



**DR. PRASHANTH VENUGOPAL**

Head, Dept of JMC, ST PAULS COLLEGE Secretary, KSJCTA

+91 8884545415

FDP 2025 - BRIDGEWATER

WhatsApp group

# ಮಿಷನ್ ಮೋಡ್ ನೇಮಕಾತಿ ಅಭಿಯಾನದಡಿ ಯುವಜನರಿಗೆ ಉದ್ಯೋಗಾವಕಾಶ

**ಬೆಂಗಳೂರು,ಏ.26:** ರೈಲ್ವೆ ಇಲಾಖೆಯು ಮಿಷನ್ ಮೋಡ್ ನೇಮಕಾತಿ ಅಭಿಯಾನ ದಡಿಯಲ್ಲಿ 2014ರಿಂದ 2024ರವರೆಗೆ 5.02 ಲಕ್ಷ ಯುವಜನರಿಗೆ ಉದ್ಯೋಗಾವಕಾಶ ನೀಡಲಾಗಿದೆ ಎಂದು ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ಹೇಳಿದ್ದಾರೆ.

ನಗರದ ಆದಾಯ ತೆರಿಗೆ ಕಚೇರಿಯಲ್ಲಿ ಇಂದು ಆಯೋಜಿಸಲಾದ ಉದ್ಯೋಗ ಮೇಳವನ್ನು ಉದ್ದೇಶಿಸಿ ಮಾತನಾಡಿದ ಅವರು, ಪ್ರಧಾನಿ ಆಶಯದಂತೆ ಉದ್ಯೋಗ ಸೃಷ್ಟಿಯ ಪ್ರಕ್ರಿಯೆಯನ್ನು ನಿರಂತರವಾಗಿ ನಡೆಸಲು ರೈಲ್ವೆ ಇಲಾಖೆಯು ವಾರ್ಷಿಕ ನೇಮಕಾತಿ ವೇಳಾಪಟ್ಟಿಯನ್ನು ಪ್ರಕಟಿಸಿದೆ. 2024ರ ಜನವರಿಯಿಂದ ಇದುವರೆಗೆ ರೈಲ್ವೆ ಇಲಾಖೆಯಲ್ಲಿ ಸುಮಾರು 71,000 ಹುದ್ದೆಗಳನ್ನು ಸೃಷ್ಟಿಸಿದ್ದು ಇವುಗಳ ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿದೆ ಎಂದು ಅವರು ಹೇಳಿದರು.

2047ರಲ್ಲಿ ವಿಕಸಿತ ಭಾರತದ ಕನಸನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಅನೇಕ ಕ್ರಮಗಳನ್ನು ಸರ್ಕಾರ ಕೈಗೊಂಡಿದ್ದು, ಅದರಲ್ಲಿ ರಾಷ್ಟ್ರೀಯ ಉದ್ಯೋಗ ಮೇಳವೂ ಒಂದು, ಅದರ ಅಂಗವಾಗಿ 2022ರ ಅಕ್ಟೋಬರ್‌ನಲ್ಲಿ ಪ್ರಧಾನಮಂತ್ರಿಯವರು 10 ಲಕ್ಷ ಉದ್ಯೋಗ ನೇಮಕಾತಿ ಪ್ರಕ್ರಿಯೆಗೆ ಚಾಲನೆ ನೀಡಿದರು ಎಂದು ಅವರು ಹೇಳಿದರು.

ಭಾರತವು 2025ರಲ್ಲಿ 5 ಟ್ರಿಲಿಯನ್ ಡಾಲರ್ ಆರ್ಥಿಕತೆಯಾಗಿ ಬೆಳೆಯುವ ಗುರಿ ಹೊಂದಿದ್ದು, 2030ರಲ್ಲಿ 7 ಟ್ರಿಲಿಯನ್ ಡಾಲರ್ ಆರ್ಥಿಕತೆಯಾಗುವ ಮಹತ್ವಾಕಾಂಕ್ಷೆ ಹೊಂದಿದೆ. ಈ ನಿಟ್ಟಿನಲ್ಲಿ ನಮ್ಮ ಯುವ ಜನತೆಯ ಕೌಶಲ್ಯಾಭಿವೃದ್ಧಿ,



ಉದ್ಯಮಶೀಲತೆಗೆ ಪ್ರೋತ್ಸಾಹ ಹಾಗೂ ಉದ್ಯೋಗಸೃಷ್ಟಿಗೆ ಸರ್ಕಾರ ಆದ್ಯತೆ ನೀಡಿದೆ. ಪ್ರಸಕ್ತ ಬಜೆಟ್ ನಲ್ಲಿ ಪ್ರಧಾನಮಂತ್ರಿಯವರ ಪ್ಯಾಕೇಜ್ ಅಡಿಯಲ್ಲಿ ಉದ್ಯೋಗ, ಕೌಶಲ್ಯಾಭಿವೃದ್ಧಿ ಹಾಗೂ ಇಂಟರ್ನ್ ಶಿಪ್ ಯೋಜನೆಗಳನ್ನು ಘೋಷಿಸಿದ್ದು, ಇದರಿಂದ ಸುಮಾರು 4.10 ಕೋಟಿ ಯುವಜನರಿಗೆ ಪ್ರಯೋಜನವಾಗಲಿದೆ ಎಂದು ಹೇಳಿದರು.

ಭಾರತದ ಯುವ ಜನತೆಯನ್ನು ಸಬಲೀಕರಣಗೊಳಿಸಿ ಅವರ ಉದ್ಯಮಶೀಲತೆ ಮತ್ತು ಉದ್ಯೋಗಾವಕಾಶಗಳನ್ನು ಹೆಚ್ಚಿಸಲು ಪ್ರಧಾನಮಂತ್ರಿ ಮುದ್ರಾ ಯೋಜನೆ, ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆ, ಪ್ರಧಾನಮಂತ್ರಿ ವಿಕಾಸ ಯೋಜನೆ ಇತ್ಯಾದಿ ಕ್ರಮಗಳನ್ನು ಕೈಗೊಳ್ಳಲಾಗಿದೆ.

2015 ರಲ್ಲಿ ಪ್ರಾರಂಭವಾದ ಪ್ರಧಾನಮಂತ್ರಿ ಮುದ್ರಾ ಯೋಜನೆಯಲ್ಲಿ ಇದುವರೆಗೆ 32.61 ಲಕ್ಷ ಕೋಟಿ ರೂಪಾಯಿ ಸಾಲ ಸೌಲಭ್ಯ ಕಲ್ಪಿಸಲಾಗಿದೆ. ಈ ಪೈಕಿ ಕರ್ನಾಟಕದಲ್ಲಿ 3.02 ಲಕ್ಷ ಕೋಟಿ ರೂಪಾಯಿ ಸಾಲ ಒದಗಿಸಲಾಗಿದೆ. 2023 ರಲ್ಲಿ ಪ್ರಾರಂಭವಾದ ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆ ಅಡಿಯಲ್ಲಿ ಕರ್ನಾಟಕದ ಸುಮಾರು 1.09 ಲಕ್ಷ ಕುಶಲಕರ್ಮಿಗಳಿಗೆ ಸರ್ಕಾರದಿಂದ ಪ್ರೋತ್ಸಾಹ ನೀಡಲಾಗಿದೆ ಎಂದು ಸಚಿವರು ಹೇಳಿದರು. ಇಂದಿನ ಉದ್ಯೋಗ ಮೇಳದಲ್ಲಿ ಆದಾಯ ತೆರಿಗೆ ಇಲಾಖೆಯಲ್ಲಿ 102 ಹಾಗೂ ಇತರ ಇಲಾಖೆಗಳಲ್ಲಿ 41 ಮಂದಿ ಸೇರಿ ಒಟ್ಟು 143 ಮಂದಿಗೆ ನೇಮಕಾತಿ ಪತ್ರ ನೀಡಲಾಯಿತು.

ಸಂಸದ ಪಿ.ಸಿ. ಮೋಹನ್ ಮಾತನಾಡಿ, ಪ್ರಧಾನಿ ನೇತೃತ್ವದಲ್ಲಿ ನಡೆಯುತ್ತಿರುವ ಉದ್ಯೋಗ ಮೇಳದಲ್ಲಿ ಈ ವರೆಗೆ 8 ಲಕ್ಷ ಯುವ ಸಮೂಹಕ್ಕೆ ನೇಮಕಾತಿ ಪತ್ರಗಳನ್ನು ವಿತರಿಸಲಾಗಿದೆ ಎಂದು ತಿಳಿಸಿದರು. ಬೆಂಗಳೂರಿನ ಕರ್ನಾಟಕ ಮತ್ತು ಗೋವಾ ವಲಯದ ಆದಾಯ ತೆರಿಗೆ ಪ್ರಧಾನ ಮುಖ್ಯ ಆಯುಕ್ತ ಗಣಪತಿ ಭಟ್ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ನಿತ್ಯ ಪಂಚಾಂಗ 27.04.2025 ಭಾನುವಾರ



**ಶ್ರೀ ವಿಶ್ವಾವಸು ನಾಮ ಸಂವತ್ಸರ, ಉತ್ತರಾಯಣ ವಸಂತ ಋತು ಚಾಂದ್ರಮಾನ, ಚೈತ್ರ ಬಹುಳ**

**ಅಮಾವಾಸ್ಯೆ, ಅಶ್ವಿನಿ ನಕ್ಷತ್ರ, ಅಕ್ಷಯ ಅಮಾವಾಸ್ಯೆ, ಕರಗವ್ರತ, ತಾಯಲೂರು ವಿಶ್ವೇಶ್ವರ ರಥ, ಮಾನ್ವಿ ಉತ್ಸವ, ನೃಸಿಂಹವಾಡಿ ನಾರಾಯಣಸ್ವಾಮಿ ಆರಾಧನೆ**

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಗ್ಯಾರಂಟಿ ಯೋಜನೆ ಜೊತೆ ಅಭಿವೃದ್ಧಿಗೂ ಹಣ: ಬಿಜೆಪಿಗೆ ಹೊಟ್ಟೆಯುರಿ–ಸಿಎಂ ಟೀಕೆ

**ಮೈಸೂರು,ಏ.26:** ಗ್ಯಾರಂಟಿ ಯೋಜನೆಗಳ ಜೊತೆಗೆ ಅಭಿವೃದ್ಧಿಗೂ ಅಪಾರ ಹಣ ಕೊಡುತ್ತಿದ್ದೇವೆ. ಬಿಜೆಪಿಯವರಿಗೆ ಇದೇ ಹೊಟ್ಟೆಯುರಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಟೀಕಿಸಿದರು. ಜಿಲ್ಲಾಡಳಿತ ಮತ್ತು ನಾನಾ ಇಲಾಖೆಗಳ ಸಹಯೋಗದಲ್ಲಿ ಆಯೋಜಿಸಿದ್ದ 439.88 ಕೋಟಿ ಮೌಲ್ಯದ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ, ಉದ್ಘಾಟನೆಗಳನ್ನು ನೆರವೇರಿಸಿ ಬಳಿಕ ಸಾವಿರಾರು ಫಲಾನುಭವಿಗಳಿಗೆ ವಿವಿಧ ಸವಲತ್ತುಗಳನ್ನು ವಿತರಿಸಿ, ಅಂಬೇಡ್ಕರ್–ಬಾಬು ಜಗಜೀವನ್ ರಾಮ್ ಜನ್ಮ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು. ಪಿರಿಯಾಪಟ್ಟಣ ಕೃಷಿ ಪ್ರಧಾನ ಕ್ಷೇತ್ರ. ಹೀಗಾಗಿ 300 ಕ್ಕೂ ಹೆಚ್ಚು ರೈತರಿಗೆ 100 ಕೋಟಿಗೂ ಅಧಿಕ ಮೊತ್ತದ ಕೃಷಿ ಯಂತ್ರೋಪಕರಣಗಳನ್ನು ಇಂದು ವಿತರಿಸಲಾಗಿದೆ. ಕೃಷಿ ಕಾರ್ಮಿಕರು ನಗರಗಳಿಗೆ ವಲಸೆ ಹೋಗಿದ್ದರಿಂದ ಗ್ರಾಮೀಣ ರೈತರು ಯಂತ್ರಗಳ ಮೇಲೆ ಅವಲಂಬಿತರಾಗಬೇಕಾಗಿದೆ ಎಂದು ವಿವರಿಸಿದರು. ಹಿಂದಿನ ವರ್ಷ ಜಲಾಶಯಗಳೆಲ್ಲಾ ತುಂಬಿ ರಾಜ್ಯದಲ್ಲಿ ಮಳೆ–ಬೆಳೆ ಚೆನ್ನಾಗಿ ಆಗಿದೆ. ಈ ವರ್ಷವೂ ಒಳ್ಳೆಯ ಮಳೆ ಆಗಿ ರೈತರ ಮುಖದಲ್ಲಿ



ಮಂದಹಾಸ ಮೂಡುತ್ತದೆ ಎಂದರು. ರಾಜ್ಯದ ಬಡವ ಮತ್ತು ಮಧ್ಯಮ ವರ್ಗದ ಕುಟುಂಬಗಳಿಗೆ ತಿಂಗಳಿಗೆ 5 ರಿಂದ 6 ಸಾವಿರ ರೂಪಾಯಿ ಹಣ ಗ್ಯಾರಂಟಿಗಳ ಮೂಲಕ ತಲುಪುತ್ತಿದೆ. ಈ ಗ್ಯಾರಂಟಿಗಳಲ್ಲದೆ ಎಲ್ಲಾ ಇಲಾಖೆಗಳ ಅಭಿವೃದ್ಧಿ ಕಾರ್ಯಗಳ ಫಲ ಕೂಡ ನಾಡಿನ ದೊರೆಗಳಾದ ಜನರ ಮನೆ ಬಾಗಿಲಿಗೆ ತಲುಪುತ್ತಿದೆ. ಜನರಿಗೆ ಪ್ರತಿದಿನ ಒಂದಲ್ಲಾ ಒಂದು ರೀತಿಯಲ್ಲಿ ಸರ್ಕಾರದ ಅಭಿವೃದ್ಧಿ ಕಾಣಿಸುತ್ತಿದೆ. ಆದರೆ, ಬಿಜೆಪಿ ಮಾತ್ರ ಸರ್ಕಾರದ ಬೊಕ್ಕಸದಲ್ಲಿ ಹಣ ಇಲ್ಲ ಎಂದು ಸುಳ್ಳು ಹೇಳಿಕೊಂಡು ತಿರುಗುತ್ತಿದೆ ಎಂದು ಟೀಕಿಸಿದರು. ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರ ಬರೀ ಸುಳ್ಳು ಹೇಳಿಕೊಂಡು, ದೇವರು ಧರ್ಮದ ಹೆಸರಲ್ಲಿ ತಮ್ಮ ವೈಫಲ್ಯಗಳನ್ನು ಮುಚ್ಚಿಕೊಂಡು ಜನರ ದಿಕ್ಕುತಪ್ಪಿಸಿ ಕಾಲಕಳೆದು ಮನೆಗೆ ಹೋದರು ಎಂದು ವಿವರಿಸಿದರು.

# ಪಹಲ್ಗಾಮ್: ಸಿಎಂ ಮಾತಿಗೆ ಅಶೋಕ್ ಕಿಡಿ

**ಬೆಂಗಳೂರು, ಏ.26:** ದೇಶ ಸಂಕಷ್ಟದಲ್ಲಿರುವ ಸಮಯದಲ್ಲಿ ಸಿಎಂ ಸಿದ್ದರಾಮಯ್ಯ ಆಡಿರುವ ಮಾತು ಆಘಾತ ತಂದಿದೆ. ಮತ ಸಿಕ್ಕಿದರೆ ಸಾಕು ಎಂಬ ಮನಸ್ಥಿತಿ ಅವರಿಗೆ ಬಂದಿರುವುದು ನಾಚಿಕೆಗೇಡಿನ ಸಂಗತಿ ಹಾಗೂ ಖಂಡನೀಯ. ಈ ಕುರಿತು ಸಿಎಂ ಸಿದ್ದರಾಮಯ್ಯ ಜನರ ಬಳಿ ಕ್ಷಮೆಯಾಚಿಸಬೇಕು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆಗ್ರಹಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಸ್ರೇಲ್‌ನಲ್ಲಿ ನಾಗರಿಕರು ಸಂಭ್ರಮಿಸುತ್ತಿರುವಾಗ ಅವರನ್ನು ಕೊಂದಂತೆಯೇ, ಜಮ್ಮು ಕಾಶ್ಮೀರದಲ್ಲೂ ಭಯೋತ್ಪಾದಕರು ಹಿಂದೂಗಳ ಹತ್ಯೆ ಮಾಡಿದ್ದಾರೆ. ಇದನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತ್ರ ಕ್ಷಮಿಸಬಹುದು. ದೇಶಕ್ಕೇನಾದರೂ ಆಗಲಿ ಪರವಾಗಿಲ್ಲ, ಮತ ಸಿಕ್ಕಿದರೆ ಸಾಕು ಎಂಬ ಮನಸ್ಥಿತಿ ಅವರಿಗೆ ಬಂದಿರುವುದು ನಾಚಿಕೆಗೇಡಿನ ಸಂಗತಿ. ಅವರು ಯಾವುದೇ ಸಿದ್ಧಾಂತ ಇಲ್ಲದ ವ್ಯಕ್ತಿ. ಅವರಿಗೆ ಅಧಿಕಾರದಲ್ಲಿದ್ದರೆ ಸಾಕು ಎಂದರು.

ದೇಶಾದ್ಯಂತ ಜನರು ಪ್ರತಿಭಟನೆ ನಡೆಸುತ್ತಿರುವಾಗ, ಹೋದ ಜೀವಗಳನ್ನು ವಾಪಸ್ ತರಲು ಸಾಧ್ಯವಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ. ಇದೇ ಘಟನೆ ಅವರ ಕುಟುಂಬಕ್ಕೆ ಆಗಿದ್ದರೆ ಅವರ ಮಾತು ಹೀಗೆ ಇರುತ್ತಿರಲಿಲ್ಲ. ಕರುಣೆ ಇಲ್ಲದೆಯೇ ಈ ರೀತಿ ಮಾತನಾಡಿ, ಬಳಿಕ ಸಂತ್ರಸ್ತರ ಮನೆಗೆ ಭೇಟಿ ನೀಡಿದ್ದಾರೆ. ಅಲ್ಲಿ ಹೋಗಿ ಹಾರಹಾಕಿ ಇಲ್ಲಿ ಬಂದು ಹೀಗೆ ಮಾತಾಡುತ್ತಿದ್ದಾರೆ. ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಕೇಂದ್ರ ಸರ್ಕಾರದ ತೀರ್ಮಾನದ ಜೊತೆಗೆ ನಿಲ್ಲುತ್ತೇವೆ ಎಂದಿದ್ದಾರೆ. ಇಲ್ಲಿ ಸಿಎಂ ಸಿದ್ದರಾಮಯ್ಯ ಮನೆ ಮುರಿಯುವ ಮಾತನಾಡಿದ್ದಾರೆ ಎಂದು ದೂರಿದ್ದಾರೆ.

ಭಟ್ಕಳದಲ್ಲಿ ಪಾಕಿಸ್ತಾನದ ಹನ್ನೆರಡು ಪ್ರಜೆಗಳಿದ್ದಾರೆ. ಕೇಂದ್ರ ಸರ್ಕಾರ ಹೊರಗೆ ಹಾಕಿ ಎಂದು ಸೂಚಿಸಿದ್ದರೂ, ರಾಜ್ಯ ಸರ್ಕಾರ ಏನೂ ಮಾಡಿಲ್ಲ. ಕಲಬುರ್ಗಿಯಲ್ಲಿ ಪಾಕಿಸ್ತಾನದ ಧ್ವಜವನ್ನು ರಸ್ತೆಗೆ ಅಂಟಿಸಿದರೆ ಮುಸ್ಲಿಂ ಮಹಿಳೆಯರು ಅದನ್ನು ತೆಗೆದುಹಾಕಿದ್ದಾರೆ. ನಮ್ಮ ದೇಶದ ಒಳಗೆಯೇ ಶತ್ರುಗಳಿದ್ದಾರೆ. ಇಂತಹ ಮೀರ್ ಸಾದಿಕ್‌ಗಳ ಕಡೆಗೆ ಗಮನಹರಿಸಬೇಕು. ಪಾಕಿಸ್ತಾನಕ್ಕೆ ಅಪಮಾನ ಮಾಡಿದ ಹಿಂದೂ ಸಂಘಟನೆಯ ಕಾರ್ಯಕರ್ತರನ್ನು ಬಂಧಿಸಿದ್ದಾರೆ. ಇದರಿಂದ ಕಾಂಗ್ರೆಸ್ನ ಬಣ್ಣ ಬಯಲಾಗಿದೆ. ರಾಜ್ಯದಲ್ಲಿರುವ ಪಾಕಿಸ್ತಾನ ಹಾಗೂ ಬಾಂಗ್ಲಾದೇಶದ ಪ್ರಜೆಗಳನ್ನು ಒದ್ದು ಹೊರಗೆ ಹಾಕಬೇಕು ಎಂದು ಒತ್ತಾಯಿಸಿದರು.

ಭಾರತೀಯ ಯೋಧರು ಹಾಗೂ ಗುಪ್ತಚರ ಸಂಸ್ಥೆ ಕೆಲಸ ಮಾಡುತ್ತಿರುವುದರಿಂದಲೇ ಸಚಿವ ಸಂತೋಷ್ ಲಾಡ್ ಆರಾಮಾಗಿದ್ದಾರೆ. ಜಮ್ಮು–ಕಾಶ್ಮೀರದಲ್ಲಿ ಕಾಂಗ್ರೆಸ್ ಮೈತ್ರಿ ಸರ್ಕಾರವೇ ಇದೆ. ಅಲ್ಲಿನ ಸರ್ಕಾರವನ್ನೇ ಇವರು ಪ್ರಶ್ನೆ ಮಾಡಬೇಕಿದೆ. ದೇಶಕ್ಕೆ ಸಂಕಷ್ಟ ಬಂದಾಗ ಹೇಗಿರಬೇಕೆಂದು ಕಾಂಗ್ರೆಸ್ ನಾಯಕರು ಕಲಿಯಬೇಕು. ಇವರೆಲ್ಲರ ಹೇಳಿಕೆಯನ್ನು ಜನರು ಗಮನಿಸಿದ್ದಾರೆ ಎಂದರು. ಎಲ್ಲೆಲ್ಲಿ ಹೇಗೆ ಭದ್ರತೆ ಇರಬೇಕು ಎಂಬುದನ್ನು ಸರ್ಕಾರ ಹಾಗೂ ರಾಜ್ಯಪಾಲರ ಅಭಿಪ್ರಾಯದ ಮೇರೆಗೆ ನಿಯೋಜಿಸಲಾಗುತ್ತದೆ.

ಜಮ್ಮು–ಕಾಶ್ಮೀರ ಸರ್ಕಾರ ಹೇಗೆ ನಡೆದುಕೊಂಡಿದೆ ಎಂಬುದು ಮುಖ್ಯ. ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಸ್ಫೋಟಗೊಂಡಾಗ ಕಾಂಗ್ರೆಸ್ ಸರ್ಕಾರ ಏನು ಮಾಡುತ್ತಿತ್ತು? ಇಲ್ಲಿಯೂ ಅತ್ಯಾಚಾರ, ಬ್ಯಾಂಕ್ ದರೋಡೆ ನಡೆಯುತ್ತಿದೆ. ಹಾಗಾದರೆ ಇಲ್ಲಿ ಏಕೆ ಗುಪ್ತಚರ ದಳ ವಿಫಲವಾಗಿದೆ? ನಾವೆಲ್ಲರೂ ಒಂದೇ ಧ್ವನಿಯಲ್ಲಿ ಮಾತನಾಡಬೇಕು. ಆದರೆ ಸಿಎಂ ಸಿದ್ದರಾಮಯ್ಯ ವೋಟ್ ಬ್ಯಾಂಕ್ ಧ್ವನಿಯಲ್ಲಿ ಮಾತಾಡುತ್ತಿದ್ದಾರೆ ಎಂದರು.

ಸ್ಮಾರ್ಟ್ ಮೀಟರ್ ಅಳವಡಿಸಿಕೊಳ್ಳಲೇಬೇಕೆಂದು ದೊಡ್ಡಬಳ್ಳಾಪುರದಲ್ಲಿ ನೋಟಿಸ್ ನೀಡಲಾಗಿದೆ. ಇದು ದೊಡ್ಡ ಕರ್ಮಕಾಂಡ. ಸ್ಮಾರ್ಟ್ ಮೀಟರ್ ವಿಚಾರದಲ್ಲಿ ಕೋರ್ಟ್ ನೀಡಿದ ತಡೆಯಾಜ್ಞೆ ಸ್ವಾಗತಾರ್ಹವಾದುದು ಎಂದರು.

# ಕಣ್ಮನ ಸೂರೆಗೊಂಡ ನೃತ್ಯ ರೂಪಕ ಪ್ರದರ್ಶನ

**ಬೆಂಗಳೂರು,ಏ.26:** ಜಾಗತೀಕರಣ ಆಕ್ರಮಣದಿಂದ ಜನ ಸಮುದಾಯಗಳ ಪಾರಂಪರಿಕ ಕಲೆ ಮತ್ತು ಸಂಸ್ಕೃತಿಯನ್ನು ಸಂರಕ್ಷಿಸಲು ಪರಿಣಾಮಕಾರಿ ಪ್ರಯತ್ನ ಅಗತ್ಯವಿದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ.ಪುರುಷೋತ್ತಮ ಬಿಳಿಮಲೆ ಪ್ರತಿಪಾದಿಸಿದರು.

ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ರಾಜಾಜಿನಗರ 2ನೇ ಹಂತದಲ್ಲಿರುವ ಶಿವಶಕ್ತಿ ನೃತ್ಯ ಶಾಲೆಯ ರಜತ ಮಹೋತ್ಸವ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಪಂಚದಾದ್ಯಂತ ಕಳೆದ ನಾಲ್ಕು ದಶಕಗಳಿಂದ ಸಾವಿರಾರು ಸಣ್ಣಪುಟ್ಟ ಭಾಷೆಗಳು ಸಾವನ್ನಪ್ಪಿದ್ದು 50 ವರ್ಷಗಳ ಬಳಿಕ ಶೇಕಡಾ 8ರಷ್ಟು ಜನರ ಭಾಷೆಗಳು ಜಗತ್ತಿನ ಜನರ ಮೇಲೆ ತಮ್ಮ ಸಂಪೂರ್ಣ ಅಧಿಪತ್ಯ ಸಾಧಿಸುವ ಅಪಾಯವಿದೆ ಎಂದು ಅವರು ಎಚ್ಚರಿಸಿದರು.

ಸಮಾಜದ ಅಂಚಿನ ಸಮುದಾಯಗಳು ಅವನತಿಯ ಹಾದಿಯಲ್ಲಿ ಸಾಗುತ್ತಿದ್ದು ಕುಲ ಕಸುಬುಗಳು ಮತ್ತು ಪಾರಂಪರಿಕ ಕಲೆಗಳು ಕಾಲಕ್ರಮೇಣ ಕಣ್ಮರೆಯಾಗುತ್ತಿರುವ ಬಗ್ಗೆ ಪುರುಷೋತ್ತಮ ಬಿಳಿಮಲೆ ಅಪಾರ ಆತಂಕ ವ್ಯಕ್ತಪಡಿಸಿದರು. ಇಂತಹ ಸಂದಿಗ್ಧ ಸನ್ನಿವೇಶದಲ್ಲಿ ಭಾರತೀಯ ಸಂಸ್ಕೃತಿಯ ಭಾಗವಾದ ಸಂಗೀತ, ನೃತ್ಯ, ನಾಟಕ, ಯಕ್ಷಗಾನ ಮುಂತಾದ ಕಲಾ ಪ್ರಕಾರಗಳನ್ನು ಉಳಿಸಿ ಬೆಳೆಸುವ ಪ್ರಯತ್ನಗಳಿಗೆ ಸಮಸ್ತ ಜನತೆ ಹೆಚ್ಚಿನ ಉತ್ತೇಜನ ಮತ್ತು ಬೆಂಬಲ ನೀಡಬೇಕೆಂದು ಅವರು ವಿನಂತಿಸಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಮಾಜಿ ಉಪಮುಖ್ಯಮಂತ್ರಿ ಹಾಗೂ ಶಾಸಕರಾದ ಡಾ.ಸಿ.ಎನ್. ಅಶ್ವತ್ಥನಾರಾಯಣರವರು ಮಕ್ಕಳಲ್ಲಿ ಶೈಕ್ಷಣಿಕ ಪ್ರಗತಿಯ ಜೊತೆಗೆ ಸಾಂಸ್ಕೃತಿಕ ಅಭಿರುಚಿಗಳನ್ನು ಕೂಡಾ ಪ್ರೋತ್ಸಾಹಿಸುವ ಮೂಲಕ ಪರಿಪೂರ್ಣ ವ್ಯಕ್ತಿತ್ವ ನಿರ್ಮಾಣಕ್ಕೆ ಪೋಷಕರು ಅಗತ್ಯ ಒತ್ತಾಸೆ ನೀಡಬೇಕೆಂದು ಸಲಹೆಯಿತ್ತರು.

ಕಲೆ–ಸಂಸ್ಕೃತಿಯನ್ನು ಪೋಷಿಸುವ ಸಂಸ್ಥೆಗಳು ಸುಸ್ಥಿರ ಹಾಗೂ ಸ್ವಾಸ್ಥ್ಯ ಸಮಾಜವನ್ನು ನಿರ್ಮಿಸುವ ನಿಟ್ಟಿನಲ್ಲಿ ಮಹತ್ವದ ಪಾತ್ರ ವಹಿಸುತ್ತವೆ ಎಂದು ಅಭಿಪ್ರಾಯಪಟ್ಟ ಅವರು ಶಿವಶಕ್ತಿ ನೃತ್ಯ ಶಾಲೆಯ ಉತ್ತಮ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳಾದ ಎಲ್.ಕೆ.ಅತೀಕ್ ಮಾತನಾಡಿ ಮನುಷ್ಯನಿಗೆ ಜೀವನ ಪೋಷಣೆಯ ಜೊತೆಗೆ ಸಂಸ್ಕೃತಿಯ ಸಂಸ್ಕಾರವೂ ಅಗತ್ಯವಿದ್ದು ಮಕ್ಕಳಲ್ಲಿ ಅಡಗಿರುವ ಸುಪ್ತ ಪ್ರತಿಭೆಗಳನ್ನು ಪ್ರೋತ್ಸಾಹಿಸುವಂತೆ ಪೋಷಕರಿಗೆ ಕಿವಿಮಾತು ಹೇಳಿದರು.

ಹಿರಿಯ ಪತ್ರಕರ್ತರಾದ ಎಸ್ ಆರ್ ಆರಾಧ್ಯರವರು ಮಾತನಾಡಿ ಕಾಸರಗೋಡಿನಿಂದ ಬಂದು ಕರ್ನಾಟಕದಲ್ಲಿ ನೆಲೆಸಿ ನಾಡಿನ ಸಾಂಸ್ಕೃತಿಕ ಕ್ಷೇತ್ರಕ್ಕೆ ಅಮೂಲ್ಯ ಕಾಣಿಕೆಯಿತ್ತ ನಾಟ್ಯಶ್ರೀ ಕೆ.ಎಂ.ರಾಮನ್ ಮತ್ತು ಅವರ ಕುಟುಂಬದವರ ಕಲಾಸೇವೆಯನ್ನು ಪ್ರಶಂಸಿಸಿದರು. ಶಾಂತಲಾ ಆರ್ಟ್ಸ್ ಅಕಾಡೆಮಿಯ ನಿರ್ದೇಶಕರಾದ ಪುಲಿಕೇಶಿ ಕಸ್ತೂರಿ, ನೃತ್ಯ ಗುರು ವಿದ್ವಾನ್ ಹರೀಶ್ ರಾಮನ್ ಶುಭ ಹಾರೈಸಿದರು. ಸಮಾರಂಭದಲ್ಲಿ ಶಿವಶಕ್ತಿ ನೃತ್ಯ ಶಾಲೆಯ ಸಂಸ್ಥಾಪಕರಾದ ವಿದೂಷಿ ಕೆ.ಆರ್. ಗುಣವತಿಯವರನ್ನು ಸನ್ಮಾನಿಸಿ ಅಭಿನಂದಿಸಲಾಯಿತು. ಇದೇ ಸಂದರ್ಭದಲ್ಲಿ ಶಿವಶಕ್ತಿ ನೃತ್ಯ ಶಾಲೆಯ ಐವತ್ತಕ್ಕೂ ಹೆಚ್ಚು ವಿದ್ಯಾರ್ಥಿನಿಯರು ಸುಮಾರು ಎರಡು ತಾಸುಗಳ ಕಾಲ ಅತ್ಯಮೋಘ ಶಿವ ನಾಮಾಮೃತ ನೃತ್ಯ ರೂಪಕವನ್ನು ಸಾದರಪಡಿಸಿ ಕಿಕ್ಕಿರಿದು ನೆರೆದಿದ್ದ ಪ್ರೇಕ್ಷಕರು ಮತ್ತು ಪೋಷಕರ ಮನಸೂರೆಗೊಂಡರು. ವಿದ್ವಾನ್ ಬಾಲಸುಬ್ರಹ್ಮಣ್ಯ ಶರ್ಮಾರವರ ಹಾಡಾಗಾರಿಕೆ ಮತ್ತು ವಾದ್ಯಮೇಳ ವಿಶೇಷ ಗಮನ ಸೆಳೆಯಿತು.

# ಅಪಘಾತದಲ್ಲಿ ಮೃತಪಟ್ಟ ಸಿಬ್ಬಂದಿಯ ಕುಟುಂಬಕ್ಕೆ ಪರಿಹಾರ ವಿತರಣೆ

**ಬೆಂಗಳೂರು,ಏ.26:** ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಕೇಂದ್ರ ಕಛೇರಿಯಲ್ಲಿ, ರಾಮಲಿಂಗಾರೆಡ್ಡಿ, ಸಾರಿಗೆ ಮತ್ತು ಮುಜರಾಯಿ ಸಚಿವರು, ಮೊಹಮ್ಮದ್ ರಿಜ್ವಾನ್ ನವಾಬ್, ಮಾನ್ಯ ಉಪಾಧ್ಯಕ್ಷರು, ಕರಾರಸಾ ನಿಗಮದವರು, ನಿಗಮದ ವಿವಿಧ ಪರಿಹಾರ ಯೋಜನೆ ಅಡಿ ಸಿಬ್ಬಂದಿ ಹಾಗೂ ಸಿಬ್ಬಂದಿಗಳ ಅವಲಂಬಿತರಿಗೆ ಪರಿಹಾರ ಮೊತ್ತದ ಚೆಕ್ ವಿತರಿಸಿದರು.




ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು, ಅಪಘಾತದಿಂದ ಮೃತಪಟ್ಟ ಸಿಬ್ಬಂದಿಗಳ ಅವಲಂಬಿತರಿಗೆ ಸಾಂತ್ವಾನ ಹೇಳಿ, ಸಿಬ್ಬಂದಿಗಳ ಜೀವ ಅಮೂಲ್ಯವಾದದ್ದು, ಅವರನ್ನು ಮರಳಿ ಕರೆತರಲು ಸಾಧ್ಯವಾಗುವುದಿಲ್ಲ, ಆದರೆ ಅವರ ಅವಲಂಬಿತರ ಮುಂದಿನ ಜೀವನವು ಆರ್ಥಿಕವಾಗಿ ಭದ್ರತೆಯಿಂದ ಕೂಡಿರಲಿ ಎಂಬ ಸದ್ದುದೇಶದಿಂದ ಸಾರಿಗೆ ಸುರಕ್ಷಾ ಯೋಜನೆಯನ್ನು ಜಾರಿಗೊಳಿಸಿರುವುದಾಗಿ ತಿಳಿಸಿದರು. ಸಾರಿಗೆ ಸಿಬ್ಬಂದಿಗಳು ಹಗಲು ಇರುಳು ಸಂಸ್ಥೆಗಾಗಿ ಶ್ರಮಿಸಿರುವುದರಿಂದ ಸಾರಿಗೆ ಸಂಸ್ಥೆಯು ಇಂದು ಉನ್ನತ ಸ್ಥಾನದಲ್ಲಿರುತ್ತದೆ. ಮೃತ ಸಿಬ್ಬಂದಿಗಳ ಕುಟುಂಬವನ್ನು ನೋಡಿಕೊಳ್ಳುವುದು ಸಂಸ್ಥೆಯ ಜವಾಬ್ದಾರಿಯಾಗಿದೆ. ಈ ನಿಟ್ಟಿನಲ್ಲಿ ಮೃತರ ಅವಲಂಬಿತರಿಗೆ ಈಗಾಗಲೇ ನಾಲ್ಕು ನಿಗಮಗಳಲ್ಲಿ ಅನುಕಂಪದ ಆಧಾರದ ಮೇಲೆ 1000 ನೌಕರಿ ನೀಡಿರುವುದಾಗಿ ತಿಳಿಸಿದರು.

ಇಂದು ವಿತರಿಸಲಾಗಿರುವ ಪರಿಹಾರದ ಮೊತ್ತವನ್ನು ಸೂಕ್ತ ರೀತಿಯಲ್ಲಿ ಸದ್ಬಳಕೆ ಮಾಡಿಕೊಳ್ಳಬೇಕು ಮಕ್ಕಳ ವಿದ್ಯಾಬ್ಯಾಸ, ಮನೆ ನಿರ್ಮಾಣ ಮತ್ತು ಇತರೆ ಶುಭ ಕಾರ್ಯಗಳಿಗೆ ಸದುಪಯೋಗ ಪಡಿಸಿಕೊಳ್ಳುವಂತೆ ತಿಳಿಸಿದರು. ಬಡ್ಡಿ ವ್ಯಾಮೋಹಕ್ಕೆ ಒಳಗಾಗಿ ಪರಿಹಾರ ಧನವನ್ನು ಯಾರಿಗೂ ನೀಡದಂತೆ ಕಿವಿ ಮಾತು ಹೇಳಿದರು. ಹಣವಿದ್ದರೆ ಎಲ್ಲರು ನೆಂಟರೆ ಆದರೆ ಸೂಕ್ತವಾದ ರೀತಿಯಲ್ಲಿ ಹಣ ಬಳಕೆ ಮಾಡಿಕೊಳ್ಳಲು ತಿಳಿಸಿದರು.

ಕಾರ್ಮಿಕರ ಆರೋಗ್ಯವನ್ನು ಕಾಪಾಡುವ ದೃಷ್ಟಿಯಿಂದ ಕೆಎಸ್‌ಆರ್‌ಟಿಸಿ ಆರೋಗ್ಯ ಯೋಜನೆಯನ್ನು ಕೂಡ ಜಾರಿಗೆ ತಂದಿದ್ದು, ರಾಜ್ಯಾದಾದ್ಯಂತ 300 ಕ್ಕೂ ಅಧಿಕ ಆಸ್ಪತ್ರೆಗಳಲ್ಲಿ ಉಚಿತವಾಗಿ ಚಿಕಿತ್ಸೆ ಪಡೆಯಲು ಅನುವು ಮಾಡಿಕೊಟ್ಟಿದ್ದು, ಈವರೆಗೂ 56,000 ಕ್ಕೂ ಹೆಚ್ಚು ಸಿಬ್ಬಂದಿ/ಅವಲಂಬಿತರು ಚಿಕಿತ್ಸೆ ಪಡೆದಿರುವುದಾಗಿ ತಿಳಿಸಿದರು.

ಇದೇ ಪ್ರಪ್ರಥಮ ಬಾರಿಗೆ ನಿಗಮದ ವಾಹನದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಅಪಘಾತಕ್ಕೆ ಒಳಪಟ್ಟು, ಬಲಗಾಲಿನ ಮಂಡಿಯ ಕೆಳಗೆ ಕಾಲನ್ನು ಕಳೆದುಕೊಂಡ ಸುನಿಲ್ ಕುಮಾರ್ ಬಿ.ಡಿ., ಚಾಲಕ–ಕಂ–ನಿರ್ವಾಹಕ, ಬಿಲ್ಲೆ ಸಂಖ್ಯೆ. 1624, ಅರಕಲಗೂಡು ಘಟಕ, ಹಾಸನ ವಿಭಾಗ ರವರಿಗೆ ಪರಿಹಾರವಾಗಿ ರೂ.25.00 ಲಕ್ಷಗಳನ್ನು ವಿತರಿಸಲಾಯಿತು.

ಇದಲ್ಲದೆ ಅವರಿಗೆ ದಿನಾಂಕ: 25–03–24 ರಿಂದ 09–12–24 ರವರೆಗೆ 08 ತಿಂಗಳು 14 ದಿನಗಳ ಅವಧಿಗೆ ಐ.ಓ.ಡಿ ನೀಡಲಾಗಿದೆ.

ಸಂಸ್ಥೆಯ ವತಿಯಿಂದ ಪೂರ್ಣ ವೈದ್ಯಕೀಯ ವೆಚ್ಚ ರೂ.4,85,762–00 ಗಳನ್ನು ಭರಿಸಲಾಗಿದೆ ಹಾಗೂ ಸದರಿ ನೌಕರರಿಗೆ ಲಘು ಹುದ್ದೆ ನೀಡಿ ತಾಂತ್ರಿಕ ಸಹಾಯಕ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸಲು ಅನುವು ಮಾಡಿಕೊಡಲಾಗಿದೆ.

ತನ್ನ ಸಿಬ್ಬಂದಿಗಳ ಅವಲಂಬಿತರ ಜೀವನಕ್ಕೆ ಆರ್ಥಿಕ ಭದ್ರತೆ ಒದಗಿಸುವ ಉದ್ದೇಶದಿಂದ ಕರ್ತವ್ಯದಲ್ಲಿರುವಾಗ ಅಥವಾ ಕರ್ತವ್ಯದಲ್ಲಿಲ್ಲದ ಸಂದರ್ಭದಲ್ಲಿ ಅಪಘಾತದಿಂದ ಮೃತಪಟ್ಟಲ್ಲಿ ರೂ.1 ಕೋಟಿ ಅಪಘಾತ ವಿಮಾ ಪರಿಹಾರ ಒದಗಿಸುವ ಸಾರಿಗೆ ಸುರಕ್ಷಾ ಅಪಘಾತ ವಿಮಾ ಯೋಜನೆಯನ್ನು ಜಾರಿಗೆ ತರಲಾಗಿದೆ.

ಇದುವರೆವಿಗೂ 24 ನೌಕರರ ಕುಟುಂಬದವರಿಗೆ ತಲಾ ರೂ. 1 ಕೋಟಿಗಳ ಅಪಘಾತ ವಿಮಾ ಮೊತ್ತವನ್ನು ಈಗಾಗಲೇ ವಿತರಿಸಲಾಗಿದೆ. ಇಂದು, ಕರ್ತವ್ಯದಲ್ಲಿರುವಾಗ ಅಪಘಾತಕ್ಕೆ ಒಳಪಟ್ಟು ಮೃತಪಟ್ಟ ಇಬ್ಬರು ಸಿಬ್ಬಂದಿಗಳ ಅವಲಂಬಿತರಿಗೆ ತಲಾ ರೂ. 1 ಕೋಟಿ ಚೆಕ್ ನೀಡಲಾಗಿದೆ.* ಈವರೆಗೂ 26 ಸಿಬ್ಬಂದಿಗಳ ಅವಲಂಭಿತರಿಗೆ ಒಟ್ಟಾರೆ ರೂ.26 ಕೋಟಿ ಪರಿಹಾರ ನೀಡಲಾಗಿದೆ.

ಕರಾರಸಾ ನಿಗಮ ವ್ಯವಸ್ಥಾಪಕ ನಿರ್ದೇಶಕ ಅನ್ಬುಕುಮಾರ್ ವಿ ಮಾತನಾಡಿ, ಸಾರಿಗೆ ಮತ್ತು ಮುಜರಾಯಿ ಸಚಿವರು ಹೇಳಿರುವ ಕಿವಿಮಾತನ್ನು ಚಾಚೂತಪ್ಪದೆ ಪಾಲಿಸುವಂತೆ ತಿಳಿಸಿದರು. ಹಣವನ್ನು ಸದುಪಯೋಗಪಡಿಸ ಕೊಳ್ಳಿ, ಯಾರನ್ನು ನಂಬಿ ದುಡ್ಡನ್ನು ಕಳೆದುಕೊಳ್ಳಬೇಡಿ. ಸಂಸ್ಥೆ ಸದಾ ತಮ್ಮೊಡನೆ ಇದೆ ಎಂದು ತಿಳಿಸುತ್ತಾ, ಸಚಿವರು, ಮಾನ್ಯ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು, ಕರಾರಸಾ ನಿಗಮ ರವರ ಮಾರ್ಗದರ್ಶನದಂತೆ, ನಿಗಮದಲ್ಲಿ ಹತ್ತು–ಹಲವು ಕಾರ್ಮಿಕ ಕಲ್ಯಾಣ ಯೋಜನೆಯನ್ನು ಜಾರಿಗೆ ತಂದಿದ್ದು, ಈ ಯೋಜನೆಗಳನ್ನು ಸದ್ಬಳಕೆ ಮಾಡಿಕೊಳ್ಳುವಂತೆ ತಿಳಿಸಿದರು. ಆರ್. ರಾಮಚಂದ್ರನ್, ವ್ಯವಸ್ಥಾಪಕ ನಿರ್ದೇಶಕರು, ಬೆಂ.ಮ.ಸಾ.ಸಂಸ್ಥೆ, ಡಾ. ನಂದಿನಿದೇವಿ, ನಿರ್ದೇಶಕರು (ಸಿಮತ್ತು ಜಾ), ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಉಕ್ಕು ವಲಯದಲ್ಲಿನ ಸರಕು ಸಾಗಣೆ ವೆಚ್ಚ ಶೇ.8ಕ್ಕೆ ಇಳಿಸುವ ಅಗತ್ಯವಿದೆ

**ಮುಂಬಯಿ,ಏ.26:** ಉಕ್ಕು ವಲಯದಲ್ಲಿನ ಲಾಜಿಸ್ಟಿಕ್ಸ್ ವೆಚ್ಚವನ್ನು ಈಗಿರುವ ಶೇ.14ರಿಂದ ಸ್ಪರ್ಧಾತ್ಮಕ ದರವಾದ ಶೇ.8ಕ್ಕೆ ಇಳಿಸುವ ಅಗತ್ಯವಿದೆ ಬೃಹತ್ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲಹೇಳಿದ್ದಾರೆ.



ಕೇಂದ್ರ ಸರ್ಕಾರದ ಉಕ್ಕು ಸಚಿವಾಲಯ ಬಾಂಬೆ ಎಕ್ಸಿಬಿಷನ್ ಸೆಂಟರ್ನಲ್ಲಿ ಆಯೋಜಿಸಿದ್ದ 6ನೇ ವರ್ಷದ 'ಇಂಡಿಯಾ ಸ್ಟೀಲ್–25 ಅಂತಾರಾಷ್ಟ್ರೀಯ ಪ್ರದರ್ಶನ ಮತ್ತು ವಾಣಿಜ್ಯ ಸಮಾವೇಶದ ಭಾಗವಾಗಿ ಏರ್ಪಡಿಸಿದ್ದ 'ಕರ್ನಾಟಕದಲ್ಲಿನ ಉಕ್ಕು ವಲಯದ ಭವಿಷ್ಯ' ಕುರಿತ ದುಂಡು ಮೇಜಿನ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದರು.ಕರ್ನಾಟಕ ಸರ್ಕಾರ ಕ್ಲಸ್ಟರ್ ಆಧರಿತ ಕೈಗಾರಿಕಾ ಬೆಳವಣಿಗೆ, ವಿಶ್ವ ದರ್ಜೆಯ ಲಾಜಿಸ್ಟಿಕ್ಸ್ ಮೂಲಸೌಕರ್ಯ ಮತ್ತು ಸಮಗ್ರ ಕೈಗಾರಿಕಾ ಕಾರಿಡಾರುಗಳ ಅಭಿವೃದ್ಧಿಗೆ ಹಲವು ರಚನಾತ್ಮಕ ಉ ಪಕ್ರಮಗಳನ್ನು ತೆಗೆದುಕೊಂಡಿದೆ ಎಂದು ತಿಳಿಸಿದರು.

ರಾಜ್ಯದ ಬಳ್ಳಾರಿ, ಚಿತ್ರದುರ್ಗ ಮತ್ತು ಸಂಡೂರು ಪ್ರದೇಶಗಳಲ್ಲಿನ ಕಬ್ಬಿಣದ ಅದಿರಿನ ನಿಕ್ಷೇಪಗಳು ಭಾರತದ ಮೆಟಲರ್ಜಿ ಆಧರಿತ ಆರ್ಥಿಕತೆಯಲ್ಲಿ ಪ್ರಮುಖ ಪಾತ್ರ ವಹಿಸುತ್ತಿವೆ. ದೇಶದ ಉಕ್ಕು ಉತ್ಪಾದನೆಯಲ್ಲಿ ಕರ್ನಾಟಕದ ಪಾಲು ಶೇ.15ರಷ್ಟಿದೆ. ಜತೆಗೆ ಉಕ್ಕು ಉದ್ಯಮದ ದೈತ್ಯ ಕಂಪನಿಗಳಾಸ ಜಿಂದಾಲ್ ಸ್ಟೀಲ್ಸ್, ಕಲ್ಯಾಣಿ ಸ್ಟೀಲ್ಸ್, ಕಿರ್ಲೋಸ್ಕರ್ ಫೆರೋಸ್ ಮತ್ತು ಬಲ್ಡೋಟ ಉದ್ಯಮ ಸಮೂಹಗಳು ರಾಜ್ಯದಲ್ಲಿ ನೆಲೆಯೂರಿವೆ ಎಂದು ತಿಳಿಸಿದ್ದಾರೆ.

ಉದ್ಯಮ ಬೆಳವಣಿಗೆಗೆ ಮೂಲಸೌಕರ್ಯ, ಬಂದರುಗಳು, ಕೈಗಾರಿಕಾ ಕ್ಲಸ್ಟರುಗಳು, ಟ್ರಕ್ ಟರ್ಮಿನಲ್ಲುಗಳು ಮತ್ತು ನಾನಾ ಬಗೆಯ ಸಾರಿಗೆ ವ್ಯವಸ್ಥೆಯ ಸಂಪರ್ಕ ಜಾಲಗಳು ಅತ್ಯಗತ್ಯವಾಗಿ ಬೇಕಾಗುತ್ತವೆ. ಈ ನಿಟ್ಟಿನಲ್ಲಿ ಕೈಗಾರಿಕಾ ಮೂಲಸೌಕರ್ಯದ ಅಭಿವೃದ್ಧಿಯ ಸಲುವಾಗಿ ಕೇಂದ್ರ ಸರ್ಕಾರವು ಈಗ ಕೊಡುತ್ತಿರುವುದಕ್ಕಿಂತಲೂ ಹೆಚ್ಚಿನ ಸಹಕಾರವನ್ನು ನಮಗೆ ಕೊಡಬೇಕು ಎಂದು ಮನವಿ ಮಾಡಿಕೊಂಡಿದ್ದಾರೆ. ಉದ್ದೇಶಿತ ಹುಬ್ಬಳ್ಳಿ–ಅಂಕೋಲಾ ರೈಲ್ವೆ ಮಾರ್ಗದ ಕನಸು ನನಸಾದರೆ, ಬಂದರುಗಳಿಂದ ಒಳನಾಡಿಗೆ ಒಳ್ಳೆಯ ಸಂಪರ್ಕ ಸಾಧ್ಯವಾಗುತ್ತದೆ. ಇನ್ನೊಂದೆಡೆಯಲ್ಲಿ ಹಲವು ರಸ್ತೆಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಮೇಲ್ದರ್ಜೆಗೆ ಏರಿಸಲಾಗುತ್ತಿದೆ.

ಬೆಂಗಳೂರಿನಲ್ಲಿ ಅಸ್ತಿತ್ವಕ್ಕೆ ಬರುತ್ತಿರುವ ಮಲ್ಟಿ–ಮೋಡಲ್ ಲಾಜಿಸ್ಟಿಕ್ಸ್ ಪಾರ್ಕಿನಿಂದ ಬೃಹತ್ ಪ್ರಮಾಣದ ಸರಕು ಸಾಗಣೆಗೆ ಅನುಕೂಲವಾಗಲಿದೆ. ಅಲ್ಲದೆ ನವ ಮಂಗಳೂರು ಬಂದರಿನಿಂದ ರಫ್ತಾಗುತ್ತಿರುವ ಉಕ್ಕು ಸ್ಥಳೀಯ ಮತ್ತು ಜಾಗತಿಕ ಪೂರೈಕೆ ಸರಪಳಿಯಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ ಎಂದು ವಿವರಿಸಿದ್ದಾರೆ.

**ಚೆನ್ನೈ–ಬೆಂಗಳೂರು ಕೈಗಾರಿಕಾ ಕಾರಿಡಾರ್ ಮತ್ತು ಬೆಂಗಳೂರು–ಮುಂಬಯಿ ಆರ್ಥಿಕ ಕಾರಿಡಾರ್ ಯೋಜನೆಗಳು ದಕ್ಷಿಣ ಮತ್ತು ಪಶ್ಚಿಮ ಭಾರತಗಳನ್ನು ಮತ್ತಷ್ಟು ಹತ್ತಿರಕ್ಕೆ ತರಲಿವೆ. ಇವು ಈ ಭಾಗಗಳಲ್ಲಿರುವ ಕೈಗಾರಿಕಾ ನೆಲೆಗಳನ್ನು ಬೆಸೆಯಲಿದ್ದು, ಸರಕು ಸಾಗಣೆಗೆ ಈಗ ಬೇಕಾಗುತ್ತಿರುವ ಸಮಯವನ್ನು ಸಾಕಷ್ಟು ಕಡಿಮೆ ಮಾಡಲಿವೆ. ಕರ್ನಾಟಕ ಸರ್ಕಾರ ಡಿಜಿಟಲ್ ಸೌಲಭ್ಯ ಮತ್ತು ಸುಸ್ಥಿರ ಮಾದರಿಯ ಸರಕು ಸಾಗಣೆ ಕಾರ್ಯ ಪರಿಸರವನ್ನು ಸೃಷ್ಟಿಸಲು ಬದ್ಧವಾಗಿದೆ. ಇದರ ಭಾಗವಾಗಿ ಸರಕು ಸಾಗಣೆ ಕಾರಿಡಾರ್, ಬಂದರುಗಳ ಆಧುನೀಕರಣ, ಒಳನಾಡು ಜಲಸಾರಿಗೆ ಅಭಿವೃದ್ಧಿಯನ್ನು ಮಾಡಲಾಗುತ್ತಿದೆ ಎಂದು ಪಾಟೀಲ ಹೇಳಿದ್ದಾರೆ**

# ಸರ್ಕಾರಿ ಗೌರವದೊಂದಿಗೆ ಬೇಗಾನೆ ರಾಮಯ್ಯ ಅಂತ್ಯಕ್ರಿಯೆ

**ಶಿವಮೊಗ್ಗ,ಏ.26:** ಮಾಜಿ ಸಚಿವ ಬೇಗಾನೆ ರಾಮಯ್ಯ ಅವರ ಅಂತ್ಯಕ್ರಿಯೆ ನಗರ ಸಮೀಪದ ಹೊಸಹಳ್ಳಿಯ ಸೀತಾ ಫಾರ್ಮ್‌ನಲ್ಲಿ ಶುಕ್ರವಾರ ಸಂಜೆ ಸಕಲ ಸರ್ಕಾರಿ ಗೌರವಗಳೊಂದಿಗೆ ನಡೆಯಿತು.



ವಿಧಾನಸಭಾಧ್ಯಕ್ಷ ಯು.ಟಿ.ಖಾದರ್ ಅಂತ್ಯಕ್ರಿಯೆ ಸಂದರ್ಭದಲ್ಲಿ ಹಾಜರಿದ್ದು ಅಪರೂಪದ ರಾಜಕಾರಣಿಗೆ ಅಂತಿಮ ನಮನ ಸಲ್ಲಿಸಿದರು. ಬೆಂಗಳೂರಿನ ಆಸ್ಪತ್ರೆಯಲ್ಲಿ ಮೃತಪಟ್ಟ ಬೇಗಾನೆ ರಾಮಯ್ಯ ಅವರ ಪಾರ್ಥಿವ ಶರೀರವನ್ನು ಶುಕ್ರವಾರ ಬೆಳಗ್ಗೆ ಅವರ ನೆಚ್ಚಿನ ಸೀತಾ ಫಾರ್ಮ್‌ಗೆ ತರಲಾಯಿತು. ಬೆಳಗ್ಗೆಯಿಂದಲೇ ಅನೇಕರು ಭೇಟಿ ನೀಡಿ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದರು. ಶೃಂಗೇರಿ, ಕೊಪ್ಪ, ಎನ್. ಆರ್.ಪುರ ಭಾಗದ ಅನೇಕ ಮುಖಂಡರು ಜಗಮಿಸಿ ಅಂತಿಮ ನಮನ ಸಲ್ಲಿಸಿದರು. ಸಚಿವ ಮಧು ಬಂಗಾರಪ್ಪ, ಶಿವಮೊಗ್ಗ ಶಾಸಕ ಎಸ್.ಎನ್.ಚನ್ನಬಸಪ್ಪ, ಶೃಂಗೇರಿ ಶಾಸಕ ಟಿ.ಡಿ.ರಾಜೇಗೌಡ, ಮಾಜಿ ಶಾಸಕ ಡಿ.ಎನ್.ಜೀವರಾಜ್, ಗೌರಿಗದ್ದೆಯ ವಿನಯ್ ಗುರೂಜಿ ಮುಂತಾದವರು ಅಂತಿಮ ದರ್ಶನ ಪಡೆದರು. ರಾಮಯ್ಯ ಅವರ ಪುತ್ರ ಅಂಜನ್ ಬೇಗಾನೆ. ಅನಿವಾಸಿ ಭಾರತೀಯ ಉಪಾಧ್ಯಕ್ಷೆ ಡಾ.ಆರತಿ ಕೃಷ್ಣ. ರಾಮಯ್ಯ ಅವರ ಪತ್ನಿ ಸೀತಾ ಸೇರಿದಂತೆ ಕುಟುಂಬದವರು ಅಂತ್ಯ ಸಂಸ್ಕಾರದ ಹಾಜರಿದ್ದರು.

# ಕರ್ನಾಟಕದಲ್ಲಿ 92 ಪಾಕಿಸ್ತಾನದ ಪ್ರಜೆಗಳು ವಾಸ: ಇಂದು ಸ್ವದೇಶಕ್ಕೆ

**ಬೆಂಗಳೂರು, ಏ.26:** ಅಧಿಕೃತವಾಗಿ ಕರ್ನಾಟಕದಲ್ಲಿ ಒಟ್ಟು 92 ಪಾಕ್ ಪ್ರಜೆಗಳು ವಾಸವಾಗಿರುವುದು ದೃಢಪಟ್ಟಿದ್ದು, ಅವರಲ್ಲಿ ಕೆಲವರು ಕೇಂದ್ರ ಸರ್ಕಾರದ ಆದೇಶದಂತೆ ಇನ್ನೆರಡು ದಿನಗಳಲ್ಲಿ ಭಾರತವನ್ನೇ ತೊರೆಯಬೇಕಾಗಿದೆ. ನಗರದಲ್ಲಿ 4 ಪಾಕ್ ವಲಸಿಗರಿದ್ದು ರಾಜ್ಯದ ಇತರ ಭಾಗಗಳಲ್ಲಿ ಒಟ್ಟು 88 ಪಾಕಿಸ್ತಾನದ ಪ್ರಜೆಗಳಿದ್ದಾರೆ. ಇವರಲ್ಲಿ 88 ಮಂದಿ ದೀರ್ಘಕಾಲೀನ ಹಾಗೂ ಉಳಿದವರು ಅಲ್ಪ ಕಾಲೀನ ವೀಸಾ ಪಡೆದುಕೊಂಡಿದ್ದಾರೆ.

ಅಲ್ಪ ಕಾಲೀನ ವೀಸಾ ಪಡೆದಿರುವ ಪಾಕ್ ವಲಸಿಗರೂ ಸಹ ಭಾರತ ದೇಶ ತೊರೆಯಲೇಬೇಕಾಗಿರುವುದರಿಂದ ಬೇರೆ ಬೇರೆ ವೀಸಾದಲ್ಲಿ ಕರ್ನಾಟಕ ರಾಜ್ಯಕ್ಕೆ ಬಂದಿರುವ ಪಾಕ್ ವಲಸಿಗರು ನಾಳೆಯೊಳಗೆ ಭಾರತ ತೊರೆಯಬೇಕಾಗಿದೆ. ಇನ್ನು ಮೆಡಿಕಲ್ ವೀಸಾದಲ್ಲಿ ಬಂದಿರುವವರು ಏಪ್ರಿಲ್ 27ರೊಳಗೆ ದೇಶ ಬಿಡಬೇಕಾಗಿದೆ.

ಒಟ್ಟಾರೆ ಕರ್ನಾಟಕ ರಾಜ್ಯದಲ್ಲಿರುವ 92 ಪಾಕ್ ಪ್ರಜೆಗಳು ಪಾಸ್ಪೋರ್ಟ್ ಹೊಂದಿದ್ದು ಅಧಿಕೃತವಾಗಿ ಕರ್ನಾಟಕದಲ್ಲಿ ನೆಲೆಸಿರುವುದು ಪತ್ತೆಯಾಗಿದೆ.

ಈ ಎಲ್ಲಾ ಪಾಕ್ ವಲಸಿಗರಿಗೆ ಈಗಾಗಲೇ ನೋಟೀಸ್ ಜಾರಿ ಮಾಡಿದ್ದು, ನಿಗದಿತ ಅವಧಿಯೊಳಗೆ ಭಾರತ ತೊರೆದು ಹೋಗುವಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಅದೇ ರೀತಿ ಬೆಂಗಳೂರು ನಗರದ ವಿವಿಧ ಭಾಗಗಳಲ್ಲಿರುವ ನಾಲ್ವರು ಪಾಕ್ ವಲಸಿಗರಿಗೂ ನೋಟೀಸ್ ಜಾರಿ ಮಾಡಲಾಗಿದೆ. ಈಗ ಪತ್ತೆಯಾಗಿರುವ 92 ಮಂದಿಯೂ ಅಧಿಕೃತ ವಲಸೆಗಾರರಾಗಿದ್ದಾರೆ. ಆದರೆ, ಅಕ್ರಮವಾಗಿ ಕರ್ನಾಟಕ ರಾಜ್ಯದಲ್ಲಿ ಬೀಡುಬಿಟ್ಟಿರುವ ಅಕ್ರಮ ಪಾಕಿಸ್ತಾನದ ವಲಸಿಗರ ಸಂಖ್ಯೆ ಇನ್ನೂ ದೃಢಪಟ್ಟಿಲ್ಲ, ಮುಂದಿನ ದಿನಗಳಲ್ಲಿ ಅವರನ್ನು ಪತ್ತೆ ಹಚ್ಚಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಪೊಲೀಸ್ ಮೂಲಗಳು ಮಾಹಿತಿ ನೀಡಿವೆ. ರಾಜ್ಯದ ಕೆಲವು ಮುಸ್ಲಿಂ ಕುಟುಂಬಗಳು ಹಲವು ವರ್ಷಗಳಿಂದ ಪಾಕಿಸ್ತಾನದ ಕುಟುಂಬಗಳ ಜತೆ ವೈವಾಹಿಕ ಸಂಬಂಧ ಹೊಂದಿವೆ. ಹೀಗಾಗಿ ಕರ್ನಾಟಕ ರಾಜ್ಯದಲ್ಲಿನ 88 ಮಂದಿ ಪಾಕ್ ಪ್ರಜೆಗಳಿಗೆ ವೈವಾಹಿಕ ಸಂಬಂಧ ಇದೆ. ಇವರುಗಳು ಲಾಂಗ್ ಟರ್ಮ್ ವೀಸಾಗಳನ್ನು ಪಡೆದಿದ್ದಾರೆಂದು ತಿಳಿದುಬಂದಿದೆ. ಶೈಕ್ಷಣಿಕ ವೀಸಾ ಮೇಲೆ ಬಂದಿರುವ ಪಾಕ್ ವಿದ್ಯಾರ್ಥಿಯೊಬ್ಬರು ದಾವಣಗೆರೆಯ ಮೆಡಿಕಲ್ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ. ಬೆಂಗಳೂರು ನಗರದ ಬಸವನಗುಡಿ, ಮೈಸೂರು, ಮಂಗಳೂರು, ಭಟ್ಕಳ ಸೇರಿದಂತೆ ಕರ್ನಾಟಕದ ವಿವಿಧ ಕಡೆ ಈ 88 ಮಂದಿ ಪಾಕಿಸ್ತಾನದ ಪ್ರಜೆಗಳು ವಾಸವಾಗಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಉತ್ತರ ಕನ್ನಡ ಜಿಲ್ಲೆಯಲ್ಲಿ 15 ಪಾಕಿಸ್ತಾನಿಗಳಿದ್ದು, ಅವರಲ್ಲಿ ಕೆಲವು ಪಾಕ್ ಮಹಿಳೆಯರು ಸ್ಥಳೀಯ ಯುವಕರನ್ನು ವಿವಾಹವಾಗಿದ್ದಾರೆ. ಅವರಿಗೆ ಮಕ್ಕಳು ಇರುವುದರಿಂದ ಕೇಂದ್ರ ಸರ್ಕಾರ ಹೊರಡಿಸಿರುವ ಆದೇಶ ಇಲ್ಲಿನ ಪಾಕ್ ಪ್ರಜೆಗಳಿಗೆ ಅನ್ವಯವಾಗುವುದಿಲ್ಲ ಎಂದು ಎಸ್ಪಿ ಎಂ.ನಾರಾಯಣ ತಿಳಿಸಿದ್ದಾರೆ.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಏಪ್ರಿಲ್ 27 2025, ಭಾನುವಾರ

## ಒಳಪುಟಗಳಲ್ಲಿ

ಖ್ಯಾತ ಆಧ್ಯಾತ್ಮ ಗುರು ಕೃಷ್ಣಾಜಿ ಸಮ್ಮುಖದಲ್ಲಿ ಚಿಂತನ ಕಾರ್ಯಕ್ರಮ – ಪು.5

ಭದ್ರತಾ ವೈಫಲ್ಯದಿಂದ ದಾಳಿ ಎನ್ನುವುದರಲ್ಲಿ ಹುರುಳಿಲ್ಲ: ಕೇಂದ್ರ ಸಚಿವೆ ರಕ್ಷಾ ಖಡ್ಸೆ – ಪು.6

ರಸ್ತೆ ಮೇಲೆ ಪಾಕ್ ಧ್ವಜ ಅಂಟಿಸಿದ ಭಜರಂಗದಳ–ಧ್ವಜಗಳನ್ನು ತೆರವುಗೊಳಿಸಿದ ಮುಸ್ಲಿಮ್ ಮಹಿಳೆಯರು –ಪು.7

# ರಾಜ್ಯದಲ್ಲಿರುವ ಪಾಕ್‌ನ ಪ್ರಜೆಗಳನ್ನು ವಾಪಸ್ ಕಳುಹಿಸಲು ಕ್ರಮ: ಸಿಎಂ ಸಿದ್ದರಾಮಯ್ಯ

**ಮೈಸೂರು, ಏ.26: ಕೇಂದ್ರ ಸರ್ಕಾರದ ಸೂಚನೆಯಂತೆ, ಕರ್ನಾಟಕ ರಾಜ್ಯದಲ್ಲಿರಬಹುದಾದ ಪಾಕಿಸ್ತಾನಿ ಪ್ರಜೆಗಳ ಬಗ್ಗೆ ಮಾಹಿತಿ ಕಲೆಹಾಕಿ, ಅವರನ್ನು ವಾಪಸ್ಸು ಕಳುಹಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.**



ಅವರು ಶನಿವಾರ ಮೈಸೂರಿನಲ್ಲಿ ಮಾಧ್ಯಮ ದವರೊಂದಿಗೆ ಮಾತನಾಡಿದರು. ರಾಜ್ಯದ ವಿವಿಧ ನಗರಗಳಲ್ಲಿ ಪಾಕಿಸ್ತಾನಿಗಳ ಸಂಖ್ಯೆ ಬಗ್ಗೆ ಹಾಗೂ ಬೆಂಗಳೂರಿನಲ್ಲಿ ಪಾಕಿಸ್ತಾನಿಗಳ ಹೆಚ್ಚಿನ ಸಂಖ್ಯೆಯಲ್ಲಿದ್ದು, ಈ ಬಗ್ಗೆ ಮಾಹಿತಿ ಪಡೆಯ ಲಾಗವುದು ಎಂದರು.

**ಕಾಶ್ಮೀರದಲ್ಲಿ ಭದ್ರತೆ ಹೆಚ್ಚಿಸಬೇಕಿತ್ತು:**

ಕಾಶ್ಮೀರದ ಉಗ್ರರ ದಾಳಿ ಘಟನೆಯಲ್ಲಿ ಭದ್ರತಾ ವೈಫಲ್ಯವನ್ನು ಕೇಂದ್ರ ಸರ್ಕಾರ ಒಪ್ಪಿಕೊಂಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಭೇಟಿ ನೀಡುವ ಸ್ಥಳಕ್ಕೆ ಹೆಚ್ಚಿನ ಭದ್ರತೆಯನ್ನು ಒದಗಿಸಬೇಕಿತ್ತು.ಹಿಂದೆ ಪುಲ್ವಾಮಾ ದಲ್ಲಿಯೂ 40 ಜನ ಯೋಧರು ಪ್ರಾಣ ಕಳೆದು ಕೊಂಡಿದ್ದರು. ಈ ಘಟನೆಯಲ್ಲಿ ಭದ್ರತಾ ವೈಫಲ್ಯವಾಗಿದೆ. ಕೇಂದ್ರ ಸರ್ಕಾರದವರನ್ನು ನಂಬಿ ಪ್ರವಾಸಿಗರು ಹೋಗಿದ್ದರು ಹಾಗೂ ಈಗ ಯಾವುದೇ ಕ್ರಮಗಳನ್ನು ಕೇಂದ್ರ ಕೈಗೊಂಡರೂ, ಪ್ರಾಣ ಕಳೆದುಕೊಂಡ 26 ಜನ ಮತ್ತೆ ಬದುಕಿ ಬರಲು ಸಾಧ್ಯವೇ, ಕಾಶ್ಮೀರದಲ್ಲಿ ಸಿಲುಕಿದ್ದ ಕನ್ನಡಿಗರ ರಕ್ಷಣೆಗೆ ಸಚಿವ ಸಂತೋಷ್ ಲಾಡ್ ಅವರನ್ನು ನಿಯೋಜಿಸಿದ್ದು, ಅವರು ಎಲ್ಲ ಕನ್ನಡಿಗರನ್ನು ಸುರಕ್ಷಿತವಾಗಿ ರಾಜ್ಯಕ್ಕೆ ಕರೆತಂದಿದ್ದಾರೆ ಎಂದರು.

**ನಾವು ಯುದ್ಧದ ಪರ ಇಲ್ಲ:**

ಉಗ್ರರ ದಾಳಿಗೆ ಸಂಬಂಧಿಸಿದಂತೆ, ಪಾಕಿಸ್ತಾನದ ಮೇಲೆ ಯುದ್ಧ ಸಾರುವ ಅನಿವಾರ್ಯತೆ ಇದೆಯೇ ಎಂಬ ಬಗ್ಗೆ ಪ್ರತಿಕ್ರಿಯೆ ನೀಡಿ, ಪಾಕಿಸ್ತಾನದ ಮೇಲೆ ಯುದ್ಧ ಸಾರುವ ಅಗತ್ಯವಿಲ್ಲ. ಕಾಶ್ಮೀರದ ಪ್ರದೇಶದಲ್ಲಿ ಭದ್ರತಾ ಕ್ರಮಗಳನ್ನು ಬಿಗಿಗೊಳಿಸಲು ಕ್ರಮ ಕೈಗೊಳ್ಳಬೇಕು.

ನಾವು ಯುದ್ಧದ ಪರ ಇಲ್ಲ. ಕಾಶ್ಮೀರದಲ್ಲಿ ಶಾಂತಿ ನೆಲೆಸಲು ಕೇಂದ್ರಸರ್ಕಾರ ಭದ್ರತೆಯನ್ನು ಹೆಚ್ಚಿಸಬೇಕು ಎಂದರು.

ಪ್ರಧಾನಿಯವರು ಜನರಿಗೆ ಟೋಪಿ ಹಾಕುವ ಕೆಲಸ ಮಾಡುತ್ತಿದ್ದಾರೆ ಕಾಶ್ಮೀರದ ಉಗ್ರರ ದಾಳಿಗೆ ಸಂಭಂಧಿಸಿದಂತೆ ಕರೆಯಲಾಗಿದ್ದ ಸರ್ವಪಕ್ಷ ಸಭೆಯಲ್ಲಿ ಪ್ರಧಾನಿಯವರು ಭಾಗವಹಿಸದಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಇದು ಮಹತ್ವಯುತ ಸಭೆಯಾಗಿದ್ದು, ಪ್ರಧಾನಿಯವರು ಈ ಸಭೆಯಲ್ಲಿ ಹಾಜರಿರಬೇಕಿತ್ತು. ಆದರೆ ಅವರಿಗೆ ಈ ಸಭೆಗಿಂತ ಬಿಹಾರದ ಚುನಾವಣಾ ಪ್ರಚಾರವೇ ಮುಖ್ಯವೆಂದು ಕಾಣುತ್ತದೆ. ಪ್ರಧಾನಿಯವರು ಜನರಿಗೆ ಟೋಪಿ ಹಾಕುವ ಕೆಲಸ ಮಾಡುತ್ತಿದ್ದಾರೆ ಎಂದರು. ಚಾಮರಾಜನಗರಕ್ಕೆ 20 ಬಾರಿ ಮುಖ್ಯಮಂತ್ರಿಯಾಗಿ ಭೇಟಿ ನೀಡಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು,ಚಾಮರಾಜನಗರಕ್ಕೆ ಮೊದಲ ಬಾರಿ ಭೇಟಿ ನೀಡಿದಾಗಲೇ, ಅಲ್ಲಿಗೆ ಭೇಟಿ ನೀಡಿದರೆ ಅಧಿಕಾರ ಹೋಗುತ್ತದೆಂಬ ಕಳಂಕ ತೊಡೆದುಹೋಯಿತು ಎಂದರು.

### ಪಾಕ್ ಪ್ರಜೆಗಳ ತೆರವಿಗೆ ಕ್ರಮ: ಆಯುಕ್ತ ಶರಣಪ್ಪ



**ಇದೀಗ ಕಲ್ಬುರ್ಗಿಯಲ್ಲಿದ್ದ ಐವರು ಪಾಕಿಸ್ತಾನಿ ಪ್ರಜೆಗಳು ವಾಪಸ್ ಆಗಿದ್ದಾರೆ ಎಂದು ತಿಳಿದುಬಂದಿದೆ. ಶುಕ್ರವಾರ ಸಂಜೆ ಕಲ್ಬುರ್ಗಿಯಿಂದ ಐವರು ಪಾಕಿಸ್ತಾನಿ ಪ್ರಜೆಗಳು ತೆರಳಿದ್ದಾರೆ. ಕಲ್ಬುರ್ಗಿಯ ಅಶೋಕ್ ನಗರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಪಾಕಿಸ್ತಾನ ಪ್ರಜೆಗಳು ವಾಸವಿದ್ದರು ಎನ್ನಲಾಗಿದೆ. ಇದೆ ವಿಚಾರವಾಗಿ ಕಲ್ಬುರ್ಗಿಯಲ್ಲಿ ಒಟ್ಟು 9 ಪಾಕಿಸ್ತಾನಿ ಪ್ರಜೆಗಳು ಇದ್ದಾರೆ ಎಂದು ಕಲ್ಬುರ್ಗಿಗೆ ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಮಾಹಿತಿ ನೀಡಿದರು. ಕಳೆದ 20 ವರ್ಷದಿಂದ ಕಲ್ಬುರ್ಗಿಯಲ್ಲಿ ಪಾಕಿಸ್ತಾನ ಪ್ರಜೆಗಳು ಇದ್ದಾರೆ. 9 ಪಾಕಿಸ್ತಾನ ಪ್ರಜೆಗಳ ಪೈಕಿ ಇಬ್ಬರು ದೀರ್ಘಾವಧಿ ವೀಸಾದಲ್ಲಿ ಕಲ್ಬುರ್ಗಿಯಲ್ಲೆ ನೆಲೆಸಿದ್ದಾರೆ. ಉಳಿದವರು ಪ್ರವಾಸಿ ವೀಸಾದಡಿ ಇದ್ದಾರೆ. ಇನ್ನು ಒಬ್ಬರು ಮಾತ್ರ ಅಮೆರಿಕದಲ್ಲಿದ್ದಾರೆ ಎಂದು ಕಲ್ಬುರ್ಗಿಯಲ್ಲಿ ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಹೇಳಿಕೆ ನೀಡಿದರು.**

# ಅಂಬೇಡ್ಕರ್ ವಿರುದ್ಧ ಮಾತನಾಡುವುದನ್ನು ಸಹಿಸುವುದಿಲ್ಲ: ಖರ್ಗೆ ಕಿಡಿ

**ಬೆಂಗಳೂರು, ಏ.26:** ದಲಿತರು ತಿರುಗಿಬಿದ್ದರೆ ಯಾರೂ ತಡೆಯಲು ಸಾಧ್ಯವಿಲ್ಲ. ನಾನಾ ಕಾರಣಗಳಿಗೆ ಅವರು ಸುಮ್ಮನಿದ್ದಾರೆ ಎಂದು ಬಾಬಾ ಸಾಹೇಬ್ ಅಂಬೇಡ್ಕರ್ ವಿರುದ್ಧ ಮಾತನಾಡುವುದನ್ನು ಸಹಿಸಲು ಸಾಧ್ಯವಿಲ್ಲ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ. ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ದೆಹಲಿಯಲ್ಲಿ ಇದ್ದಾಗ ಬೆಂಗಳೂರು ಸುದ್ದಿ ಗಮನಿಸುತ್ತಿದ್ದೇನೆ. ಕೆಲವು ಸಂವಿಧಾನ ರಚನೆಯಲ್ಲಿ ಅಂಬೇಡ್ಕರ್ ಪಾತ್ರ ಇರಲಿಲ್ಲ. ನಮ್ಮವರೂ ಇದ್ದಾರೆ ಎಂಬ ಹೇಳಿಕೆಗಳನ್ನು ನೀಡಿದ್ದಾರೆ. ಆದರೆ ಸಂವಿಧಾನಸ ರಚನೆಯಲ್ಲಿ ಅಂಬೇಡ್ಕರ್ ಪಾತ್ರ ಅತ್ಯಂತ ಪ್ರಮುಖವಾಗಿದ್ದು, ಇತರರ ಕೊಡುಗೆ ಇರಲಿಲ್ಲ ಎಂದರು.ಎಲ್ಲಾ ಸಮುದಾಯಗಳನ್ನು ಸಮಾನವಾಗಿ ನೋಡಿ ಸಂವಿಧಾನದಲ್ಲಿ ಸಮಾನತೆ ಸಾರಿದ ಅಂಬೇಡ್ಕರ್ ಮಾನವತಾವಾದಿ. ಅಂತಹವರ ಬಗ್ಗೆ ಬಾಯಿಗೆ ಬಂದಂತೆ ಹೇಳಿಕೆ ನೀಡುವುದನ್ನು ನಿಲ್ಲಿಸಬೇಕು. ದಲಿತರು ಸುಮ್ಮನಿದ್ದಾರೆ ಎಂದು ಭಾವಿಸಬೇಡಿ. ಒಂದು ವೇಳೆ ಅವರು ತಿರುಗಿಬಿದ್ದರೆ ಅವರನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ ಎಂದು ಗುಡುಗಿದರು.ಕಾಶ್ಮೀರದಲ್ಲಿ ಧರ್ಮ ನೋಡಿ ಉಗ್ರರು ಹತ್ಯೆ ಮಾಡಿರುವುದು ಖಂಡನೀಯ. ಇಂತಹ ದಾಳಿಗಳನ್ನು ಕಾಂಗ್ರೆಸ್ ಖಂಡಿಸುತ್ತದೆ. ಇಂತಹ ಉಗ್ರರ ವಿರುದ್ಧ ಯಾವುದೇ ಕ್ರಮ ಕೈಗೊಳ್ಳಲು ಕೇಂದ್ರಕ್ಕೆ ಬೆಂಬಲ ನೀಡಿದ್ದೇವೆ ಎಂದು ಅವರು ಸ್ಪಷ್ಟಪಡಿಸಿದರು.ಸರ್ವ ಪಕ್ಷ ಸಭೆ ಕರೆದಿದ್ದ ಪ್ರಧಾನಿ ಮೋದಿಯೇ ಸಭೆಗೆ ಬರಲಿಲ್ಲ. ಈ ರೀತಿಯ ನಡೆ ಸರಿಯಲ್ಲ. ಮಹತ್ವ ಪಡೆದಿದ್ದ ಸರ್ವಪಕ್ಷ ಸಭೆಯಲ್ಲಿ ಪಾಲ್ಗೊಳ್ಳದ ಮೋದಿ ಬಿಹಾರದಲ್ಲಿ ಚುನಾವಣಾ ಪ್ರಚಾರಕ್ಕೆ ತೆರಳಿದ್ದರು. ಇದು ಅವರ ದೇಶಪ್ರೇಮ ತೋರಿಸುತ್ತದೆ ಎಂದು ಖರ್ಗೆ ಅಸಮಾಧಾನ ವ್ಯಕ್ತಪಡಿಸಿದರು. ಸಭೆಯಲ್ಲಿ ಉಗ್ರರ ದಾಳಿ ಹಿಂದೆ ಭದ್ರತಾ ಲೋಪ ಆಗಿದೆ ಎಂದು ಕೇಂದ್ರ ಒಪ್ಪಿಕೊಂಡಿದೆ. ಇನ್ನು ಮುಂದೆ ಈ ರೀತಿ ಆಗದಂತೆ ನೋಡಿಕೊಳ್ಳುತ್ತೇವೆ ಎಂದು ಸಭೆಯಲ್ಲಿ ಅಮಿತ್ ಶಾ ಹೇಳಿದ್ದಾರೆ. ಆದರೆ ಸಭೆ ಕರೆದಿದ್ದ ಮೋದಿ. ಘಟನೆಯ ಮಾಹಿತಿಯನ್ನು ಪ್ರತಿಪಕ್ಷಗಳಿಗೆ ನೀಡಬೇಕಿತ್ತು. ದಾಳಿಯ ಹೊಣೆ ಹೊತ್ತಿದ್ದು ಯಾರು? ಘಟನೆ ಹೇಗೆ ಸಂಭವಿಸಿತು. ಏನೆಲ್ಲಾ ಲೋಪ ಆಗಿದೆ? ಮುಂದೆ ಯಾವ ರೀತಿಯ ಕ್ರಮ ಕೈಗೊಳ್ಳಬೇಕು ಎಂದು ವಿವರಣೆ ನೀಡದೇ ಚುನಾವಣಾ ಪ್ರಚಾರಕ್ಕೆ ತೆರಳಿದ್ದು ಸರಿಯಲ್ಲ ಎಂದು ಹೇಳಿದರು.



ಬೆಂಗಳೂರಿನ ಡಾ. ಬಿ.ಆರ್. ಅಂಬೇಡ್ಕರ್ ಕಾಲೇಜಿನಲ್ಲಿ ಶನಿವಾರ ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮತ್ತು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಡಾ. ಬಿ.ಆರ್. ಅಂಬೇಡ್ಕರ್ ಅವರ ಕಂಚಿನ ಪ್ರತಿಮೆಯನ್ನು ಅನಾವರಣಗೊಳಿಸಿದರು. ಸಚಿವರಾದ ದಿನೇಶ್ ಗುಂಡೂರಾವ್, ಶರಣಪ್ರಕಾಶ್ ಪಾಟೀಲ್ ಮತ್ತಿತರರು ಹಾಜರಿದ್ದರು.

# ಮೇ 25: ಗ್ರಾ.ಪಂ. ಉಪಚುನಾವಣೆ

**ಬೆಂಗಳೂರು, ಏ.26: ವಿವಿಧ ಕಾರಣಗಳಿಂದ ತೆರವಾಗಿರುವ ರಾಜ್ಯದ 223 ಗ್ರಾಮ ಪಂಚಾಯತ್‌ಗಳ 265 ಸದಸ್ಯ ಸ್ಥಾನಗಳ ಉಪ ಚುನಾವಣೆಗೆ ರಾಜ್ಯ ಚುನಾವಣ ಆಯೋಗ ಮರು ವೇಳಾಪಟ್ಟಿ ಪ್ರಕಟಿಸಿದ್ದು, ಅದರಂತೆ ಮೇ 25ರಂದು ಚುನಾವಣೆ ನಡೆಯಲಿದೆ. ಈ ಹಿಂದೆ ಮೇ 11ಕ್ಕೆ ಚುನಾವಣೆ ನಿಗದಿಯಾಗಿತ್ತು. ಆದರೆ ಕಾನೂನು ಸುವ್ಯವಸ್ಥೆ ಪರಿಪಾಲನೆ ಹಾಗೂ ಇತರ ಕೆಲವು ಸಮಸ್ಯೆಗಳ ಹಿನ್ನೆಲೆಯಲ್ಲಿ ಚುನಾವಣೆ ಮುಂದೂಡುವಂತೆ ರಾಜ್ಯ ಸರಕಾರದ ಮುಖ್ಯ ಕಾರ್ಯದರ್ಶಿ ಹಾಗೂ ಕೆಲವು ಜಿಲ್ಲೆಗಳ ಜಿಲ್ಲಾಧಿಕಾರಿಗಳು ರಾಜ್ಯ ಚುನಾವಣ ಆಯೋಗಕ್ಕೆ ಮನವಿ ಮಾಡಿದ್ದರು. ಅದರಂತೆ 15 ದಿನಗಳ ಮಟ್ಟಿಗೆ ಚುನಾವಣೆ ಮುಂದೂಡಿ ಎಪ್ರಿಲ್ 21ರಂದು ಅಧಿಸೂಚನೆ ಹೊರಡಿಸಲಾಗಿತ್ತು. ಈಗ ಹೊಸ ದಿನಾಂಕ ನಿಗದಿಪಡಿಸಿ ವೇಳಾಪಟ್ಟಿ ಪ್ರಕಟಿಸಲಾಗಿದೆ.ಮೇ 5ರಂದು ಜಿಲ್ಲಾಧಿಕಾರಿಗಳು ಚುನಾವಣ ಅಧಿಸೂಚನೆ ಹೊರಡಿಸಲಿದ್ದಾರೆ. ಮೇ 14ರಂದು ನಾಮಪತ್ರ ಸಲ್ಲಿಸಲು ಕೊನೆಯ ದಿನ. ಮೇ 15ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ನಾಮಪತ್ರ ವಾಪಸ್ ಪಡೆದುಕೊಳ್ಳಲು ಮೇ 17 ಕೊನೆಯ ದಿನ. ಮೇ 25ರಂದು ಬೆಳಗ್ಗೆ 7ರಿಂದ ಸಂಜೆ 5 ಗಂಟೆವರೆಗೆ ಮತದಾನ ನಡೆಯಲಿದೆ. ಮೇ 27ರಂದು ಮತ ಎಣಿಕೆ ನಡೆಯಲಿದೆ. ಉಪ ಚುನಾವಣೆ ನಡೆಯುವ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಮೇ 5ರಿಂದ 28ರ ವರೆಗೆ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ ಎಂದು ರಾಜ್ಯ ಚುನಾವಣ ಆಯೋಗದ ಪ್ರಕಟನೆ ತಿಳಿಸಿದೆ.**

# ಪಹಲ್ಗಾಮ್ ದಾಳಿ ತನಿಖೆಗೆ ಸಿದ್ಧ: ಪಾಕ್ ಪ್ರಧಾನಿ

**ಇಸ್ಲಾಮಾಬಾದ್, ಏ. 26:** ಕಾಶ್ಮೀರ ಕಣಿವೆಯ ಪಹಲ್ಗಾಮ್ ಭಯೋತ್ಪಾದನಾ ದಾಳಿಯಿಂದ ಹೆಚ್ಚುತ್ತಿರುವ ಉದ್ವಿಗ್ನತೆಯ ಹಿನ್ನೆಲೆಯಲ್ಲಿ ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಇಂದು ಇಸ್ಲಾಮಾಬಾದ್ ಈ ದಾಳಿಯ ಬಗ್ಗೆ ?ತಟಸ್ಥ ತನಿಖೆಗೆ ಸಿದ್ಧವಾಗಿದೆ ಎಂದು ಹೇಳಿದ್ದಾರೆ. ಜಮ್ಮು ಮತ್ತು ಕಾಶ್ಮೀರ ಜಿಲ್ಲೆಯಲ್ಲಿ 26 ಜನರ ಸಾವಿಗೆ ಕಾರಣವಾದ ಭೀಕರ ಭಯೋತ್ಪಾದಕ ದಾಳಿಯ ಬಗ್ಗೆ ಅಬೋಟಾಬಾದ್ನ ಮಿಲಿಟರಿ ಅಕಾಡೆಮಿಯಲ್ಲಿ ನಡೆದ ಸಮಾರಂಭದಲ್ಲಿ ಅವರು ಮಾತನಾಡಿದ್ದಾರೆ. ಭಾರತದಲ್ಲಿ ನಡೆದ ಉಗ್ರರ ದಾಳಿಯ ಬಗ್ಗೆ ಪಾಕಿಸ್ತಾನವು ಯಾವುದೇ ತಟಸ್ಥ, ಪಾರದರ್ಶಕ ತನಿಖೆಯಲ್ಲಿ ಭಾಗವಹಿಸಲು ಮುಕ್ತವಾಗಿದೆ ಎಂದು ಹೇಳಿದ್ದಾರೆ.

ಕಾಶ್ಮೀರದ ದಾಳಿಗೆ ಕಾರಣರಾದ ದುಷ್ಕರ್ಮಿಗಳು ಮತ್ತು ?ಪಿತೂರಿ ನಡೆಸಿದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಭಾರತದ ಪ್ರಧಾನಿ ನರೇಂದ್ರ ಮೋದಿ ಪ್ರತಿಜ್ಞೆ ಮಾಡಿದ್ದರು. ಇದರ ಬೆನ್ನಲ್ಲೇ ಪಾಕಿಸ್ತಾನದ ಪ್ರಧಾನಿ ಶೆಹಬಾಜ್ ಷರೀಫ್ ಕಾಕುಲ್‌ನಲ್ಲಿರುವ ಪಾಕಿಸ್ತಾನ ಮಿಲಿಟರಿ ಅಕಾಡೆಮಿಯಲ್ಲಿ ನಡೆದ ಪಾಸಿಂಗ್–ಔಟ್ ಪೆರೇಡ್‌ನಲ್ಲಿ ಮಾತನಾಡಿದ್ದು, ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಸಹ ಉಲ್ಲೇಖಿಸಿದ್ದಾರೆ. ಇದರಲ್ಲಿ ಇಸ್ಲಾಮಾಬಾದ್ ತಟಸ್ಥ ತನಿಖೆಯಲ್ಲಿ ಭಾಗವಹಿಸಲು ಸಿದ್ಧವಾಗಿದೆ ಎಂದು ಹೇಳಿದ್ದಾರೆ. ಹಾಗೇ, ಪಿಎಂ ಷರೀಫ್ ತಮ್ಮ ಭಾಷಣದಲ್ಲಿ ನೀರನ್ನು ಪ್ರಮುಖ ಮತ್ತು ರಾಷ್ಟ್ರೀಯ ಹಿತಾಸಕ್ತಿ ಎಂದು ಬಣ್ಣಿಸಿದರು. ಪಾಕಿಸ್ತಾನವು ತನ್ನ ಜಲ ಸಂಪನ್ಮೂಲಗಳನ್ನು ರಾಜಿ ಮಾಡಿಕೊಳ್ಳಲು ಬಿಡುವುದಿಲ್ಲ ಎಂದು ಅವರು ಸೂಚಿಸಿದರು. ಸಿಂಧೂ ಜಲ ಒಪ್ಪಂದದಡಿಯಲ್ಲಿ ಪಾಕಿಸ್ತಾನಕ್ಕೆ ಸೇರಿದ ನೀರಿನ ಹರಿವನ್ನು ನಿಲ್ಲಿಸುವ, ಕಡಿಮೆ ಮಾಡುವ, ತಿರುಗಿಸುವ ಯಾವುದೇ ಪ್ರಯತ್ನಕ್ಕೆ ಸಂಪೂರ್ಣ ಬಲ ಮತ್ತು ಶಕ್ತಿಯಿಂದ ಪ್ರತಿಕ್ರಿಯಿಸಲಾಗುವುದು ಎಂದು ಅವರು ಭಾರತಕ್ಕೆ ಎಚ್ಚರಿಸಿದ್ದಾರೆ.

26 ಭಾರತೀಯ ಪ್ರವಾಸಿಗರನ್ನು ಬಲಿತೆಗೆದುಕೊಂಡ ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಭಾರತ ಸಿಂಧೂ ಜಲ ಒಪ್ಪಂದವನ್ನು ಸ್ಥಗಿತಗೊಳಿಸಿದ ನಂತರ ಅವರ ಈ ಹೇಳಿಕೆಗಳು ಹೊರಬಿದ್ದಿವೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಭಾರತವು ಸಿಂಧೂ ಜಲ ಒಪ್ಪಂದವನ್ನು ಸ್ಥಗಿತಗೊಳಿಸಲು ನೆಪವಾಗಿ ಬಳಸುತ್ತಿದೆ ಎಂದು ಷರೀಫ್ ಆರೋಪಿಸಿದರು.

# ಜನಾಕ್ರೋಶ ಹೋರಾಟ ಮಾಡುವ ಬಿಜೆಪಿಯ ಕಿಟಕಿ ಸ್ವಚ್ಛವಾಗಿದೆಯೇ? ದಾಖಲೆಯಂತೆ ಬೆಲೆ ಏರಿಕೆ ಮಾಡುತ್ತಿರುವುದೇ ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರ

**ಒಬ್ಬ ಗೃಹಿಣಿ ಹೊಸಮನೆಗೆ ಬಂದಾಗ ಕಿಟಕಿಯ ಮೂಲಕ ಎದುರು ಮನೆಯ ಗೋಡೆಯನ್ನು ನೋಡುತ್ತಿದ್ದಳು. ಆಕೆ ಯಾವಾಗಲೂ ಆ ಮನೆಯ ಗೋಡೆ ಎಷ್ಟು ಕೊಳಕಾಗಿದೆ ಎಂದು ಗಂಡನ ಬಳಿ ದೂರುತ್ತಿದ್ದಳು. ಒಂದು ದಿನ ಗೋಡೆ ಸ್ವಚ್ಛವಾಗಿದೆ ಎಂದು ಆಕೆಗೆ ಅನ್ನಿಸಿತು. ಅದನ್ನು ಗಂಡನಿಗೂ ಹೇಳಿದಳು. ಆದರೆ, ಆ ಗೋಡೆ ಮೊದಲಿನಿಂದಲೂ ಸ್ವಚ್ಛವಾಗಿಯೇ ಇತ್ತು. ನಮ್ಮ ಮನೆಯ ಕಿಟಕಿಯ ಗಾಜಿನಲ್ಲೇ ಕೊಳಕು ತುಂಬಿತ್ತು. ಅದನ್ನು ಸ್ವಚ್ಛ ಮಾಡಿದ್ದರಿಂದ ಈಗ ಗೋಡೆ ಸ್ವಚ್ಛವಾಗಿ ಕಾಣುತ್ತಿದೆ ಎಂದು ಗಂಡ ಹೇಳುತ್ತಾನೆ.**

**ಇದೊಂದು ನೀತಿ ಕಥೆ ಅಷ್ಟೆ. ಈ ಕಥೆ ರಾಜ್ಯ ಬಿಜೆಪಿಗೆ ಸರಿಯಾಗಿ ಹೊಂದುತ್ತದೆ. ತಮ್ಮ ಮನೆಯ ಕಿಟಕಿಯನ್ನೇ ಸ್ವಚ್ಛವಾಗಿಟ್ಟುಕೊಳ್ಳದ ಇವರು ಕಾಂಗ್ರೆಸ್ ಗೋಡೆ ಕೊಳಕಾಗಿದೆ ಎಂದು ಬಾಯ್ಬಡಿದುಕೊಳ್ಳುತ್ತಿದ್ದಾರೆ. ಕೊಳಕಾಗಿರುವುದು ಅವರ ಕಿಟಕಿಯೇ ಹೊರತು, ನಮ್ಮ ಗೋಡೆಯಲ್ಲ ಎಂಬುದು ಇನ್ನೂ ಅವರಿಗೆ ತಿಳಿದಿಲ್ಲ. ಈಗ ಜನಾಕ್ರೋಶ ಎಂಬ ಹೋರಾಟದ ಮೂಲಕ ರಾಜ್ಯ ರಾಜಕೀಯದಲ್ಲಿ ಸಕ್ರಿಯವಾಗಿರಲು ಬಿಜೆಪಿ ನಾಯಕರು ಮುಂದಾಗಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷರಾದ ಬಿ.ವೈ.ವಿಜಯೇಂದ್ರ, ಪ್ರತಿಪಕ್ಷ ನಾಯಕ ಆರ್.ಅಶೋಕ್ ಹಾಗೂ ಎಲ್ಲಾ ಬಿಜೆಪಿ ನಾಯಕರು ತಮ್ಮ ಕಿಟಕಿಯ ಕೊಳೆಯನ್ನು ತೆಗೆಯಲು ಯತ್ನಿಸಿದ್ದರೆ ಇಂತಹ ಹೋರಾಟದ ಅಗತ್ಯವೇ ಇರಲಿಲ್ಲ.**

ಜನಾಕ್ರೋಶದ ಹೋರಾಟದಲ್ಲಿ ಪ್ರಮುಖವಾಗಿ ಬೆಲೆ ಏರಿಕೆಯ ವಿಷಯವನ್ನು ಪ್ರಸ್ತಾಪಿಸಲಾಗಿದೆ. ವಿಪರ್ಯಾಸವೆಂದರೆ ಈ ಹೋರಾಟ ಆರಂಭವಾದ ಕೂಡಲೇ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ, ಅಡುಗೆ ಅನಿಲದ ಸಿಲಿಂಡರ್ ಬೆಲೆ 50 ರೂ. ಏರಿಕೆ ಮಾಡಿದೆ. ಇದನ್ನು ಕೂಡ ಬಿಜೆಪಿಯವರು ಹೋರಾಟದಲ್ಲಿ ಸೇರಿಸಿಕೊಳ್ಳಬಹುದಿತ್ತು!

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ನಮ್ಮ ಕಾಂಗ್ರೆಸ್ ಸರ್ಕಾರ ಪಂಚ ಗ್ಯಾರಂಟಿಗಳ ಮೂಲಕ ಪ್ರತಿ ಕುಟುಂಬಕ್ಕೆ ವಾರ್ಷಿಕ ಸುಮಾರು 55 ಸಾವಿರ ರೂ. ನೀಡುತ್ತಿದೆ. ಇವು ಕುಟುಂಬಗಳ ಆರ್ಥಿಕ ಶಕ್ತಿಯನ್ನು, ಖರೀದಿ ಸಾಮರ್ಥ್ಯವನ್ನು ಹೆಚ್ಚಿಸಿದೆ. ಇಂತಹ ಒಂದೇ ಒಂದು ಯೋಜನೆಯನ್ನು ಹಿಂದಿನ ಬಿಜೆಪಿ ಸರ್ಕಾರವಾಗಲೀ, ಕೇಂದ್ರ ಸರ್ಕಾರವಾಗಲೀ ನೀಡಿಯೇ ಇಲ್ಲ. ಈ ಯೋಜನೆಗಳ ಜೊತೆಗೆ, ಕೆಲವು ಕ್ಷೇತ್ರಗಳಲ್ಲಿ ಮಾತ್ರ ಜನರಿಗೆ ಸ್ವಲ್ಪವೂ ಹೊರೆಯಾಗದಂತೆ ಬೆಲೆ ಪರಿಷ್ಕರಣೆ ಮಾಡಲಾಗಿದೆ. ಉದಾಹರಣೆಗೆ ಹಾಲಿನ ದರವನ್ನೇ ನೋಡಿ. ಉಳಿದ ರಾಜ್ಯಗಳಿಗೆ ಹೋಲಿಸಿದರೆ ನಂದಿನಿ ಹಾಲಿನ ದರ ಈಗಲೂ ಅತಿ ಕಡಿಮೆಯೇ ಇದೆ. ಹೀಗೆ ಅಲ್ಪ ದರ ಏರಿಸಿದ್ದರೂ, ಅದರ ಲಾಭವನ್ನು ರೈತರಿಗೆ ನೀಡಲಾಗುತ್ತಿದೆ . ಇದೇ ವಿಷಯವನ್ನು ಇಟ್ಟುಕೊಂಡು ಜನರ ಮೇಲೆ ತೆರಿಗೆ ಹೊರೆ ಎಂದು ಅಪಪ್ರಚಾರ ಮಾಡುವ ಬಿಜೆಪಿ ನಾಯಕರು, ನಿಜವಾದ ಬೆಲೆ ಏರಿಕೆ ಏನು ಎಂಬುದನ್ನು ಅವರದ್ದೇ ಕೇಂದ್ರ ಸರ್ಕಾರದಲ್ಲಿ ನೋಡಬಹುದು.

**ಬೆಲೆ ಏರಿಕೆಯ ಬರೆ**

ಕಳೆದ ಹನ್ನೊಂದು ವರ್ಷಗಳಿಂದ ಕೇಂದ್ರ ಸರ್ಕಾರ ಮಾಡುತ್ತಿರುವ ಬೆಲೆ ಏರಿಕೆ ಹಾಗೂ ತೆರಿಗೆ ಹಂಚಿಕೆಯಲ್ಲಿನ ಮೋಸದ ಬಗ್ಗೆಯೂ ಜನಾಕ್ರೋಶದ ಹೋರಾಟ ಮಾಡಬಹುದು. ಅಡುಗೆ ಅನಿಲದ ಬೆಲೆ ಏರಿಕೆಯನ್ನೂ ಈಗ ರಾಜ್ಯ ಬಿಜೆಪಿ ನಾಯಕರು ಸಮರ್ಥಿಸಿಕೊಳ್ಳುತ್ತಿದ್ದಾರೆ. ಪ್ರಧಾನಿ ನರೇಂದ್ರ ಮೋದಿಯವರು ಅಮೆರಿಕಕ್ಕೆ ಹೋಗಿ ಅಲ್ಲಿನ ಅಧ್ಯಕ್ಷರಾದ ಡೊನಾಲ್ಡ್ ಟ್ರಂಪ್ ಅವರ ಸ್ನೇಹ ಬೆಳೆಸಿದರೂ, ಅವರೇನೂ ತೆರಿಗೆ ಬರೆಯನ್ನು ಹಾಕುವುದರಿಂದ ಹಿಂದಡಿ ಇಟ್ಟಿಲ್ಲ.

ಈ ತೆರಿಗೆ ಸಮರದಿಂದಾಗಿ ಕಚ್ಚಾತೈಲದ ದರ ಒಂದು ಬ್ಯಾರೆಲ್ಗೆ (159 ಲೀಟರ್) ಸುಮಾರು 10 ಡಾಲರ್ (ಅಂದಾಜು 850 ರೂ.) ಇಳಿಕೆಯಾಗಿದೆ. ಬ್ರೆಂಟ್ ಕಚ್ಚಾ ತೈಲ ದರ ಬ್ಯಾರೆಲ್‌ಗೆ 72.94 ಡಾಲರ್ ಇದ್ದು, ಈಗ 62.91 ಡಾಲರ್ಗೆ ಇಳಿದಿದೆ. ವೆಸ್ಟ್ ಟೆಕ್ಸಾಸ್ ಇಂಟರ್ಮೀಡಿಯೇಟ್ ಕಚ್ಚಾ ತೈಲ ದರ ಬ್ಯಾರೆಲ್ಗೆ 59.34 ಡಾಲರ್‌ಗೆ ಬಂದಿದೆ. ಇಷ್ಟು ದರ ಇಳಿಕೆಯಾಗಿದ್ದರೂ ಅಡುಗೆ ಅನಿಲ ದರವನ್ನು 50 ರೂ. ನಷ್ಟು ಏರಿಸಿ ಹೊರೆ ಹಾಕಿರುವುದು ಬಿಜೆಪಿಯ ಜನ ವಿರೋಧಿತನ ಎತ್ತಿ ತೋರಿಸುತ್ತದೆ. ಇದು ಕೇವಲ ಬೆಲೆ ಏರಿಕೆ ಬರೆಯಲ್ಲ, ಇದು ಬಾಸುಂಡೆ ಬರೆ.

ಜೊತೆಗೆ ಪೆಟ್ರೋಲ್–ಡೀಸೆಲ್ ಮೂಲಕ 36.58 ಲಕ್ಷ ಕೋಟಿ ರೂ. ಮೊತ್ತವನ್ನು ಕೇಂದ್ರ ಸರ್ಕಾರ ಸಂಗ್ರಹಿಸುತ್ತಿದೆ. ಇದು ಗ್ಯಾರಂಟಿಗಳಂತಹ ಯೋಜನೆಗಳ ಮೂಲಕ ಜನರನ್ನೇನೂ ಮರಳಿ ತಲುಪುತ್ತಿಲ್ಲ. ಹಾಗಾದರೆ ಈ ಹಣ ಎಲ್ಲಿ ಹೋಗುತ್ತಿದೆ ಎಂಬುದೇ ಯಕ್ಷಪ್ರಶ್ನೆ. ಕಳೆದ ಒಂದು ವರ್ಷದಲ್ಲಿ ಸಸ್ಯಾಹಾರಿ ಊಟದ ಬೆಲೆ 57% ನಷ್ಟು ಏರಿಕೆಯಾಗಿದೆ. ಅಡುಗೆಎಣ್ಣೆ, ಬೇಳೆ, ತರಕಾರಿ ಮೊದಲಾದ ಪದಾರ್ಥಗಳ ಬೆಲೆ ಗಗನಕ್ಕೇರಿದೆ. ಆರೋಗ್ಯ ಕ್ಷೇತ್ರದಲ್ಲಿ 14% ನಷ್ಟು ಹಣದುಬ್ಬರ ಕಂಡುಬಂದಿದೆ. ಈ ನಡುವೆ ಸುಧಾರಣೆಯ ಹೆಸರಲ್ಲಿ ತಂದ ಜಿಎಸ್ಟಿಯಿಂದಾಗಿ ಎಲ್ಲಾ ಕಡೆ ತೆರಿಗೆ ಕಂಡುಬಂದಿದೆ. ಸಿನಿಮಾ ನೋಡುವಾಗ ತಿನ್ನುವ ಪಾಪ್‌ಕಾರ್ನ್‌ಗೂ ಜಿಎಸ್‌ಟಿ ತಪ್ಪಿಲ್ಲ. ಜೀವ ವಿಮೆ, ಅರೋಗ್ಯ ವಿಮೆಗಳ ಮೇಲೂ 18% ಜಿಎಸ್‌ಟಿ ಹೇರಲಾಗಿದೆ, ಮೊದಲ ಬಾರಿಗೆ ಕೃಷಿ ಉತ್ಪನ್ನಗಳಿಗೂ ಜಿಎಸ್ಟಿಯ ಬರೆ ಬಿದ್ದಿದೆ. ಎಟಿಎಂ ಶುಲ್ಕವನ್ನೂ ಏರಿಸಲಾಗಿದೆ.

2018 ರಿಂದ 2024 ರವರೆಗೆ ಕನಿಷ್ಠ ಠೇವಣಿ ನಿರ್ವಹಿಸದ ಜನರಿಂದ ದಂಡದ ರೂಪದಲ್ಲಿ 43,500 ಕೋಟಿ ರೂ. ವಸೂಲಿ ಮಾಡಲಾಗಿದೆ. ಇತ್ತೀಚೆಗೆ ಹೆದ್ದಾರಿ ಶುಲ್ಕಗಳ ದರ ಏರಿಕೆಯಾಗಿದೆ.

ಪೆಟ್ರೋಲ್, ಡೀಸೆಲ್ ಸೇರಿದಂತೆ ಪೆಟ್ರೋಲಿಯಂ ಉತ್ಪನ್ನಗಳ ಮೇಲೆ ಅವೈಜ್ಞಾನಿಕ ಅಬಕಾರಿ ಸುಂಕ ಹೆಚ್ಚಿಸುವ ಮೂಲಕ, ಸಾಮಾನ್ಯ ಜನರಿಂದ ಹಣವಸೂಲಿ ಮಾಡುತ್ತಿರುವ ಬಿಜೆಪಿ ಸರ್ಕಾರವು ಜನ ಸಾಮಾನ್ಯರ ಮೇಲೆ ಭಾರೀಹೊರೆ ಹಾಕಿದೆ.

ಕಳೆದ 10 ವರ್ಷಗಳಲ್ಲಿ ಪೆಟ್ರೋಲಿಯಂ ಉತ್ಪನ್ನಗಳ ಮೇಲೆ ಹೆಚ್ಚುವರಿ ತೆರಿಗೆ ವಿಧಿಸುವ ಮೂಲಕ ನಿಮ್ಮ ಸರ್ಕಾರವು ರೂ.34 ಲಕ್ಷ ಕೋಟಿ ರೂಪಾಯಿಗೆ ಅಧಿಕ ಆದಾಯವನ್ನು ಗಳಿಸಿದೆ. ಕೇವಲ 2023–24ನೇ ಆರ್ಥಿಕ ವರ್ಷದಲ್ಲಿಯೇ ರಿಲಯನ್ಸ್ ಇಂಡಸ್ಟ್ರೀಸ್ ಲಿಮಿಟೆಡ್, ಇಂಡಿಯನ್ ಆಯಿಲ್ ಕಾರ್ಪೊರೇಷನ್, ಭಾರತ್ ಪೆಟ್ರೋಲಿಯಂ ಕಾರ್ಪೊರೇಷನ್, ಹಿಂದೂಸ್ತಾನ್ ಪೆಟ್ರೋಲಿಯಂ, ಆಯಿಲ್ ಇಂಡಿಯಾ, ಗೇಲ್ ಇಂಡಿಯಾ ಮತ್ತು ONGC ಸೇರಿದಂತೆ ಎಂಟು ದೊಡ್ಡ ತೈಲ ಕಂಪನಿಗಳು ಒಟ್ಟಿನಲ್ಲಿ ರೂ.2.29 ಲಕ್ಷ ಕೋಟಿ ರೂಪಾಯಿ ಲಾಭ ಗಳಿಸಿವೆ. ಈ ಲಾಭವು ಜನಸಾಮಾನ್ಯರ ಜೇಬಿನಿಂದ ಪಡೆಯಲಾಗಿದೆ.

ಕಾಂಗ್ರೆಸ್ ಪಕ್ಷವು ಮೇ 2014ರಲ್ಲಿ ಕೇಂದ್ರದ ಅಧಿಕಾರದಿಂದ ಹೊರನಡೆದಾಗ, ಪೆಟ್ರೋಲ್ ಮೇಲೆ ಅಬಕಾರಿ ಸುಂಕ ರೂ.9.20 ಪ್ರತಿ ಲೀಟರ್ ಮತ್ತು ಡೀಸೆಲ್ ಮೇಲೆ ರೂ.3.46 ಪ್ರತಿ ಲೀಟರ್ ಇತ್ತು. ಇಂದಿನ ಸ್ಥಿತಿಯಲ್ಲಿ, ಪೆಟ್ರೋಲ್ ಮೇಲಿನ ಅಬಕಾರಿ ತೆರಿಗೆ ರೂ.19.90 ಪ್ರತಿ ಲೀಟರ್ ಆಗಿದ್ದು, ಡೀಸೆಲ್ ಮೇಲಿನ ಅಬಕಾರಿ ತೆರಿಗೆ ರೂ.15.80 ಪ್ರತಿ ಲೀಟರ್ ಆಗಿದೆ. ಇದು ಪೆಟ್ರೋಲ್ ಮೇಲೆ 216% ಹಾಗೂ ಡೀಸೆಲ್ ಮೇಲೆ 457%ರಷ್ಟು ಅಬಕಾರಿ ತೆರಿಗೆ ಹೊರೆ ಜನಸಾಮಾನ್ಯರ ಮೇಲೆ ಬಿದ್ದಿದೆ.

ಜನತೆಗೆ ಮೋಸಮಾಡಿರುವ ಸ್ಪಷ್ಟ ನಿದರ್ಶನವೆಂದರೆ, 2013–14ರ ಕಾಲಘಟ್ಟದೊಂದಿಗೆ ಹೋಲಿಸಿದರೆ ಕಚ್ಚಾ ತೈಲ ಬೆಲೆ 30% ರಿಂದ 40%ರಷ್ಟು ಕುಸಿತವನ್ನೇ ಕಂಡಿದೆ. ಆದರೆ ಈ ತಗ್ಗಿದ ಬೆಲೆಯ ಪ್ರಯೋಜನವನ್ನು ಸರ್ಕಾರವು ಗ್ರಾಹಕರಿಗೆ ನೀಡದೆ ತನ್ನದೇ ಲಾಭಕ್ಕಾಗಿ ಉಪಯೋಗಿಸಿಕೊಂಡಿದೆ. ಏಪ್ರಿಲ್–ಮೇ 2014ರಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರದಿಂದ ಹೊರ ಬಂದಾಗ ಕಚ್ಚಾತೈಲ ಬೆಲೆ ಪ್ರತಿ ಬ್ಯಾರೆಲ್ಗೆ 108 ಯು ಎಸ್ ಡಾಲರ್ ಇತ್ತು. ಇಂದಿನ ಬೆಲೆ 62 ಯು ಎಸ್ ಡಾಲರ್ ಪ್ರತಿ ಬ್ಯಾರಲ್ ಆಗಿದೆ. ಕಳೆದ ದಶಕವಿಡೀ ಕಚ್ಚಾತೈಲ ಸರಾಸರಿ ಬೆಲೆ 70 ರಿಂದ 80 ಅಮೆರಿಕ ಡಾಲರ್ ನಡುವೆ ಇತ್ತು. ಸರ್ಕಾರ ಈ ಲಾಭವನ್ನು ಗ್ರಾಹಕರಿಗೆ ನೀಡಿದ್ದರೆ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳು ಪ್ರತಿ ಲೀಟರ್ ರೂ.10 ರಿಂದ ರೂ.15 ರಷ್ಟು ಕಡಿಮೆಯಾಗುತ್ತಿತ್ತು. ಇದು ಗ್ರಾಹಕರಿಗೆ ನೆರವಾಗುತ್ತಿತ್ತು ಮತ್ತು ಆರ್ಥಿಕ ಹೊರೆ ಇಳಿಸಬಹುದಿತ್ತು.

### ತೆರಿಗೆ ಹಂಚಿಕೆಗೆ ಹೋರಾಟ ಏಕಿಲ್ಲ?

**ಕರ್ನಾಟಕದಿಂದ ಕೇಂದ್ರಕ್ಕೆ ವರ್ಷಕ್ಕೆ 4.50 ಲಕ್ಷ ಕೋಟಿ ರೂ. ನಷ್ಟು ತೆರಿಗೆ ಹೋಗುತ್ತಿದೆ. ಕೇಂದ್ರ ಸರ್ಕಾರ ತೆರಿಗೆ ಹಂಚಿಕೆಯಾಗಿ 45,000 ಕೋಟಿ ರೂ. ಮತ್ತು ಅನುದಾನದ ರೂಪದಲ್ಲಿ 15,000 ಕೋಟಿ ರೂ. ಮಾತ್ರ ನೀಡುತ್ತಿದೆ. ಅಂದರೆ 1 ರೂಪಾಯಿಗೆ ಪ್ರತಿಯಾಗಿ 13 ಪೈಸೆ ಮಾತ್ರ ಸಿಗುತ್ತಿದೆ. ರಾಜಧಾನಿ ಬೆಂಗಳೂರಿಗೆ ಹೆಚ್ಚು ಅನುದಾನ ನೀಡಿ ಎಂದು ನಮ್ಮ ಮುಖ್ಯಮಂತ್ರಿಗಳು ಬಜೆಟ್ ವೇಳೆ ಮನವಿ ಮಾಡಿದ್ದರೂ ಅದಕ್ಕೆ ಕೇಂದ್ರದ ಆರ್ಥಿಕ ಸಚಿವರು ಸ್ಪಂದಿಸಲಿಲ್ಲ.**

**ತೆರಿಗೆ ಮರು ಹಂಚಿಕೆಯ ವಿಚಾರದಲ್ಲಿ ಕರ್ನಾಟಕಕ್ಕೆ ಆಗುತ್ತಿರುವ ಅನ್ಯಾಯದ ಬಗ್ಗೆ ಬಿಜೆಪಿ ಸಂಸದರು ಒಂದೇ ಒಂದು ಪ್ರಶ್ನೆ ಎತ್ತಿಲ್ಲ. ಜನಾಕ್ರೋಶ ಹೋರಾಟ ಜನರ ಪರವಾಗಿ ಇರಬೇಕೇ ಹೊರತು ರಾಜಕೀಯ ಲಾಭಗಳ ಪರವಾಗಿರಬಾರದು. ಎಷ್ಟೇ ಹೋರಾಟ ಮಾಡಿದರೂ ಅದನ್ನು ಜನರು ನಂಬದೆ ಕಾಂಗ್ರೆಸ್‌ನ ಜೊತೆಗೆ ಯಾವಾಗಲೂ ಇರುತ್ತಾರೆ ಎಂಬ ಜಾಗೃತಿ ಬಿಜೆಪಿಗೆ ಬರಲಿ. ಜನರ ಆಕ್ರೋಶದ ಕಿಚ್ಚು ಎನ್‌ಡಿಎ ಕಡೆಗೆ ಇದೆ ಎಂಬ ಅರಿವು ಇನ್ನಾದರೂ ಬರಲಿ.**



**–ರಣದೀಪ್ ಸಿಂಗ್ ಸುರ್ಜೆವಾಲ**

**ಎಐಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ಕರ್ನಾಟಕ ಕಾಂಗ್ರೆಸ್ ಉಸ್ತುವಾರಿ .**

ಕೇಂದ್ರದ ಬಿಜೆಪಿ ಸರ್ಕಾರವು ಏಪ್ರಿಲ್ 7, 2025ರಿಂದ ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಅಬಕಾರಿ ತೆರಿಗೆಯನ್ನು ಪ್ರತಿ ಲೀಟರ್ ರೂ.2ರಷ್ಟು ಹೆಚ್ಚಿಸಿದೆ. ಈ ತೆರಿಗೆ ಏರಿಕೆಯಾಗದೆ ಇದ್ದರೆ, ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳು ಕನಿಷ್ಠ ರೂ.2 ರಷ್ಟು ಕಡಿಮೆಯಾಗುತ್ತಿತ್ತು. ಈ ಸಣ್ಣ ಪ್ರಯೋಜನವನ್ನೂ ತೆಗೆದುಹಾಕುವ ಮೂಲಕ, ಕೇಂದ್ರ ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರವು ಜನರ ಮೇಲೆ ರೂ.40,000 ಕೋಟಿ ರೂಪಾಯಿಗೂ ಅಧಿಕ ಹೆಚ್ಚುವರಿ ಭಾರವನ್ನು ಹಾಕಿದೆ. ಇದರ ಪೈಕಿ ಕೇವಲ ಕರ್ನಾಟಕದ ಜನರ ಮೇಲೆಯೇ ರೂ.4,500 ಕೋಟಿ ರೂಪಾಯಿಗೂ ಹೆಚ್ಚು ಹೊರೆ ಹಾಕಲಾಗಿದೆ.

ಕರ್ನಾಟಕದಲ್ಲಿ ವಾರ್ಷಿಕವಾಗಿ ಪೆಟ್ರೋಲ್ ಮಾರಾಟವು 692.43 ಕೋಟಿ ಲೀಟರ್ ಆಗಿದ್ದು, ಡೀಸೆಲ್ ಮಾರಾಟವು 1613.66 ಕೋಟಿ ಲೀಟರ್ ಆಗಿದೆ. ಪೆಟ್ರೋಲ್ ಮತ್ತು ಡೀಸೆಲ್ ಬೆಲೆಯನ್ನು ರೂ.2 ಕಡಿಮೆ ಮಾಡಿದ್ದರೆ ಗ್ರಾಹಕರಿಗೆ ರೂ.4,504 ಕೋಟಿ ರೂಪಾಯಿ ಪ್ರಯೋಜನವಾಗುತ್ತಿತ್ತು. ಆದರೆ ಈ ಪ್ರಯೋಜನವನ್ನೂ ಕೇಂದ್ರ ಸರ್ಕಾರ ತೆಗೆದುಕೊಂಡು, ಜನರ ಮೇಲೆ ರೂ.4,504 ಕೋಟಿ ಹೆಚ್ಚುವರಿ ಭಾರವನ್ನು ಹಾಕಿದೆ.

ಇತ್ತೀಚೆಗೆ ಗ್ಯಾಸ್ ಸಿಲಿಂಡರ್ ಬೆಲೆ ಏರಿಕೆಯ ಮೂಲಕ ಕನ್ನಡಿಗರ ಮೇಲಿನ ಹೆಚ್ಚುವರಿ ಭಾರ ರೂ.515.49 ಕೋಟಿ ಆಗಿದೆ. ಇದರಿಂದ ರೂ.4,504 ಕೋಟಿ + ರೂ.515.49 ಕೋಟಿ, ಒಟ್ಟಾರೆಯಾಗಿ ರೂ.5,019.49 ಕೋಟಿ ಆರ್ಥಿಕ ಹೊರೆಯನ್ನು ಕನ್ನಡಿಗರ ಮೇಲೆ ಹೇರಿದ್ದು, ಇದು ಕನ್ನಡಿಗರ ಮೇಲಿನ ಆರ್ಥಿಕ ದಾಳಿಯಾಗಿದೆ.

# ಪ್ರವಾಸಿಗರ ಹತ್ಯೆ: ಜಾಗತಿಕ ವಲಯಕ್ಕೆ ಭಾರತದ ವಿವರಣೆ

**ನವದೆಹಲಿ,ಏ.26:** ಪಹಲ್ಗಾಮ್ ಭಯೋತ್ಪಾದಕ ದಾಳಿಯನ್ನು ಜಾಗತಿಕ ನಾಯಕರು ಖಂಡಿಸುತ್ತಾ ಭಾರತಕ್ಕೆ ಬೆಂಬಲ ವ್ಯಕ್ತಪಡಿಸುತ್ತಿದ್ದಂತೆ, ಪಾಕಿಸ್ತಾನದಿಂದ ಹೊರಹೊಮ್ಮುತ್ತಿರುವ ಗಡಿಯಾಚೆಗಿನ ಭಯೋತ್ಪಾದನಾ ಸಂಪರ್ಕಗಳನ್ನು ಎತ್ತಿ ತೋರಿಸಲು ಭಾರತ ರಾಜತಾಂತ್ರಿಕ ಸಂಪರ್ಕವನ್ನು ಹೆಚ್ಚಿಸಿದೆ. ವಿದೇಶಾಂಗ ಸಚಿವ ಎಸ್.ಜೈಶಂಕರ್ ತಮ್ಮ ಸೌದಿ ಅರೇಬಿಯಾದ ವಿದೇಶಾಂಗ ಸಚಿವ ಫೈಸಲ್ ಬಿನ್ ಫರ್ಹಾನ್ ಅಲ್ ಸೌದ್ ಅವರೊಂದಿಗೆ ಮಾತುಕತೆ ನಡೆಸಿದ್ದಾರೆ. ಇಸ್ರೇಲ್, ಈಜಿಪ್ಟ್, ನೇಪಾಳ ಮತ್ತು ಅರ್ಜೆಂಟೀನಾ ರಾಯಭಾರಿಗಳೊಂದಿಗೆ ಮಾತುಕತೆ ನಡೆಸಿದ್ದಾರೆ.ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ, ವಿದೇಶಾಂಗ ಸಚಿವಾಲಯದ ಇತರ ಹಿರಿಯ ಅಧಿಕಾರಿಗಳೊಂದಿಗೆ, ದೆಹಲಿಯಲ್ಲಿ ವಿದೇಶಿ ರಾಜತಾಂತ್ರಿಕರಿಗೆ ತನಿಖೆ ಮತ್ತು ಭಾರತದ ಪ್ರತಿಕ್ರಿಯೆಯ ಕುರಿತು ಮಾಹಿತಿ ನೀಡುತ್ತಲೇ ಇದ್ದಾರೆ. ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಕ್ರೂರ ದಾಳಿಯ ನಂತರ ಜಾಗತಿಕ ಮಟ್ಟದಲ್ಲಿ ಈ ಮಾತುಕತೆ ನಡೆದಿದೆ, ಪಾಕಿಸ್ತಾನ ಮೂಲದ ನಿಷೇಧಿತ ಗುಂಪು ಲಷ್ಕರ್-ಎ-ತೈಬಾ (ಎಲ್‌ಇಟಿ)ನ ಪ್ರತಿನಿಧಿಯಾದ ಟಿಆರ್‌ಎಫ್ ದಾಳಿಯ



ಹೊಣೆಯನ್ನು ಹೊತ್ತುಕೊಂಡಿದ್ದು, ಇದು 2019 ರಲ್ಲಿ ಪುಲ್ವಾಮಾ ನಂತರ ಕಣಿವೆಯಲ್ಲಿ ನಡೆದ ಅತ್ಯಂತ ಭೀಕರ ದಾಳಿಯಾಗಿದೆ.

ಕ್ರೂರ ದಾಳಿಯ ಅಪರಾಧಿಗಳಿಗೆ ಶಿಕ್ಷೆ ನೀಡಲು ಅಮೆರಿಕ ಭಾರತದೊಂದಿಗೆ ನಿಲ್ಲುತ್ತದೆ ಎಂದು ಅಮೆರಿಕದ ರಾಷ್ಟ್ರೀಯ ಗುಪ್ತಚರ ಇಲಾಖೆ ನಿರ್ದೇಶಕಿ ತುಳಸಿ ಗಬ್ಬಾರ್ಡ್ ಹೇಳಿದ್ದಾರೆ. "ಪಹಲ್ಗಾಮ್‌ನಲ್ಲಿ 26 ಹಿಂದೂಗಳನ್ನು ಗುರಿಯಾಗಿಸಿಕೊಂಡು ಹತ್ಯೆಗೈದ ಭೀಕರ ಇಸ್ಲಾಮಿಕ್ ಭಯೋತ್ಪಾದಕ ದಾಳಿಯ ನಂತರ ನಾವು ಭಾರತದೊಂದಿಗೆ ಒಗ್ಗಟ್ಟಿನಲ್ಲಿ ನಿಲ್ಲುತ್ತೇವೆ ಎಂದು ಅವರು ಎಕ್ಸ್ ನಲ್ಲಿ ಪೋಸ್ಟ್ ಮಾಡಿದ್ದಾರೆ.ಅಮೆರಿಕದ ವಿದೇಶಾಂಗ ಇಲಾಖೆಯು ತ್ವರಿತ ನ್ಯಾಯಕೊಡಿಸಬೇಕೆಂದು ಒತ್ತಾಯಿಸಿದೆ. ಭಯೋತ್ಪಾದನೆಯ ವಿರುದ್ಧ ಭಾರತದೊಂದಿಗೆ ದೃಢವಾಗಿ ನಿಲ್ಲುವಂತೆ ಒತ್ತಾಯಿಸಿದೆ.ಬ್ರಿಟಿಷ್ ಪ್ರಧಾನಿ ಕೀರ್ ಸ್ಟಾರ್ಮರ್ ಮೋದಿಯವರಿಗೆ ಕರೆ ಮಾಡಿ, ಪಹಲ್ಗಾಮ್ ಹತ್ಯಾಕಾಂಡವನ್ನು ಅನಾಗರಿಕ ಕೃತ್ಯ ಎಂದು ವ್ಯಾಖ್ಯಾನಿಸಿದ್ದಾರೆ. ಕಳೆದುಕೊಂಡ ಅಮಾಯಕ ಜೀವಗಳಿಗೆ ಸಂತಾಪ ಸೂಚಿಸಿ ಭಾರತದ ನೆರವಿಗೆ ನಿಲ್ಲುತ್ತೇವೆ ಎಂದಿದ್ದಾರೆ.ಇತರ ಜಾಗತಿಕ ನಾಯಕರಿಂದ ಇದೇ ರೀತಿಯ ಸಂದೇಶಗಳು ಬಂದವು. ಡಚ್ ಪ್ರಧಾನಿ ಡಿಕ್ ಸ್ಕೂಫ್ ಮತ್ತು ಶ್ರೀಲಂಕಾ ಅಧ್ಯಕ್ಷ ಅನುರ ಕುಮಾರ ದಿಸಾನಾಯಕೆ ಕೂಡ ಮೋದಿಯವರಿಗೆ ಫೋನ್ ಕರೆ ಮಾಡಿ ದಾಳಿಯನ್ನು ಖಂಡಿಸಿ ಭಯೋತ್ಪಾದನೆಯನ್ನು ಎದುರಿಸಲು ತಮ್ಮ ಬದ್ಧತೆಯನ್ನು ಪುನರುಚ್ಚರಿಸಿದ್ದಾರೆ.

ಫ್ರೆಂಚ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್, ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು, ಈಜಿಪ್ಟ್ ಅಧ್ಯಕ್ಷ ಅಬ್ದೆಲ್ ಫತ್ತಾಹ್ ಎಲ್-ಸಿಸಿ, ಜೋರ್ಡಾನ್ ರಾಜ ಅಬ್ದುಲ್ಲಾ ಖಖ, ಇಟಾಲಿಯನ್ ಪ್ರಧಾನಿ ಜಾರ್ಜಿಯಾ ಮೆಲೋನಿ ಮತ್ತು ಜಪಾನ್ ಪ್ರಧಾನಿ ಶಿಗೇರು ಇಶಿಬಾ ಅವರಿಂದ ಬೆಂಬಲ ಕೇಳಿಬಂದಿವೆ, ಅವರೆಲ್ಲರೂ ಭಯೋತ್ಪಾದನೆಯ ವಿರುದ್ಧ ಭಾರತದ ಹೋರಾಟಕ್ಕೆ ಒಗ್ಗಟ್ಟು ಮತ್ತು ಬೆಂಬಲ ವ್ಯಕ್ತಪಡಿಸಿದ್ದಾರೆ.

ಉದ್ವಿಗ್ನತೆ ಭುಗಿಲೆದ್ದಂತೆ ಭಾರತ ಮತ್ತು ಪಾಕಿಸ್ತಾನದ ನಡುವೆ ಮಧ್ಯಸ್ಥಿಕೆ ವಹಿಸಲು ಇರಾನ್ ಮುಂದಾಗಿದೆ. ಇರಾನ್ ವಿದೇಶಾಂಗ ಸಚಿವ ಸಯ್ಯದ್ ಅಬ್ಬಾಸ್ ಅರಾಘ್ಚಿ ದಾಳಿಯನ್ನು ಟೆಹ್ರಾನ್, ಐತಿಹಾಸಿಕ ಮತ್ತು ಸಾಂಸ್ಕೃತಿಕ ಸಂಬಂಧಗಳನ್ನು ಉಲ್ಲೇಖಿಸಿ ಎರಡು ನೆರೆಹೊರೆಯವರ ನಡುವಿನ ಉದ್ವಿಗ್ನತೆಯನ್ನು ಕಡಿಮೆ ಮಾಡಲು ವಿದೇಶಾಂಗ ಇಲಾಖೆಯನ್ನು ಪರಿಣಾಮಕಾರಿಯಾಗಿ ಬಳಸಲು ಸೂಚಿಸಿದ್ದಾರೆ.



ರಂಬನ್ ಜಿಲ್ಲೆಯ ಧರಮ್‌ಕುಂಡ್‌ನಲ್ಲಿ ಮೇಘ ಸ್ಫೋಟ ಸಂಭವಿಸಿದ ಸ್ಥಳಕ್ಕೆ ಜಮ್ಮು ಮತ್ತು ಕಾಶ್ಮೀರ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ ಭೇಟಿ ನೀಡಿ ಪರಿಶೀಲಿಸಿದರು.

# ನೀಟ್-ಯುಜಿ ಪ್ರಶ್ನೆಪತ್ರಿಕೆ ಸೋರಿಕೆ ಆರೋಪಿ ಬಂಧನ

**ಪಟನಾ, ಏ.26:** 2024 ರ ಪದವಿಪೂರ್ವ ರಾಷ್ಟ್ರೀಯ ಅರ್ಹತಾ-ಪ್ರವೇಶ ಪರೀಕ್ಷೆಯ ಪತ್ರಿಕೆ ಸೋರಿಕೆ ಪ್ರಕರಣ ಮತ್ತು ಇತರ ಹಲವಾರು ಅಂತರರಾಜ್ಯ ಪರೀಕ್ಷಾ ಹಗರಣಗಳ ಪ್ರಮುಖ ಶಂಕಿತ ಆರೋಪಿ ಸಂಜೀವ್ ಕುಮಾರ್ ಮುಖಿಯಾ ಅವರನ್ನು ಬಿಹಾರದ ಆರ್ಥಿಕ ಅಪರಾಧಗಳ ಘಟಕವು ಬಂಧಿಸಿದೆ. 11 ತಿಂಗಳ ಕಾಲ ಬಂಧನದಿಂದ ತಪ್ಪಿಸಿಕೊಳ್ಳುತ್ತಿದ್ದ ಮುಖಿಯಾ ಅವರನ್ನು ದಾನಾಪುರದಲ್ಲಿ ಬಂಧಿಸಲಾಗಿದೆ ಎಂದು ವರದಿಯಾಗಿದೆ. ಈ ತಿಂಗಳ ಆರಂಭದಲ್ಲಿ, ಬಿಹಾರ ಸರ್ಕಾರವು ಅವರ ಬಗ್ಗೆ ಮಾಹಿತಿ ನೀಡಿದವರಿಗೆ 3 ಲಕ್ಷ ರೂ. ಬಹುಮಾನವನ್ನು ಘೋಷಿಸಿತ್ತು.



ಮುಖಿಯಾ ಇರುವ ಸ್ಥಳದ ಬಗ್ಗೆ ಗುಪ್ತಚರ ಮಾಹಿತಿಯ ನಂತರ ಅವರನ್ನು ಅಪಾರ್ಟ್‌ಮೆಂಟ್‌ನಿಂದ ಬಂಧಿಸಲಾಗಿದೆ ಎಂದು ಆರ್ಥಿಕ ಅಪರಾಧಗಳ ಘಟಕದ ಹೆಚ್ಚುವರಿ ಮಹಾನಿರ್ದೇಶಕ ನಯ್ಯರ್ ಹುಸ್ನೈನ್ ಖಾನ್ ಹೇಳಿದ್ದಾರೆ. ಮುಖಿಯಾ ಬಿಹಾರ ಶಿಕ್ಷಕರ ನೇಮಕಾತಿ ಪರೀಕ್ಷೆ ಮತ್ತು ಉತ್ತರ ಪ್ರದೇಶ ಕಾನ್ಸ್ಟೇಬಲ್ ನೇಮಕಾತಿ ಪರೀಕ್ಷೆ ಸೇರಿದಂತೆ ಕನಿಷ್ಠ ನಾಲ್ಕು ಪ್ರಕರಣಗಳಲ್ಲಿ ಭಾಗಿಯಾಗಿದ್ದಾರೆಂದು ಆರೋಪಿಸಲಾಗಿದೆ. ಜೊತೆಗೆ ಪೊಲೀಸರು ಮತ್ತು ಕೇಂದ್ರ ತನಿಖಾ ದಳವು ಅವರನ್ನು ಪ್ರಶ್ನಿಸುತ್ತಿದೆ ಎಂದು ಹುಸ್ನೈನ್ ಖಾನ್ ಹೇಳಿದ್ದಾರೆ.

ಜೂನ್‌ನಲ್ಲಿ ಪ್ರಕರಣವನ್ನು ಕೇಂದ್ರ ತನಿಖಾ ದಳಕ್ಕೆ ವರ್ಗಾಯಿಸುವ ಮೊದಲು ಆರ್ಥಿಕ ಅಪರಾಧಗಳ ಘಟಕವು ಮುಖಿಯಾ ಅವರನ್ನು ನೀಟ್ ಪ್ರಕರಣದ ಪ್ರಮುಖ ಆರೋಪಿ ಎಂದು ಬಣ್ಣಿಸಿತ್ತು. ಜೂನ್ 4 ರಂದು ಪದವಿಪೂರ್ವ ವೈದ್ಯಕೀಯ ಕೋರ್ಸ್‌ಗಳ ಪ್ರವೇಶಕ್ಕಾಗಿ ನಡೆದ ರಾಷ್ಟ್ರೀಯ ಅರ್ಹತಾ-ಪ್ರವೇಶ ಪರೀಕ್ಷೆಯ ಫಲಿತಾಂಶಗಳು ಪ್ರಕಟವಾದ ನಂತರ, ಪ್ರಶ್ನೆ ಪತ್ರಿಕೆ ಸೋರಿಕೆ ಮತ್ತು ಇತರ ಅಕ್ರಮಗಳ ಆರೋಪ ಮಾಡಲಾಗಿತ್ತು. ಈ ಪರೀಕ್ಷೆಯನ್ನು ಮೇ 5 ರಂದು ನಡೆಸಲಾಗಿತ್ತು. ಪತ್ರಿಕೆ ಸೋರಿಕೆ ಪ್ರಕರಣದಲ್ಲಿ ಇಲ್ಲಿಯವರೆಗೆ 45 ಜನರನ್ನು ಬಂಧಿಸಲಾಗಿದೆ ಮತ್ತು ಐದು ಆರೋಪಪಟ್ಟಿಗಳನ್ನು ಕೇಂದ್ರ ತನಿಖಾ ದಳ ಸಲ್ಲಿಸಿದೆ. ಮುಖಿಯಾ ವೈದ್ಯಕೀಯ ಪ್ರವೇಶ ಪರೀಕ್ಷೆಯ ಪ್ರಶ್ನೆ ಪತ್ರಿಕೆಗಳು ಮತ್ತು ಉತ್ತರ ಪತ್ರಿಕೆಗಳನ್ನು ತನ್ನ ಮೊಬೈಲ್ ಫೋನ್‌ನಲ್ಲಿ ಗುರುತಿಸಲಾಗದ ಪ್ರೊಫೆಸರ್ ನಿಂದ ಪಡೆದಿದ್ದಾರೆ ಎಂದು ದಿ ಹಿಂದೂ ವರದಿ ಮಾಡಿದೆ. ಅವರು ಹಲವಾರು ಪರೀಕ್ಷಾ ಪ್ರಶ್ನೆ ಪತ್ರಿಕೆ ಸೋರಿಕೆಗಳಲ್ಲಿ ಭಾಗಿಯಾಗಿದ್ದಾರೆಂದು ಹೇಳಲಾಗಿದ್ದು, 2016 ರಲ್ಲಿ ಬಿಹಾರ ಸಾರ್ವಜನಿಕ ಸೇವಾ ಆಯೋಗದ ಕಾನ್ಸ್ಟೇಬಲ್ ನೇಮಕಾತಿ ಪರೀಕ್ಷಾ ಪತ್ರಿಕೆಯನ್ನು ಸೋರಿಕೆ ಮಾಡಿದ್ದಕ್ಕಾಗಿ ಅವರನ್ನು ಬಂಧಿಸಲಾಗಿದೆ. ಅವರ ಮಗ, ವೈದ್ಯ ಶಿವ ಕುಮಾರ್ ಅವರನ್ನು ಮತ್ತೊಂದು ಸೋರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬಂಧಿಸಲಾಗಿದೆ. ಆದರೆ ಜಾಮೀನಿನ ಮೇಲೆ ಹೊರಗಿದ್ದಾರೆ ಎಂದು ವರದಿಯಾಗಿದೆ.

# 9 ದಲಿತರ ಮನೆಗಳಿಗೆ ಬೆಂಕಿ

**ಪ್ರತಾಪ್‌ಗಡ್,ಏ.26:** ಉತ್ತರ ಪ್ರದೇಶದ ಪ್ರತಾಪ್‌ಗಢದಲ್ಲಿ ದಲಿತರು ವಾಸಿಸುವ ಪ್ರದೇಶದಲ್ಲಿ ಶುಕ್ರವಾರ ಸಂಜೆ ಸಂಭವಿಸಿದ ಬೆಂಕಿಯಲ್ಲಿ ಒಂಬತ್ತು ಮನೆಗಳು ಸುಟ್ಟುಹೋಗಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಬೆಂಕಿಗೆ ಕಾರಣ ಇನ್ನೂ ತಿಳಿದುಬಂದಿಲ್ಲ. ಆದರೂ, ಅಗ್ನಿಶಾಮಕ ದಳ ಮತ್ತು ಗ್ರಾಮಸ್ಥರ ಸಹಾಯದಿಂದ, ನಾವು ಸಾಕಷ್ಟು ಪ್ರಯತ್ನದ ನಂತರ ಬೆಂಕಿಯನ್ನು ನಿಯಂತ್ರಣಕ್ಕೆ ತರಲು ಸಾಧ್ಯವಾಯಿತು ಎಂದು ಅಂತು ಪೊಲೀಸ್ ಠಾಣೆಯ ಸ್ಟೇಷನ್ ಹೌಸ್ ಆಫೀಸರ್ (ಎಸ್‌ಎಚ್‌ಒ) ಅನಂತ್ ಪಾಲ್ ಸಿಂಗ್ ಹೇಳಿದ್ದಾರೆ.



ರಾಕೇಶ್ ಸರೋಜ್, ರವೀಂದ್ರ ಸರೋಜ್, ಸಂಜಯ್ ಸರೋಜ್, ಗೋವಿಂದ್ ಸರೋಜ್, ಮೋತಿಲಾಲ್ ಸರೋಜ್, ಪ್ರದೀಪ್ ಸರೋಜ್, ಧರ್ಮದೇವ್ ಸರೋಜ್, ರಾಧೇಶ್ಯಾಮ್ ಸರೋಜ್ ಮತ್ತು ರಾಮ್ ಸಮುಜ್ ಅವರಿಗೆ ಸೇರಿದ ಒಂಬತ್ತು ಮನೆಗಳು ಬೆಂಕಿಯಲ್ಲಿ ಸಂಪೂರ್ಣವಾಗಿ ಸುಟ್ಟುಹೋಗಿವೆ ಎಂದು ಅವರು ಹೇಳಿದರು. ಅಧಿಕಾರಿಗಳ ಪ್ರಕಾರ, ಗೃಹೋಪಯೋಗಿ ವಸ್ತುಗಳ ಜೊತೆಗೆ, ಹಲವಾರು ಮೇಕೆಗಳು ಸಹ ಬೆಂಕಿಯಲ್ಲಿ ನಾಶವಾಗಿವೆ.

ಘಟನೆಯ ಬಗ್ಗೆ ಮಾಹಿತಿ ಪಡೆದ ನಂತರ, ಸದರ್ ಉಪ-ವಿಭಾಗೀಯ ಮ್ಯಾಜಿಸ್ಟ್ರೇಟ್ (ಎಸ್ಡಿಎಂ) ನ್ಯಾನ್ಸಿ ಸಿಂಗ್, ನಯಬ್ ತಹಶೀಲ್ದಾರ್ ದಿನೇಶ್ ಚಂದ್ರ ತಿವಾರಿ ಮತ್ತು ಕಂದಾಯ ಅಧಿಕಾರಿ ಅನಿಲ್ ಅವರೊಂದಿಗೆ ಸ್ಥಳಕ್ಕೆ ಭೇಟಿ ನೀಡಿದರು. ಹಾನಿಯ ಸಂಪೂರ್ಣ ಮೌಲ್ಯಮಾಪನ ನಡೆಸಲು ಕಂದಾಯ ಅಧಿಕಾರಿಗೆ ಸೂಚಿಸಿದ್ದೇನೆ, ಸ್ಥಳೀಯ ಪಡಿತರ ವ್ಯಾಪಾರಿಗಳಿಗೆ ತಕ್ಷಣವೇ ಪೀಡಿತ ಕುಟುಂಬಗಳಿಗೆ ಆಹಾರ ಮತ್ತು ಅಗತ್ಯ ಸಾಮಗ್ರಿಗಳನ್ನು ಒದಗಿಸುವಂತೆ ನಿರ್ದೇಶಿಸಿದ್ದೇನೆ ಎಂದು ಎಸ್ಡಿಎಂ ನ್ಯಾನ್ಸಿ ಸಿಂಗ್ ಹೇಳಿದರು. ಈ ದುರದೃಷ್ಟಕರ ಘಟನೆಯ ಬಲಿಪಶುಗಳಿಗೆ ಸಾಧ್ಯವಿರುವ ಎಲ್ಲ ಬೆಂಬಲವನ್ನು ನೀಡಲು ಆಡಳಿತವು ಬದ್ಧವಾಗಿದೆ ಎಂದು ಅವರು ಹೇಳಿದರು.

# ಅತ್ಯಾಚಾರ ಆರೋಪಿಗೆ ಹಲ್ಲೆ

**ಲಖನೌ,ಏ.26:** ಉತ್ತರ ಪ್ರದೇಶದ ಮೀರತ್ನ ಹಾಪುರದ ಹಳ್ಳಿಯೊಂದರಲ್ಲಿ 10 ವರ್ಷದ ದಲಿತ ಬಾಲಕಿಯ ಮೇಲೆ ಅತ್ಯಾಚಾರ ಎಸಗಿದ ಆರೋಪದ ಮೇಲೆ ಕೋಪಗೊಂಡ ಗುಂಪೊಂದು 28 ವರ್ಷದ ಯುವಕನನ್ನು ಥಳಿಸಿತ್ತು. ಗುರುವಾರ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾನೆ. ಆರೋಪಿಯ ವಿರುದ್ಧ ಬಿಎನ್‌ಎಸ್ ಅತ್ಯಾಚಾರ ವಿಭಾಗದ ಅಡಿಯಲ್ಲಿ ಪ್ರಕರಣ ದಾಖಲಾಗಿತ್ತು. ಆದರೆ, ಹಲ್ಲೆಯ ತೀವ್ರತೆಯಿಂದಾಗಿ, ಅವನಿಗೆ ಏಳು ದಿನಗಳ ನ್ಯಾಯಾಂಗ ಕಸ್ಟಡಿಯನ್ನು ನೀಡಿದ ಬಳಿಕ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲು ಅವಕಾಶ ನೀಡಲಾಯಿತು.

ಏ.17ರಂದು, 4ನೇ ತರಗತಿಯಲ್ಲಿ ಓದುತ್ತಿರುವ ತನ್ನ ಬಾಲಕಿ ಗುಡಿಸಲಿನಲ್ಲಿ ಒಂಟಿಯಾಗಿದ್ದಳು. ಆಕೆಯ ಕುಟುಂಬವು ಜಮೀನಿನಲ್ಲಿ ಕೆಲಸ ಮಾಡುತ್ತಿದ್ದಾಗ, ಆರೋಪಿ ಶ್ರವಣ್ ಕುಮಾರ್ ಎಂಬಾತ ಬಾಲಕಿಯನ್ನು ಖಾಲಿ ಕಾರ್ಖಾನೆಗೆ ಕರೆದೊಯ್ದು ಅತ್ಯಾಚಾರ ಮಾಡಿದ್ದಾನೆ. ಬಾಲಕಿ ಕಾಣೆಯಾಗಿರುವುದನ್ನು ಅರಿತುಕೊಂಡ ಪೋಷಕರು ಹುಡುಕಾಟ ಪ್ರಾರಂಭಿಸಿದ್ದಾರೆ. ಆದರೆ, ಕೆಲವರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ನಂತರ ಕುಟುಂಬ ಮತ್ತು ಸ್ಥಳೀಯರು ಆಕೆಯನ್ನು ಪ್ರಜ್ಞಾಹೀನ ಸ್ಥಿತಿಯಲ್ಲಿ ಪತ್ತೆಹಚ್ಚಿದ್ದಾರೆ. ಆಕೆಯ ಪಕ್ಕದಲ್ಲಿ ಆರೋಪಿ ಇದ್ದುದನ್ನು ನೋಡಿದ ಅವರು, ಪೊಲೀಸರು ಬರುವ ಮೊದಲೇ ಆತನನ್ನು ಥಳಿಸಿದ್ದಾರೆ.

ಪೊಲೀಸರು ಆತನನ್ನು ಹತ್ತಿರದ ಆರೋಗ್ಯ ಕೇಂದ್ರಕ್ಕೆ ಕರೆದೊಯ್ದು ಮೀರತ್‌ನಲ್ಲಿರುವ ಮತ್ತೊಂದು ಆಸ್ಪತ್ರೆಗೆ ಕರೆದೊಯ್ದರು. ಅಲ್ಲಿ ಗುರುವಾರ ಆತ ಮೃತಪಟ್ಟಿದ್ದಾನೆ. ಆತನ ಸಾವಿಗೆ ಮುನ್ನ, ಕುಮಾರ್‌ನ ಚಿಕ್ಕಪ್ಪ ಗರ್ ಮುಕ್ತೇಶ್ವರ ಪೊಲೀಸ್ ಠಾಣೆಯಲ್ಲಿ ಹುಡುಗಿಯ ಕುಟುಂಬ ಮತ್ತು ಕೆಲವು ಗ್ರಾಮಸ್ಥರ ವಿರುದ್ಧ ಕೊಲೆ ಯತ್ನ ಪ್ರಕರಣ ದಾಖಲಿಸಿದರು. ಗರ್ ಮುಕ್ತೇಶ್ವರದ ಎಸ್‌ಎಚ್‌ಒ ನೀರಜ್ ಕುಮಾರ್ ಮಾತನಾಡಿ, ಕುಮಾರ್ ಸಾವಿನ ನಂತರ, ಕ್ರಾಸ್-ಎಫ್‌ಐಆರ್‌ನಲ್ಲಿನ ಆರೋಪಗಳನ್ನು ಕೊಲೆ ಎಂದು ಮೇಲ್ದರ್ಜೆಗೇರಿಸುವ ಸಾಧ್ಯತೆಯಿದೆ. ಆತನ ಶವವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದ್ದು ವರದಿಗಾಗಿ ಕಾಯಲಾಗುತ್ತಿದೆ. ಬಾಲಕಿಯ ಕುಟುಂಬದೊಂದಿಗೆ ನಾವು ನಿರಂತರ ಸಂಪರ್ಕದಲ್ಲಿದ್ದೇವೆ, ಬಾಲಕಿ ಸ್ಥಿರವಾಗಿದ್ದಾಳೆ. ಆದರೆ, ಇನ್ನೂ ತೀವ್ರ ಆಘಾತಕ್ಕೊಳಗಾಗಿದ್ದಾಳೆ ಎಂದು ಹೇಳಿದರು.

**ಸಾ.ದಯಾ ಸಂಪದಿತ ಮತ್ತು ಗೋಪಾಲ ತ್ರಾಸಿ ಅವರ ಕೃತಿಗಳ ಅನಾವರಣ**

# ಮೇ 3ಕ್ಕೆ ಮಡಿಕೇರಿ ರೆಡ್ ಬ್ರಿಕ್ಸ್ ಸತ್ಕಾರ್‌ನಲ್ಲಿ ರಾಜ್ಯಮಟ್ಟದ ಸಾಹಿತ್ಯ-ಸಾಂಸ್ಕೃತಿಕ ಸಂಭ್ರಮ

**ಮುಂಬಯಿ,ಏ.26:** ಸಮರ್ಥ ಕನ್ನಡಿಗರು (ನೋಂ) ಕೊಡಗು ಜಿಲ್ಲೆ ಮತ್ತು ದಿ|ಚಂದ್ರಶೇಖರ್ ರಾವ್ ಮೆಮೋರಿಯಲ್ ಟ್ರಾಸ್ಟ್ ಮುಂಬೈ ಜಂಟೀ ಆಶ್ರಯದಲ್ಲಿ ರಾಜ್ಯ ಮಟ್ಟದ 'ಸಾಹಿತ್ಯ-ಸಾಂಸ್ಕೃತಿಕ ಸಂಭ್ರಮ' ಕಾರ್ಯಕ್ರಮ ಮತ್ತು ಕೃತಿ ಲೋಕಾರ್ಪಣೆ ಹಾಗೂ ಸಮೀಕ್ಷೆ ಮತ್ತು ಕವಿಗೋಷ್ಠಿ ಇದೆ ಬರುವ ಮೇ 3ನೇ ಶನಿವಾರ ಪೂರ್ವಾಹ್ನ ರೆಡ್ ಬ್ರಿಕ್ಸ್ ಸತ್ಕಾರ್ ಭವನ ಮಡಿಕೇರಿ ಇಲ್ಲಿ ಆಯೋಜಿಸಿದೆ.











ದಿ|ಚಂದ್ರಶೇಖರ್ ರಾವ್ ಮೆಮೋರಿಯಲ್ ಟ್ರಸ್ಟ್‌ನ ಸ್ಥಾಪಕಿ ಶ್ರೀದೇವಿ ಚಂದ್ರಶೇಖರ ರಾವ್ ಅಧ್ಯಕ್ಷತೆಯಲ್ಲಿ ಜರಗುವ 'ಸಾಹಿತ್ಯ-ಸಾಂಸ್ಕೃತಿಕ ಸಂಭ್ರಮಕ್ಕೆ ಕೊಡಗು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಇದರ ಮಾಜಿ ಅಧ್ಯಕ್ಷ ಟಿ.ಪಿ ರಮೇಶ್ ಉದ್ಘಾಟಿಸಿ ಚಾಲನೆ ನೀಡಲಿದ್ದಾರೆ .

ಚಂದ್ರಶೇಖರ್ ರಾವ್ ಟ್ರಸ್ಟ್ ನ ಉಪಾಧ್ಯಕ್ಷ ಕೆ.ಪ್ರತಾಪ್ ಆಗಮಿಸಲಿದೆ, ಮುಂಬಯಿ ಅಲ್ಲಿನ ಸಾಹಿತಿ ಹಾಗೂ ರಂಗಭೂಮಿ ಕಲಾವಿದ ಕೃತಿಕರ್ತ ಗೋಪಾಲ ತ್ರಾಸಿ ಅವರ 'ನುಡಿತೇರು' ಸಾಹಿತ್ಯ ಕಲಾ ತೋರಣ ಕೃತಿ ಹಾಗೂ ಸಾಹಿತಿ, ರಂಗಭೂಮಿ ಕಲಾವಿದ ಸಾ.ದಯಾ ಸಂಪದಿತ ದಿ|ಚಂದ್ರಶೇಖರ್ ರಾವ್ ಅವರ 'ಹರಟೆಗಳು' ಕೃತಿಯನ್ನು ಆಕಾಶವಾಣಿ ಮಡಿಕೇರಿ ಇದರ ಹಿರಿಯ ಉದ್ಘೋಷಕ ಸುಬ್ರಾಯ ಸಂಪಜೆ ಲೋಕಾರ್ಪಣೆ ಮಾಡುವರು. ಮುಂಬಯಿ ಲೇಖಕಿ ಡಾ|ಜಿ.ಪಿ ಕುಸುಮ ಅವರು ಹಟೆಗಳು ಮತ್ತು ಮಂಡ್ಯ ಲೇಖಕಿ ಶ್ವೇತಾ ಎಂ.ಯು ಅವರು ನುಡಿಸಿರಿ ಕೃತಿ ಪರಿಚಯಿಸಲಿದ್ದಾರೆ. ನಂತರ ಪುಷ್ಪಾ ಕೃಷ್ಣಾನಂದ ಶೇಟ್ ಮತ್ತು ಮುನೀರ್ ಅಹ್ಮದ್ ಅವರಿಗೆ ಗೌರವಾರ್ಪಣೆ ನಡೆಯಲಿದೆ.

ಗೋಪಾಲ ತ್ರಾಸಿ ಅವರ ಅಧ್ಯಕ್ಷತೆಯಲ್ಲಿ ಕವಿ-ಕಾವ್ಯಕಲರವ ಜರಗಿತ್ತು ಸ್ಮಿತಾ ಅಮೃತರಾಜ್ ಸಂಪಜೆ ಉದ್ಘಾಟಿಸಲಿದ್ದಾರೆ. ಗಿರೀಶ್ ಕಿಗ್ಗಾಲು, ಮಿಲನ ಭರತ, ಹೇಮಂತ್ ಪಾರೇರ, ಕೃಪಾ ದೇವರಾಜ್, ರಮ್ಯಾ ಮೂರ್ನಾಡು, ರಂಜಿತ್ ಕವಲಪಾರ, ಡಾ.ಜಿ.ಪಿ ಕುಸುಮ , ವಿನೋದ್ ಮೂಡಗದ್ದೆ, ಸರೋಜ ಅಮಾತಿ, ಸಂತೋಷ ಕುಡೆಕ್ಕಲ್, ಲೀಲಾ ದಯಾನಂದ, ಹರೀಶ್ ಕಿಗ್ಗಾಲು, ಸುನೀತಾ ಕುಶಾಲನಗರ, ಕುಮುದಾ ಶೆಟ್ಟಿ, ಸಂಗೀತಾ ರವಿರಾಜ್, ಜಾನೆಟ್ ಐ.ಜೆ, ಹರೀಶ್ ಲೀಲಾ ಮತ್ತಿತರ ಕವಿಗಳು ಭಾಗವಹಿಸಲಿದ್ದಾರೆ.

ಸಾಂಸ್ಕೃತಿಕ ಸಂಭ್ರಮ ಅಂಗವಾಗಿ ಶಿವಂ ನೃತ್ಯ ತಂಡ ಮೂರ್ನಾಡು ಹಾಗೂ ಜನನಿ ಮತ್ತು ತಂಡ ಮಡಿಕೇರಿ ಇವರು ಸಮೂಹ ನೃತ್ಯವನ್ನು ಹಾಗೂ ಜಾನಪದ ಪರಿಷತ್ ಮಡಿಕೇರಿ ತಾಲೂಕು ಘಟಕ ಸದಸ್ಯರು ಗಾಯನ ಪ್ರಸ್ತುತ ಪಡಿಸಲಿದ್ದಾರೆ.

ಈ ಕಾರ್ಯಕ್ರಮದಲ್ಲಿ ಕಲಾ ಮತ್ತು ಸಾಹಿತ್ಯಾಭಿಮಾನಿಗಳು ಪಾಲ್ಗೊಳ್ಳುವಂತೆ ಸಮರ್ಥ ಕನ್ನಡಿಗರು ಸಂಸ್ಥೆಯ ಸ್ಥಾಪಕ ಲಿಂಗೇಶ್ ಹುಣಸೂರು , ಪ್ರಧಾನ ಸಂಚಾಲಕಿ ಜಯಲಕ್ಷ್ಮಿ ಕೆ., ಮತ್ತು ಸಂಚಾಲಕರ ಬಳಗ ಮತ್ತು ಚಂದ್ರಶೇಖರ್ ರಾವ್ ಟ್ರಸ್ಟ್ ನ ಪದಾಧಿಕಾರಿಗಳು ಈ ಮೂಲಕ ವಿನಂತಿಸಿದ್ದಾರೆ.

# ದೌರ್ಜನ್ಯ ನಡೆಸುವವರ ಕೊಲ್ಲುವುದು ಕೂಡ ಧರ್ಮ

**ನಾಗುರ,ಏ.26:** ಕಾಶ್ಮೀರದ ಪಹಲ್ಯಾಮ್‌ನಲ್ಲಿ ನಡೆದ ಉಗ್ರ ದಾಳಿ ವಿಚಾರವಾಗಿ ಕಿಡಿಕಾರಿರುವ ಆರ್ ಎಸ್ ಎಸ್ ಮುಖ್ಯಸ್ಥ ಮೋಹನ್ ಭಾಗವತ್, 'ನಾವು ನಮ್ಮ ನೆರೆಹೊರೆಯವರಿಗೆ ಎಂದಿಗೂ ಹಾನಿ ಮಾಡುವುದಿಲ್ಲ, ಆದರೆ.. ದೌರ್ಜನ್ಯ ನಡೆಸುವವರನ್ನು ಕೊಲ್ಲುವುದು ಕೂಡ ಧರ್ಮ' ಎಂದು ಹೇಳಿದ್ದಾರೆ. ದೆಹಲಿಯಲ್ಲಿ 'ದಿ ಹಿಂದೂ ಪ್ರಣಾಳಿಕೆ'ಯನ್ನು ಬಿಡುಗಡೆ ಮಾಡಿ ಮಾತನಾಡಿದ ಮೋಹನ್ ಭಾಗವತ್, 'ದೌರ್ಜನ್ಯ ಎಸಗುವವರಿಗೆ ಪಾಠ ಕಲಿಸುವುದು ನಮ್ಮ ಕರ್ತವ್ಯ. ಮೊದಲನೆಯದಾಗಿ ನಾವು ನಮ್ಮ ನೆರೆಹೊರೆಯವರಿಗೆ ಹಾನಿ ಮಾಡುವುದಿಲ್ಲ. ಇದಾದ ನಂತರವೂ ಯಾರಾದರೂ ತಪ್ಪು ಮಾರ್ಗವನ್ನು ಅಳವಡಿಸಿಕೊಂಡರೆ ರಾಜನು ತನ್ನ ಪ್ರಜೆಗಳನ್ನು ರಕ್ಷಿಸಬೇಕು ಎಂದು ಹೇಳಿದರು.

ದೌರ್ಜನ್ಯ ಎಸಗುವವರಿಗೆ ಪಾಠ ಕಲಿಸುವುದು ನಮ್ಮ ಕರ್ತವ್ಯ. ರಾವಣನ ಸಂಹಾರ ಕೂಡ ಲೋಕಕಲ್ಯಾಣಕ್ಕಾಗಿ ಆಗಿತ್ತು. ದೇವರು ರಾವಣನನ್ನು ಕೊಂದ. ಇದು ಹಿಂಸೆಯಲ್ಲ, ಅಹಿಂಸೆ. ಅಹಿಂಸೆ ನಮ್ಮ ಧರ್ಮ. ದೌರ್ಜನ್ಯ ಎಸಗುವವರಿಗೆ ಧರ್ಮವನ್ನು ಕಲಿಸುವುದು ಅಹಿಂಸೆ. ನಾವು ನಮ್ಮ ನೆರೆಹೊರೆಯವರಿಗೆ ಎಂದಿಗೂ ಹಾನಿ ಮಾಡುವುದಿಲ್ಲ. ಇದರ ನಂತರವೂ ಯಾರಾದರೂ ತಪ್ಪು ಮಾರ್ಗವನ್ನು ಅಳವಡಿಸಿಕೊಂಡರೆ ಜನರನ್ನು ರಕ್ಷಿಸುವುದು ರಾಜನ ಕರ್ತವ್ಯ. ರಾಜನು ತನ್ನ ಕೆಲಸವನ್ನು ಮಾಡುತ್ತಾನೆ' ಎಂದು ಅವರು ಹೇಳಿದರು.

ಈ ದಾಳಿಯು ಧರ್ಮ ಮತ್ತು ಅಧರ್ಮದ ನಡುವಿನ ಹೋರಾಟ ಎಂಬುದನ್ನು ನೆನಪಿಸುತ್ತದೆ. ಜನರನ್ನು ಅವರ ಧರ್ಮದ ಬಗ್ಗೆ ಕೇಳಿ ನಂತರ ಅವರನ್ನು ಕೊಲ್ಲಲಾಯಿತು. ಹಿಂದೂಗಳು ಎಂದಿಗೂ ಹೀಗೆ ಮಾಡುವುದಿಲ್ಲ. ಇದು ನಮ್ಮ ಸ್ವಭಾವವಲ್ಲ. ದ್ವೇಷ ನಮ್ಮ ಸಂಸ್ಕೃತಿಯಲ್ಲಿಲ್ಲ, ಆದರೆ ನಮಗಾದ ತೊಂದರೆಯನ್ನು ಮೌನವಾಗಿ ಸಹಿಸಿಕೊಳ್ಳುವುದು ನಮ್ಮ ಸಂಸ್ಕೃತಿಯಲ್ಲಿಲ್ಲ. ನಮ್ಮ ಹೃದಯದಲ್ಲಿ ನೋವು ಇದೆ. ನಾವು ಕೋಪಗೊಂಡಿದ್ದೇವೆ. ದುಷ್ಕೃತನವನ್ನು ಕೊನೆಗೊಳಿಸಲು ನಾವು ನಮ್ಮ ಶಕ್ತಿಯನ್ನು ತೋರಿಸಬೇಕು. ರಾವಣನು ತನ್ನ ಮನಸ್ಸನ್ನು ಬದಲಾಯಿಸಿಕೊಳ್ಳಲು ನಿರಾಕರಿಸಿದ್ದರಿಂದ ಅವನನ್ನು ಸಹ ಕೊಲ್ಲಲಾಯಿತು. ಬೇರೆ ದಾರಿ ಇರಲಿಲ್ಲ. ರಾಮನು ರಾವಣನನ್ನು ಕೊಂದನು. ಆದರೆ ಅವನಿಗೆ ಸುಧಾರಣೆಗೆ ಅವಕಾಶವನ್ನು ನೀಡಲಾಯಿತು. ಅವನು ಸುಧಾರಿಸದಿದ್ದಾಗ ದೇವರೇ ಅವನನ್ನು ಕೊಂದನು' ಎಂದು ಹೇಳಿದ್ದಾರೆ.

'ರಾಜನ ಕರ್ತವ್ಯವೆಂದರೆ ತನ್ನ ಪ್ರಜೆಗಳನ್ನು ರಕ್ಷಿಸುವುದು ಮತ್ತು ದಬ್ಬಾಳಿಕೆ ಮಾಡುವವರನ್ನು ಕೊಲ್ಲುವುದು. ಅಹಿಂಸೆ ನಮ್ಮ ಮೂಲ ಸ್ವಭಾವ. ಆದರೆ ಕೆಲವು ಜನರು ಹಾಳಾಗಿರುತ್ತಾರೆ. ರಾವಣನಿಗೆ ಎಲ್ಲವೂ ಇತ್ತು. ಆದರೆ ಅವನ ಮನಸ್ಸು ಅಹಿಂಸೆಯ ವಿರುದ್ಧವಾಗಿತ್ತು. ಇದರಿಂದಾಗಿ ದೇವರು ಅವನನ್ನು ಕೊಂದನು. ಅದೇ ರೀತಿ, ಗೂಂಡಾಗಳಿಂದ ಹೊಡೆತಕ್ಕೆ ಒಳಗಾಗದಿರುವುದು ನಮ್ಮ ಕರ್ತವ್ಯ. ಅವರಿಗೆ ಪಾಠ ಕಲಿಸುವುದು ನಮ್ಮ ಕರ್ತವ್ಯ. ನಾವು ನಮ್ಮ ನೆರೆಹೊರೆಯವರಿಗೆ ಯಾವುದೇ ಹಾನಿ ಮಾಡುವುದಿಲ್ಲ. ಆದರೆ ಅವರು ತಮ್ಮ ಧರ್ಮವನ್ನು ಅನುಸರಿಸದಿದ್ದರ., ತನ್ನ ಪ್ರಜೆಗಳನ್ನು ರಕ್ಷಿಸುವುದು ರಾಜನ ಕರ್ತವ್ಯ ಎಂದು ಮೋಹನ್ ಭಾಗವತ್ ಹೇಳಿದ್ದಾರೆ.

'ನಾವು ಧರ್ಮವನ್ನು ಕೇವಲ ಒಂದು ಆಚರಣೆ ಎಂದು ಪರಿಗಣಿಸಿದ್ದೇವೆ. ಧರ್ಮವು ಪೂಜಾ ಸ್ಥಳ ಮತ್ತು ಆಹಾರ ಪದ್ಧತಿಗೆ ಸಂಬಂಧಿಸಿತ್ತು. ಅಂದರೆ ಧರ್ಮವು ಪೂಜೆ ಮತ್ತು ಏನು ತಿನ್ನಬೇಕು ಎಂಬುದಕ್ಕೆ ಸೀಮಿತವಾಗಿದೆ ಎಂದು ಪರಿಗಣಿಸಲಾಗುತ್ತದೆ. ಪ್ರತಿಯೊಬ್ಬರ ಮಾರ್ಗವು ಅವರಿಗೆ ಸರಿಯಾಗಿಯೇ ಇರುತ್ತದೆ. ನನ್ನ ಮಾರ್ಗ ನನಗೆ ಸರಿಯಾಗಿದೆ. ಆದರೆ ನಾನು ಎಲ್ಲರ ಮಾರ್ಗವನ್ನು ಸಹ ಗೌರವಿಸುತ್ತೇನೆ. ನನ್ನದು ಚೆನ್ನಾಗಿದೆ, ಇತರರದು ಕೆಟ್ಟದು ಎಂದು ಹೇಳಬಾರದು. ಇಂದು ಹಿಂದೂ ಸಮಾಜವು ಹಿಂದೂ ಧರ್ಮವನ್ನು ಅರ್ಥಮಾಡಿಕೊಳ್ಳುವ ಅವಶ್ಯಕತೆಯಿದೆ' ಎಂದು ಹೇಳಿದರು




ಕುಲ್ಗಾಮ್ ಪೊಲೀಸರು 1 ಆರ್‌ಆರ್ ಮತ್ತು 18 ಬಿಎನ್ ಸಿಆರ್‌ಪಿಎಫ್ ಜೊತೆಗೂಡಿ ಇಬ್ಬರು ಭಯೋತ್ಪಾದಕ ಸಹಚರರನ್ನು ಬಂಧಿಸಿ, ಶಸ್ತ್ರಾಸ್ತ್ರ ಮತ್ತು ಮದ್ದುಗುಂಡುಗಳನ್ನು ವಶಪಡಿಸಿಕೊಂಡಿದ್ದಾರೆ.

# ಭಾರತ-ಪಾಕಿಸ್ತಾನಕ್ಕೆ ಶಾಂತಿಯ ಪಾಠ ಮಾಡಿದ ವಿಶ್ವಸಂಸ್ಥೆ

**ವಿಶ್ವಸಂಸ್ಥೆ,ಏ.26:** ಭಾರತ ಮತ್ತು ಪಾಕಿಸ್ತಾನದ ನಡುವೆ ಮತ್ತೊಂದು ಯುದ್ಧ ನಡೆಯುವ ಎಲ್ಲಾ ಲಕ್ಷಣ ಈಗ ಗೋಚರಿಸುತ್ತಿದೆ. ಕಾಶ್ಮೀರದ ಪಹಲ್ಗಾಮ್ ಮೇಲೆ ಉಗ್ರರು ದಾಳಿ ನಡೆಸಿದ ನಂತರ ಪರಿಸ್ಥಿತಿ ಕೈಮೀರಿ ಹೋಗಿದ್ದು, ಎರಡೂ ದೇಶಗಳು ಯಾವುದೇ ಕ್ಷಣದಲ್ಲಿ ಯುದ್ಧ ಆರಂಭಿಸುವ ಭೀತಿ ಆವರಿಸಿದೆ. ಇಂತಹ ಸಮಯದಲ್ಲಿ ಜಾಗತಿಕ ಸಮುದಾಯ ಭಾರತದ ಪರವಾಗಿ ನಿಲ್ಲುತ್ತಿದ್ದು, ಉಗ್ರರಿಗೆ ತಕ್ಕ ಪಾಠ ಕಲಿಸಲು ಆಗ್ರಹಿಸುತ್ತಿದೆ. ಆದರೆ ವಿಶ್ವಸಂಸ್ಥೆ ಮಾತ್ರ ಭಾರತ ಮತ್ತು ಪಾಕಿಸ್ತಾನಕ್ಕೆ ಶಾಂತಿಯ ಪಾಠ ಮಾಡಿದೆ. ಜಾಗತಿಕ ಮಟ್ಟದಲ್ಲಿ 2 ದೊಡ್ಡ ಯುದ್ಧಗಳು ನಡೆಯುತ್ತಿದ್ದು, ಒಂದು ಕಡೆ ಇಸ್ರೇಲ್ ಮತ್ತು ಗಾಜಾ ನಡುವೆ ತಿಕ್ಕಾಟ ನಡೆಯುತ್ತಿದ್ದರೆ ಇನ್ನೊಂದು ಕಡೆ ರಷ್ಯಾ ಮತ್ತು ಉಕ್ರೇನ್ ಕೂಡ ಬಡಿದಾಡ್ತಿವೆ. ಇದರ ನಡುವೆ ಮತ್ತೊಂದು ಯುದ್ಧ ಕೂಡ ಶುರುವಾದರೆ ಜಾಗತಿಕ ಸಮುದಾಯ ನಲುಗಿ, ಬೆಚ್ಚಿ ಬೀಳುವುದು ಗ್ಯಾರಂಟಿ. ಇಂತಹ ಸಮಯದಲ್ಲಿ ವಿಶ್ವಸಂಸ್ಥೆ ಮಧ್ಯಪ್ರವೇಶ ಮಾಡಿದ್ದು ಭಾರತ ಮತ್ತು ಪಾಕಿಸ್ತಾನ ನಡುವಿನ ತಿಕ್ಕಾಟವನ್ನು ಸೂಕ್ಷ್ಮವಾಗಿ ಗಮನಿಸುತ್ತಿದೆ. ಇದರ ಜೊತೆಗೆ ಶಾಂತಿಯ ಪಾಠವನ್ನೂ ಮಾಡಿದೆ ವಿಶ್ವಸಂಸ್ಥೆ.



**ಪಾಕಿಸ್ತಾನ ಉಗ್ರರ ಕಾರ್ಖಾನೆ**

ಪಾಪಿ ಪಾಕಿಸ್ತಾನ ಉದ್ಧಾರ ಆಗುವ ಕೆಲಸಕ್ಕಿಂತ ಹಾಳು ಮಾಡುವ ಕೆಲಸವನ್ನೇ ಹೆಚ್ಚಿಸಿದೆ. ಪಾಕಿಸ್ತಾನ ಉಗ್ರರ ಕಾರ್ಖಾನೆ ಆಗಿದ್ದು, ಪದೇ ಪದೇ ಅಲ್ಲಿಂದಲೇ ಉಗ್ರರು ನುಸುಳಿ ಬರ್ತಾ ಇದ್ದಾರೆ. ಈಗಲೂ ಪಾಕಿಸ್ತಾನದ ಮೂಲಕ ನುಗ್ಗಿ ಬಂದಿದ್ದ ಉಗ್ರರು ಕಾಶ್ಮೀರದ ಪಹಲ್ಗಾಮ್ ಪ್ರದೇಶದಲ್ಲಿ ದಾಳಿ ನಡೆಸಿ 26 ಜನರನ್ನ ಕೊಲೆ ಮಾಡಿದ್ದಾರೆ. ಪ್ರವಾಸಕ್ಕೆ ಎಂದು ಪಹಲ್ಗಾಮ್ ಪ್ರದೇಶಕ್ಕೆ ಹೋಗಿದ್ದ ಕರ್ನಾಟಕ ಸೇರಿದಂತೆ ಭಾರತದ ಹಲವು ರಾಜ್ಯಗಳ ಪ್ರಜೆಗಳು, ಕಾಶ್ಮೀರದ ಸುಂದರ ವಾತಾವರಣದಲ್ಲಿ ಸುತ್ತಾಡುವ ಸಮಯದಲ್ಲೇ ಪಾಪಿ ಉಗ್ರರು ದಿಢೀರ್ ಗನ್ ಹಿಡಿದು ನುಗ್ಗಿ ಅಮಾಯಕರ ಮೇಲೆ ಶೂಟ್ ಮಾಡಿ ಹತ್ಯೆ ಮಾಡಿದ್ದರು. ಹೀಗಿದ್ದಾಗ ವಿಶ್ವಸಂಸ್ಥೆ ಕೂಡ ಉಗ್ರರ ದಾಳಿಯನ್ನ ಖಂಡಿಸಿದ್ದು, ಪರಿಸ್ಥಿತಿಯನ್ನು ಭಾರತ ಮತ್ತು ಪಾಕಿಸ್ತಾನ ಸೂಕ್ತವಾಗಿ ನಿಭಾಯಿಸಲಿ ಎಂಬ ಸಲಹೆ ನೀಡಿದೆ.

# ಖ್ಯಾತ ಆಧ್ಯಾತ್ಮ ಗುರು ಕೃಷ್ಣಾಜಿ ಸಮ್ಮುಖದಲ್ಲಿ ಚಿಂತನ ಕಾರ್ಯಕ್ರಮ



**ಬೆಂಗಳೂರು, ಏ.26:** ಜಾಗತಿಕ ಖ್ಯಾತಿ ಗಳಿಸಿರುವ ಆಧ್ಯಾತ್ಮ ಗುರು ಕೃಷ್ಣಾಜಿ ಅವರ ನೇತೃತ್ವದಲ್ಲಿ ಬೆಂಗಳೂರಿನ ತಾಜ್ ವೆಸ್ಟೆಂಡ್ ಹೋಟೆಲ್‌ನಲ್ಲಿ ಜೀವನದ ಮೌಲ್ಯ ಮತ್ತು ರಹಸ್ಯಗಳ ಬಗ್ಗೆ ವಿಶಿಷ್ಟ ಉಪನ್ಯಾಸ ಏರ್ಪಡಿಸಲಾಗಿತ್ತು.

ಸಮೃದ್ಧ ಜೀವನಕ್ಕೆ ಆಧ್ಯಾತ್ಮ ಎಷ್ಟು ಅಗತ್ಯ ಎಂಬುದನ್ನು ಗುರೂಜಿಯವರು ತಮ್ಮ ಅದ್ಭುತ ಅನುಭವ ಆಧರಿಸಿ ನೆರೆದ ಪ್ರೇಕ್ಷಕರಿಗೆ ಮನದಟ್ಟು ಮಾಡಿದರು. ನೆಮ್ಮದಿಯ ಜೀವನಕ್ಕೆ ಲೌಖಿಕ ಇಚ್ಛೆಯನ್ನು ಬದಿಗೊತ್ತಿ ಉದಾತ್ತ ಚಿಂತನೆ, ಧ್ಯಾನವನ್ನು ತಮ್ಮ ನಿತ್ಯ ಚಟುವಟಿಕೆಯಾಗಿ ಅಳವಡಿಸಿಕೊಳ್ಳಬೇಕೆಂದು ಸಲಹೆ ಮಾಡಿದರು.

ಇದಕ್ಕೂ ಮೊದಲು ಕಾರ್ಯಕ್ರಮವನ್ನು ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಎಸ್.ಇ.ಸುಧೀಂದ್ರ ಉದ್ಘಾಟಿಸಿದರು. ಮಾನವೀಯತೆಯ ನಿಸ್ವಾರ್ಥ ಸೇವೆಗಾಗಿ ಕೃಷ್ಣಾಜಿ ಮತ್ತು ಒನ್‌ನೆಸ್ ಆಂದೋಲನದ ಪಾತ್ರವನ್ನು ಅವರು ಶ್ಲಾಘಿಸಿದರು. ಶಾಸಕ ಸಿ.ಕೆ. ರಾಮಮೂರ್ತಿ, ದಕ್ಷಿಣ ಭಾರತದ ವಿಎಚ್‌ಪಿ ಮುಖ್ಯಸ್ಥ ದೀಪಕ್ ರಾಜ್‌ಗೋಪಾಲ್, ದಕ್ಷಿಣ ಭಾರತದ ಮೊದಲ ಮಹಿಳಾ ಐಪಿಎಸ್ ಅಧಿಕಾರಿ ಜೀಜಾ ಹರಿಸಿಂಗ್, ವೀರಚಕ್ರ ಪ್ರಶಸ್ತಿ ಪುರಸ್ಕೃತ ಕೆ.ಸಿ. ಕುರುವಿಲ್ಲ, ನಟ, ನಿರ್ದೇಶಕ ಅಭಿಜಿತ್ ಕಿರಣ್ ಮೊದಲಾದ ಗಣ್ಯರು ಪಾಲ್ಗೊಂಡಿದ್ದರು.

# ಅರಮನೆ ಆವರಣದಲ್ಲಿ ಕಾಫಿ ಘಮಲಿನ ಕಲರವ
## 7 ಬೀನ್ ಟೀಮ್ ವೆಬ್‌ಸೈಟ್ ಅನಾವರಣ

ಬೆಂಗಳೂರು, ಏ.26: ಬೆಂಗಳೂರು ಅರಮನೆ ಆವರಣದಲ್ಲಿ ನಡೆಯುತ್ತಿರುವ ಮೂರು ದಿನಗಳ ಭಾರತೀಯ ಅಂತಾರಾಷ್ಟ್ರೀಯ ಕಾಫಿ ಹಬ್ಬ ದಲ್ಲಿ 7ಬೀನ್ ಟೀಮ್ ಅಭಿವೃದ್ಧಿಪಡಿಸಿರುವ ವೆಬ್‌ಸೈಟ್‌ನ್ನು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಅನಾವರಣ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಬ್ರೆಜಿಲ್ ಮತ್ತು ವಿಯೆಟ್ನಾಂಗಿಂತಲೂ ನಮ್ಮ ರಾಜ್ಯದ ಮಲೆನಾಡಿನ ಕಾಫಿ ಸೊಗಡು ಬೇರೆಯೇ ಇದೆ. ಇದನ್ನು ಸರಿಯಾದ ರೀತಿಯಲ್ಲಿ ಮಾರುಕಟ್ಟೆ ಮಾಡುವ ವ್ಯವಸ್ಥೆ ಸಂಘಟಿತವಾಗಿ ನಡೆಯಬೇಕಾಗಿದೆ ಎಂದರು.

ಕಾಫಿ ಕೃಷಿ ಮತ್ತು ಅದರ ಇಳುವರಿ ಉತ್ತಮಪಡಿಸುವ ನಿಟ್ಟಿನಲ್ಲಿ 7ಬೀನ್ ಟೀಮ್ ಮಾಡುತ್ತಿರುವ ಪ್ರಯತ್ನ ಶ್ಲಾಘನೀಯ. ಪ್ರಗತಿದಾಯಕ ಚಟುವಟಿಕೆಗಳ ಕಡೆಗೆ ಎಲ್ಲಾ ಬೆಳೆಗಾರರು ಗಮನ ನೀಡಿದರೆ ಗುರಿ ಸಾಧನೆ ಮಾಡಲು ಸಾಧ್ಯವಿದೆ ಎಂದರು.

ಪ್ರತಿ ವರ್ಷವೂ ಕಾಫಿ ಮೇಳವನ್ನು ನಡೆಸುವ ಮೂಲಕ ಕಾಫಿಯ ವಿಭಿನ್ನ ಬಳಕೆಯ ಬಗ್ಗೆ ಮತ್ತು ಉಪಕರಣಗಳ ಬಳಕೆಯ ಬಗ್ಗೆ ಮಾಹಿತಿ ಜ್ಞಾನವನ್ನು ನೀಡುವಂತಾದರೆ, ಅದು ಮಾರುಕಟ್ಟೆ ವ್ಯಾಪ್ತಿಯನ್ನು ವಿಸ್ತಾರ ಮಾಡಲು ಸಾಧ್ಯವಾಗುತ್ತದೆ. ಕಾಫಿ ಬಳಕೆದಾರರ ಸಮೂಹವೂ ವೃದ್ಧಿಯಾಗಲಿದೆ ಎಂದು ತಗಡೂರು ಹೇಳಿದರು.



ಇದೇ ಸಂದರ್ಭದಲ್ಲಿ ಮಾತನಾಡಿದ ಡಾ.ಎನ್.ಕೆ.ಪ್ರದೀಪ್, ಮಣ್ಣು ಪರೀಕ್ಷೆಯಿಂದ ಹಿಡಿದು, ಮಾರುಕಟ್ಟೆವರೆಗೆ ಹಲವು ಹಂತದಲ್ಲಿ ಬೆಳೆಗಾರರಿಗೆ ಗುಣಮಟ್ಟದ ಉತ್ಪಾದನೆಗೆ ಪ್ರಾತ್ಯಕ್ಷಿಕೆ ಮತ್ತು ತರಗತಿಯೊಂದಿಗೆ ವರ್ಷದಲ್ಲಿ 12 ತರಬೇತಿಯನ್ನು ತಿಂಗಳಿಗೆ ಒಂದರಂತೆ ನೀಡುವ ವ್ಯವಸ್ಥೆ ಮಾಡಲಾಗಿದೆ. ಈ ತರಗತಿಯಲ್ಲಿ ಪಶ್ಚಿಮ ಘಟ್ಟವನ್ನು ಹಾನಿಯಾಗದ ರೀತಿಯಲ್ಲಿ ವಿಷಮುಕ್ತ ಕೃಷಿಯನ್ನು ಮಾಸುವ ಬಗ್ಗೆ ಸಮಗ್ರ ಮಾಹಿತಿಯನ್ನು ನೀಡುವುದರೊಂದಿಗೆ ನಮ್ಮ ದೇಶದಲ್ಲಿ ಸದ್ಯ 3.50 ಲಕ್ಷ ಟನ್ ಇಳುವರಿ ಇದ್ದು ಇದನ್ನು 2030 ಕ್ಕೆ 7 ಲಕ್ಷ ಟನ್‌ಗೆ ಹೆಚ್ಚಳ ಮಾಡುವ ಗುರಿಯನ್ನು ಸಾಧಿಸಲು ಹಾಗೂ ಮುಂದಿನ ಪೀಳಿಗೆಯ ಯುವಕರನ್ನು ಪುನಃ ಲಾಭದಾಯಕ ಕೃಷಿಯತ್ತ ಸೆಳೆಯಲು ನಮ್ಮ ತಂಡ ಕೆಲಸ ಮಾಡುತ್ತಿದೆ ಎಂದರು. ಇದೇ ಸಂದರ್ಭದಲ್ಲಿ 7ಬೀನ್ ಟೀಮ್‌ನ ಸಾಮಾಜಿಕ ಜಾಲತಾಣ **www.7beanteam.in** ಅನ್ನು ಅನಾವರಣ ಮಾಡಲಾಯಿತು. SCAI ನ ಅಧ್ಯಕ್ಷ ಹಾಗೂ IICF ನ ಮುಖ್ಯಸ್ಥರು ಆದ ಡಿ.ಎಂ.ಪೂರ್ಣೇಶ್ ಮತ್ತು 7ಬೀನ್ ಟೀಮ್ ಅಧ್ಯಕ್ಷ ಎಚ್.ಎಸ್.ಧರ್ಮರಾಜ್, ಉಪಾಧ್ಯಕ್ಷ ಯು.ಎಂ.ತೀರ್ಥಮಲ್ಲೇಶ್, ಕಾರ್ಯದರ್ಶಿ ಮುರುಳೀಧರ.ಎಸ್. ಬಕ್ಕರವಳ್ಳಿ, ಟ್ರಸ್ಟಿಗಳಾದ ಸಿ.ಎಸ್.ಮಹೇಶ್, ಎಚ್.ಎಚ್.ಉದಯ, ಎನ್.ಬಿ.ಉದಯಕುಮಾರ್, ಕೆ.ಎಸ್.ಸುಬ್ರಹ್ಮಣ್ಯ ಮತ್ತಿತರರು ಹಾಜರಿದ್ದರು.

# ಕಾಶ್ಮೀರದಲ್ಲಿ ಭಯೋತ್ಪಾದಕರ ದಾಳಿಗೆ ಬಲಿಯಾದ ಭರತ್ ಭೂಷಣ್ ಕುಟುಂಬಕ್ಕೆ ಎಂಇಐ ಸಂಸ್ಥೆಯಿಂದ ಒಂದು ಲಕ್ಷ ರೂ. ನೆರವು



ಕಂಪನಿಯ ಅಧ್ಯಕ್ಷರಾದ ಎಸ್.ಮನೋಹರ್ ರವರು , ವ್ಯವಸ್ಥಾಪಕ ನಿರ್ದೇಶಕಿ ಡಿ ಪದ್ಮಾವತಿ ಹಾಗೂ ಅಧಿಕಾರಿಗಳು ತೆರಳಿ ಭರತ್ ಭೂಷಣ್‌ರ ಪತ್ನಿ ಸುಜಾತಾಗೆ ಒಂದು ಲಕ್ಷ ರೂಪಾಯಿ ಆರ್ಥಿಕ ಸಹಾಯವನ್ನು ಸಂಸ್ಥೆ ವತಿಯಿಂದ ನೀಡಲಾಯಿತು.

ಈ ಸಂದರ್ಭದಲ್ಲಿ ಭರತ್ ಭೂಷಣ್ ಅವರ ಧರ್ಮಪತ್ನಿ ಹಾಗೂ ಅವರ ಮಗು ಹಾಗೂ ಭರತ್ ಭೂಷಣ್ ತಂದೆಯನ್ನು ಭೇಟಿಮಾಡಿ ಅವರಿಗೆ ಆತ್ಮ ಸ್ಥೈರ್ಯವನ್ನು ತುಂಬಲಾಯಿತು,

ಕಾಶ್ಮೀರದಲ್ಲಿ ನಡೆದ ಅತ್ಯಂತ ಹೇಯ ಕೃತ್ಯವನ್ನು ಈ ಸಂದರ್ಭದಲ್ಲಿ ಖಂಡಿಸಿ ಕೇಂದ್ರ ಹಾಗೂ ರಾಜ್ಯ ಸರ್ಕಾರ ಉಗ್ರಗಾಮಿಗಳನ್ನ ಸದೆ ಬಡಿಯುವಂತೆ ಒತ್ತಾಯಿಸಲಾಯಿತು, ಸುಜಾತಾ ಕಾಶ್ಮೀರದ ಆ ಸಂದರ್ಭದಲ್ಲಿ ಅತ್ಯಂತ ಧೈರ್ಯದಿಂದ ಉಗ್ರಗಾಮಿಗಳ ಬೆದರಿಕೆಯನ್ನು ದಿಟ್ಟತನದಿಂದ ಎದುರಿಸಿ ಮಗುವನ್ನು ಅತ್ಯಂತ ಸುರಕ್ಷತೆಯಿಂದ ಕರೆ ತಂದಿರುವ ಅವರ ಧೈರ್ಯವನ್ನು ಇಡೀ ದೇಶವೇ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಉಗ್ರಗಾಮಿಗಳ ಗುಂಡಿಗೆ ಬಲಿಯಾದ ಮುಗ್ಧರ ಆತ್ಮಕ್ಕೆ ಶಾಂತಿಯನ್ನು ಕೋರಿದರು, ಉಗ್ರ ಗಾಮಿಗಳನ್ನು ಸದೆಬಡಿಯ ಬೇಕೆಂದು ಎಲ್ಲರೂ ಒಕ್ಕೊರಲಿಂದ ಒತ್ತಾಯಿಸಿದರು. ಈ ಸಂದರ್ಭದಲ್ಲಿ ಕಂಪನಿಯ ಅಧಿಕಾರಿಗಳಾದ ಶರಣಪ್ಪ, ತಿಮ್ಮಣ್ಣ, ಸಂತೋಷ್, ಕೀರ್ತಿ ಹಾಗೂ ರೇಖಾ ಹಾಜರಿದ್ದರು.

# ವಾಹನಗಳ ಮೇಲೆ ಸರ್ಕಾರದ ಲಾಂಛನಗಳ ದುರ್ಬಳಕೆ ತಡೆಯಲು ಹೈಕೋರ್ಟ್ ಕಟ್ಟಪ್ಪಣೆ

**ಬೆಂಗಳೂರು, ಏ.26–** ಮಾಜಿ ಸಂಸದರು, ಶಾಸಕರು ಸಹಿತ ಅಧಿಕಾರ ಹೊಂದಿರದ ಜನಪ್ರತಿನಿಧಿಗಳು, ಅಧಿಕಾರಿಗಳು ರಾಷ್ಟ್ರೀಯ ತ್ರಿವರ್ಣ ಧ್ವಜ, ಲಾಂಛನ, ಚಿಹ್ನೆ, ಮುದ್ರೆ, ಹೆಸರುಗಳನ್ನು ತಮ್ಮ ವಾಹನಗಳ ನಂಬರ್ ಪ್ಲೇಟ್ ಹಾಗೂ ಲೆಟರ್‌ಹೆಡ್‌ಗಳಲ್ಲಿ ಬಳಸುವ ಖಯಾಲಿಗೆ ಬೇಸರ ವ್ಯಕ್ತಪಡಿಸಿರುವ ಹೈಕೋರ್ಟ್, ಇಂತಹ ಪ್ರವೃತ್ತಿ ತುಂಬಾ ದುರದೃಷ್ಟಕರ ಎಂದು ಹೇಳಿದೆ.ಅಲ್ಲದೆ ದೇಶದ ಗೌರವ, ಘನತೆ ಮತ್ತು ಸಾರ್ವಭೌಮತ್ವದ ಸಂಕೇತಗಳಾಗಿರುವ ರಾಷ್ಟ್ರೀಯ ಲಾಂಛನ ಮತ್ತು ಚಿಹ್ನೆಗಳ ದುರ್ಬಳಕೆ ತಡೆಯಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುವಂತೆ ಕೇಂದ್ರ ಮತ್ತು ರಾಜ್ಯ ಸರಕಾರಕ್ಕೆ ಆದೇಶಿಸಿರುವ ಹೈಕೋರ್ಟ್, ಈ ನಿಟ್ಟಿನಲ್ಲಿ ಕೆಲವು ಮಾರ್ಗಸೂಚಿ ಗಳನ್ನೂ ಹೊರಡಿಸಿದೆ. ಈ ಸಂಬಂಧ ಹೈಕೋರ್ಟ್ ಕಾನೂನು ಸೇವೆಗಳ ಸಮಿತಿ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮು। ನ್ಯಾ। ಎನ್.ವಿ. ಅಂಜಾರಿಯಾ ಹಾಗೂ ನ್ಯಾ। ಎಂ.ಐ. ಅರುಣ್ ಅವರಿದ್ದ




ವಿಭಾಗೀಯ ನ್ಯಾಯಪೀಠ ವಿಚಾರಣೆ ನಡೆಸಿದೆ.

**ಕಾಯ್ದೆಗಳ ಕಟ್ಟುನಿಟ್ಟಿನ ಜಾರಿಗೆ ನಿರ್ದೇಶನ:** ಸಾರ್ವಜನಿಕ ಸ್ಥಳಗಳು ಮತ್ತು ವಾಹನಗಳಲ್ಲಿ ರಾಷ್ಟ್ರೀಯ ಚಿಹ್ನೆಗಳು ಮತ್ತು ಲಾಂಛನಗಳ ಅನಧಿಕೃತ ಬಳಕೆ ಮತ್ತು ದುರುಪಯೋಗ ತಡೆಗಟ್ಟಲು 1950ರ ಲಾಂಛನಗಳು ಮತ್ತು ಹೆಸರುಗಳ (ಅನುಚಿತ ಬಳಕೆ ತಡೆಗಟ್ಟುವಿಕೆ) ಕಾಯಿದೆ ಮತ್ತು 1982ರ ಲಾಂಛನಗಳು ಮತ್ತು ಹೆಸರುಗಳು (ಅನುಚಿತ ಬಳಕೆ ತಡೆಗಟ್ಟುವಿಕೆ) ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿಗೆ ತರುವಂತೆ ರಾಜ್ಯ ಮತ್ತು ಕೇಂದ್ರ ಸರಕಾರಕ್ಕೆ ನಿರ್ದೇಶನ ನೀಡಿದೆ. 'ಪ್ರಸ್ತುತ ನಿಷೇಧಿಸಲಾದ ಧ್ವಜಗಳು, ಲಾಂಛನ ಗಳು, ಚಿಹ್ನೆಗಳು, ಲೋಗೋಗಳನ್ನು ತತ್ಕ್ಷಣ ತೆರವು ಮಾಡುವಂತೆ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿ ಗಳಿಗೆ ಸೂಚಿಸಬೇಕು. ಮಾಧ್ಯಮಗಳ ಮೂಲಕ ಎಚ್ಚರಿಕೆ ನೀಡಿ, ನಾಲ್ಕು ವಾರಗಳಲ್ಲಿ ತೆಗೆದು ಹಾಕಲು ಕ್ರಮ ಕೈಗೊಳ್ಳಬೇಕು.' ವಿವಿಧ ರೂಪದಲ್ಲಿರುವ ರಾಷ್ಟ್ರೀಯ ಲಾಂಛನ ಮತ್ತು ರಾಷ್ಟ್ರೀಯ ಚಿಹ್ನೆಗಳ ದುರುಪಯೋಗ ವಾಗದಂತೆ ತಡೆಗಟ್ಟಬೇಕು. ಈ ಸಂಬಂಧ ಅಧಿಕಾರಿಗಳಲ್ಲಿ ಜಾಗೃತಿ ಮತ್ತು ಜವಾಬ್ದಾರಿ ಮೂಡಿಸುವುದಕ್ಕಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಅನಧಿಕೃತವಾಗಿ ಬಳಕೆ ಮಾಡುವುದು ಕಂಡು ಬಂದರೆ ಕಠಿನ ಕ್ರಮಕ್ಕೆ ಮುಂದಾಗಬೇಕು.' ರಾಷ್ಟ್ರೀಯ ಚಿಹ್ನೆಗಳು ಮತ್ತು ಲಾಂಛನಗಳ ದುರುಪಯೋಗಕ್ಕೆ ಸಂಬಂಧಿಸಿ ದೂರುಗಳು ಬಂದಲ್ಲಿ ಅದನ್ನು ದಾಖಲಿಸಿಕೊಂಡು, ಕ್ರಮ ಕೈಗೊಳ್ಳುವುದ ಕ್ಕಾಗಿ ಅಧಿಕಾರಿಗಳಿಗೆ ಅಗತ್ಯ ಸುತ್ತೋಲೆಗಳನ್ನು ಹೊರಡಿಸಬೇಕು. ಯಾವುದೇ ವ್ಯಕ್ತಿ, ಸಂಸ್ಥೆ ಅಥವಾ ಸಂಸ್ಥೆಯಿಂದ ರಾಷ್ಟ್ರೀಯ ಚಿಹ್ನೆಗಳು ದುರುಪಯೋಗ ಮತ್ತು ಅನಧಿಕೃತವಾಗಿ ಬಳಕೆ ವಿರುದ್ಧ ಜಾಗೃತಿ ಮೂಡಿಸಲು ಶಾಲಾ ವಿದ್ಯಾರ್ಥಿಗಳು ಮತ್ತು ಕಾನೂನು ಪದವಿ ವಿದ್ಯಾರ್ಥಿಗಳನ್ನು ಭಾಗಿಯಾಗುವಂತೆ ಮಾಡಬೇಕು.

## ಹಣ ವರ್ಗಾವಣೆ ಅಪರಾಧದಲ್ಲಿ ಭಾಗಿ
# ಐಶ್ವರ್ಯಾ ಗೌಡ ಮನೆಯಲ್ಲಿ 2.25 ಕೋಟಿ ರೂ. ನಗದು ಪತ್ತೆ: 14 ದಿನ ಇ.ಡಿ ವಶಕ್ಕೆ

**ಬೆಂಗಳೂರು, ಏ.26–** ಐಶ್ವರ್ಯ ಗೌಡ ನಿವಾಸದಲ್ಲಿ 2.25 ಕೋಟಿ ನಗದು ಪತ್ತೆಯಾಗಿದೆ ಎಂದು ಇಡಿ ಅಧಿಕಾರಿಗಳು ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿದ್ದಾರೆ. ಐಶ್ವರ್ಯ ಗೌಡ, ಮಾಜಿ ಸಚಿವ ವಿನಯ್ ಕುಲಕರ್ಣಿ, ಹಾಗೂ ಶಿಲ್ಪಾಗೌಡ ನಿವಾಸ ಸೇರಿದಂತೆ 14 ಕಡೆ ಇತ್ತೀಚಿಗೆ ಇಡಿ ಅಧಿಕಾರಿಗಳು ದಾಳಿ ನಡೆಸಿದರು.

ಕೋಟ್ಯಾಂತರ ರೂಪಾಯಿ ಮೌಲ್ಯದ ಚಿನ್ನಾಭರಣ ವಂಚಿಸಿದ್ದ ಐಶ್ವರ್ಯ ಗೌಡ. PMLAಕಾಯ್ದೆಯ ಅಡಿ ಇಡಿ ಅಧಿಕಾರಿಗಳು ಪ್ರಕರಣ ದಾಖಲಿಸಿಕೊಂಡಿದ್ದರು.

ಹಣ ವರ್ಗಾವಣೆ ಅಪರಾಧದಲ್ಲಿ ಭಾಗಿಯಾಗಿರುವುದು ಕಂಡುಬಂದ ಕಾರಣ ಬೆಂಗಳೂರಿನ ಇಡಿ, ಐಶ್ವರ್ಯ ಗೌಡ ಅವರನ್ನು 24.04.2025 ರಂದು ಪಿಎಂಎಲ್‌ಎ, 2002 ರ ಅಡಿಯಲ್ಲಿ ಬಂಧಿಸಿದೆ. ಬಂಧನದ ನಂತರ, ಅವರನ್ನು ಗೌರವಾನ್ವಿತ ವಿಶೇಷ ನ್ಯಾಯಾಲಯದ (ಪಿಎಂಎಲ್‌ಎ) ಮುಂದೆ ಹಾಜರುಪಡಿಸಲಾಯಿತು. ಮತ್ತು ಗೌರವಾನ್ವಿತ ನ್ಯಾಯಾಲಯವು



ಆರೋಪಿಯ ಇಡಿ ಕಸ್ಟಡಿಗೆ ನೀಡಲು ಅದೇಶಿಸಿತು.

ಪಿಎಂಎಲ್‌ಎ, 2002ರ ನಿಬಂಧನೆಗಳ ಅಡಿಯಲ್ಲಿ ಐಶ್ವರ್ಯ ಗೌಡ ಮತ್ತು ಅವರ ಸಹಚರರಿಗೆ ಸಂಬಂಧಿಸಿದ 14 ಸ್ಥಳಗಳಲ್ಲಿ ಇಡಿ 24.04.2025 ಮತ್ತು 25.04.2025 ರಂದು ಶೋಧ ಕಾರ್ಯಾಚರಣೆಗಳನ್ನು ನಡೆಸಿತು. ಶೋಧ ಕಾರ್ಯಾಚರಣೆಗಳ ಸಮಯದಲ್ಲಿ, ವಿವಿಧ ಅಪರಾಧ ದಾಖಲೆಗಳು, ಡಿಜಿಟಲ್ ಸಾಧನಗಳು ಮತ್ತು ರೂ. 2.25 ಕೋಟಿ (ಅಂದಾಜು) ವರೆಗಿನ ನಗದು ಪತ್ತೆಯಾಗಿ ವಶಪಡಿಸಿಕೊಳ್ಳಲಾಗಿದೆ ಎಂದು ಇಡೀ ತನ್ನ ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದೆ.

## ಸಚಿವ ರಾಮಲಿಂಗಾರೆಡ್ಡಿ ನೇತೃತ್ವ
# ಬಿಟಿಎಂ ಕಾಂಗ್ರೆಸ್‌ನಿಂದ ಪಹಲ್ಗಾಮ್ ಹತ್ಯೆ ಖಂಡಿಸಿ ಶ್ರದ್ಧಾಂಜಲಿ ಮೆರವಣಿಗೆ




ಬೆಂಗಳೂರು: ಕಾಶ್ಮೀರದ ವಹಲಾಮ್ ನಲ್ಲಿ ನಡೆದ ಭಯೋತ್ಪಾದಕರ ಕೃತ್ಯಗಳನ್ನು ಖಂಡಿಸಿ ಹಾಗೂ ಮೃತರ ಆತ್ಮಕ್ಕೆ ಶಾಂತಿಕೋರಿ ಬಿಟಿಎಂ ವಿಧಾನಸಭಾ ಕ್ಷೇತ್ರದ ಫೋರಮ್ ಮಾಲ್ ಹತ್ತಿರ ಮತ್ತು ಗಂಗೋತ್ರಿ ಮತ್ತದ ಹತ್ತಿರ ಸಚಿವ ರಾಮಲಿಂಗಾ ರೆಡ್ಡಿ ನೇತೃತ್ವದಲ್ಲಿ ಬಿಟಿಎಂ ಕಾಂಗ್ರೆಸ್ ನಿಂದ ಮೌನ ಶ್ರದ್ಧಾಂಜಲಿ ಆಯೋಜಿಸಲಾಗಿತ್ತು.

ಘಟನೆಯಲ್ಲಿ ಮಡಿದ ಕುಟುಂಬಗಳಿಗೆ ಧೈರ್ಯ ತುಂಬುವ ಮೂಲಕ ನಿಮ್ಮೊಂದಿಗೆ ನಾವಿದ್ದೇವೆ ಎಂಬ ಸಂದೇಶವನ್ನು ನೀಡಲಾಯಿತು. ಘಟನೆಯಲ್ಲಿ ಭದ್ರತಾ ವೈಫಲ್ಯವಿರುವುದು ಕಂಡುಬಂದಿದ್ದು ಈ ಸಂಬಂಧ ಕೇಂದ್ರ ಸರಕಾರ ಸೂಕ್ತ ತನಿಖೆ ನಡೆಸಿ ಕ್ರಮ ತೆಗೆದುಕೊಳ್ಳಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಪ್ರತಿಭಟನಾ ಮೆರವಣಿಗೆಯಲ್ಲಿ ಮುಸ್ಲಿಂ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ವೆಹಲ್ಲಾಮ್ ಉಗ್ರರ ಕೃತ್ಯವನ್ನು ಖಂಡಿಸಿದರು. ಈ ಮೌನ ಶ್ರದ್ಧಾಂಜಲಿಯಲ್ಲಿ ಮಾಜಿ ಬಿಬಿಎಂಪಿ ಸದಸ್ಯರು, ಬ್ಲಾಕ್ ಅಧ್ಯಕ್ಷರು, ವಾರ್ಡ್ ಅಧ್ಯಕ್ಷರು, ಎಲ್ಲಾ ಕ್ಷೇತ್ರದ ಮುಖಂಡರು ಮತ್ತು ಸಾರ್ವಜನಿಕರು ಭಾಗವಹಿಸಿದ್ದರು.

# ಮಹೇಶ್ ಜೋಶಿಗೆ ಅಗತ್ಯವಿದ್ದರೆ ಭದ್ರತೆ ಒದಗಿಸಲು ಸರ್ಕಾರಕ್ಕೆ ಹೈಕೋರ್ಟ್ ಮೌಖಿಕ ಸೂಚನೆ

**ಬೆಂಗಳೂರು, ಏ.26–** 'ತಮಗೆ ಜೀವ ಬೆದರಿಕೆ ಇದೆ' ಎಂದು ಆತಂಕ ವ್ಯಕ್ತಪಡಿಸಿರುವ, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಹೇಶ್ ಜೋಶಿ ಅವರಿಗೆ ಅಗತ್ಯವಿದ್ದರೆ ಸೂಕ್ತ ಭದ್ರತೆ ಒದಗಿಸಿ' ಎಂದು ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಮೌಖಿಕ ನಿರ್ದೇಶನ ನೀಡಿದೆ.

ಈ ಸಂಬಂಧ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಹೇಶ್ ಜೋಶಿ ಸಲ್ಲಿಸಿರುವ ರಿಟ್ ಅರ್ಜಿಯನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ಶನಿವಾರ ವಿಚಾರಣೆ ನಡೆಸಿತು.



ವಿಚಾರಣೆ ವೇಳೆ, 'ಜೋಶಿ ಅವರಿಗೆ ಅಗತ್ಯವಿದ್ದರೆ ಸೂಕ್ತ ಭದ್ರತೆಯನ್ನು ಒದಗಿಸಿ' ಎಂದು ಪ್ರಾಸಿಕ್ಯೂಷನ್ ಪರ ಹಾಜರಿದ್ದ ರಾಹುಲ್ ಕಾರ್ಯಪ್ಪ ಅವರಿಗೆ ನಿರ್ದೇಶಿಸಿದ ನ್ಯಾಯಪೀಠ ಲಿಖಿತ ಆದೇಶವನ್ನು ಕಾಯ್ದಿರಿಸಿತು.

'ಕಳೆದ ವರ್ಷ ಮಂಡ್ಯದಲ್ಲಿ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ಜರುಗಿದ ಗಳಿಗೆಯಿಂದ ನನಗೆ ಜೀವ ಬೆದರಿಕೆಯ ಆಡಿಯೊ–ವಿಡಿಯೊ ಕರೆಗಳು ಬರುತ್ತಿವೆ. ಇದರಿಂದ ನನ್ನ ಜೀವಕ್ಕೆ ಅಪಾಯ ವಿದ್ದು, ದಿನದ 24 ಗಂಟೆಯೂ ಗನ್‌ಮ್ಯಾನ್ ಭದ್ರತೆ ಜೊತೆಗೆ ಸೂಕ್ತ ಪೊಲೀಸ್ ರಕ್ಷಣೆ ಒದಗಿಸಲು ಸರ್ಕಾರಕ್ಕೆ ನಿರ್ದೇಶಿಸ ಬೇಕು' ಎಂದು ಮಹೇಶ್ ಜೋಶಿ ಕೋರಿದ್ದಾರೆ. ಜೋಶಿ ಪರ ಹಿರಿಯ ವಕೀಲ ಎಸ್.ಬಸವ ರಾಜು ವಾದ ಮಂಡಿಸಿದ್ದರು.

# ಹಿಂದೂಗಳ ಹತ್ಯೆಯ ಹೊಣೆ ಕೇಂದ್ರ ಸರ್ಕಾರದ್ದೇ: ಸಂತೋಷ್ ಲಾಡ್

**ಬೆಂಗಳೂರು, ಏ.26–** ಕಳೆದ 11 ವರ್ಷಗಳಿಂದಲೂ ಕೇಂದ್ರ ಸರ್ಕಾರ ದಿನದ 24 ಗಂಟೆಯೂ ಮುಸ್ಲಿಮರನ್ನು ಅಂತ ಬೈಯೋದು ಬಿಟ್ಟರೆ ಬೇರೇನು ಮಾಡಿಲ್ಲ ಎಂದು ಸಚಿವ ಸಂತೋಷ್ ಲಾಡ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಸರ್ಜಿಕಲ್ ಸ್ಟ್ರೈಕ್ ಏನಾಯ್ತು?ಪುಲ್ವಾಮಾ ದಾಳಿ ಏನಾಯ್ತು? ಯಾರೂ ಚರ್ಚೆ ಮಾಡ್ತಿಲ್ಲ ಯಾಕೆ..? ಹಿಂದೂ ಪರವಾಗಿ ಬಹಳ ಮಮತೆ ಹೊಂದಿರುವ ಬಿಜೆಪಿ ಕೇಂದ್ರ ಸರ್ಕಾರವೇ ಹಿಂದೂಗಳನ್ನು ಕೊಳ್ಳೆ ಹೊಡೆದು, ಲೂಟಿ ಮಾಡಿ, ಕೊಂದಿರೋದು. 2014ರಿಂದ ಆಗಿರುವ ಹಿಂದೂಗಳ ಹತ್ಯೆಯ ಹೊಣೆಯನ್ನು ಕೇಂದ್ರ ಸರ್ಕಾರವೇ ಹೊರಬೇಕು ಎಂದರು.

20 ರಾಜ್ಯಗಳಲ್ಲಿ ನಿಮ್ಮ ಪಕ್ಷದವರೇ ಸಿಎಂ, ನೀವೆ ಪಿಎಂ, ಬರೀ ಹಿಂದೂ ಮುಸ್ಲಿಂ ಬಿಟ್ಟರೆ ಬೇರೆ ಏನೂ ಇಲ್ಲ. ಸರ್ಕಾರವೇ ತಮ್ಮ ವೈಫಲ್ಯ ಅಂತ ಹೇಳಿದೆ. ಆರ್ಟಿಕಲ್ 370 ರದ್ದು ಮಾಡಿದ್ದು ಇವರೇ. ಎಲ್ಲಾ ನಮ್ಮ ಕಂಟ್ರೋಲ್ ನಲ್ಲೇ ಇದೆ ಅಂದ್ರು. ನಾನು ನೋಡಿದಂತೆ ಅಲ್ಲಿನ ಲೋಕಲ್ ಜನ ನಮಗಿಂತ ಹೆಚ್ಚಾಗಿ ಅಲ್ಲಿನ ಜನ ರಕ್ತ ಕಣ್ಣೀರು ಹಾಕ್ತಿದ್ದಾರೆ. ಅಲ್ಲಿ ಹೇಗೆ ಬಂದೂಕು ಬಂತು, ಅವರು ಹೇಗೆ ಬಂದ್ರು ಅದರ ಬಗ್ಗೆ ಚರ್ಚೆ ಮಾಡ್ತಿಲ್ಲ ಎಂದು ವಾಗ್ದಾಳಿ ನಡೆಸಿದರು.

ನಾನು ಅಲ್ಲೇ ಇದ್ದೆ. ರಕ್ತಸಿಕ್ತಗೊಂಡ ಪ್ರತಿಯೊಬ್ಬರನ್ನು ಹೆಗಲಮೇಲೆ ಹೊತ್ತುಕೊಂಡು ಆರೇಳು ಕಿಲೋ ಮೀಟರ್ ಕೆಳಗೆ ಬಂದಿದ್ದಾರೆ. ಅದರ ಬಗ್ಗೆ ಒಂದಾದರೂ ಒಳ್ಳೆಯದು ಮಾತಾಡಬಾರದಾ? ಎರಡು ಸಾವಿರದಷ್ಟು ಜನರನ್ನು ಸ್ಥಳಾಂತರಿಸಿದ್ದು ಹೆಚ್ಚಿನವರೂ ಅಲ್ಲಿನ ಮುಸ್ಲಿಮರೇ. ಅದರ ಬಗ್ಗೆ ಯಾವುದೇ ಚರ್ಚೆ ಬೇಡ್ವಾ? ಈ ದೇಶದಲ್ಲಿ ಬಹುತೇಕ ಭಯೋತ್ಪಾದಕ ಚಟುವಟಿಕೆಗಳು ನಡೆದಿರುವಂಥದ್ದು ಪಾಕಿಸ್ತಾನದ ಭಾಗದಿಂದಲೇ. ಆದರೆ ಈಗ ಯಾಕೆ ಜಾತಿ ಎತ್ತಿ ಮಾತನಾಡುತ್ತೀರಿ. ಪುಲ್ವಾಮಾದಲ್ಲಿ ದಾಳಿ ಮಾಡಿದವರು ಯಾವ ಜನಾಂಗದವರು? ಬಲಿಯಾದವರು ಯಾವ ಜನಾಂಗದವರು? ಎಂದು ಪ್ರಶ್ನಿಸಿದರು.

ಆಗಿರುವ ಘಟನೆ ಸಮರ್ಥಿಸಿಕೊಳ್ಳುವಂತಹ ವಿಚಾರವೇ ಅಲ್ಲ. ರಾಜಕೀಯ, ಧಾರ್ಮಿಕವಾಗಿ ಎಲ್ಲರೂ ಈ ಘಟನೆಯನ್ನು ಖಂಡಿಸಿದ್ದಾರೆ.



ಬಿಜೆಪಿಯವರಿಗೆ ತಮ್ಮ ಬೇಳೆ ಬೇಯಬೇಕು. ಚುನಾವಣೆ ಗೆಲ್ಲಬೇಕು. ಬಿಹಾರ ಚುನಾವಣೆ ಪ್ರಚಾರದಲ್ಲಿ ಕೇವಲ ಪಾಕಿಸ್ತಾನವನ್ನು ಮುಗಿಸಿ ಬಿಡುತ್ತೇನೆ ಎಂದು ಹೇಳಿದ್ದೇ ವಿನಃ ಬಿಹಾರದಲ್ಲಿ ಏನು ಮಾಡಿದ್ದಾರೆ ಎಂಬುವುದನ್ನು ಹೇಳುತ್ತಿಲ್ಲ. ಅಲ್ಲಿನ ತೀರಾ ಹಿಂದುಳಿದ ಜಿಲ್ಲೆಯ ವಾರ್ಷಿಕ ತಲಾ ಆದಾಯ ಅಂದಾಜು 42000 ರೂ. ಇರಬಹುದು. ಆದರೆ ಚುನಾವಣೆ ಮುಗಿಯುವ ವರೆಗೂ ಇದ್ಯಾವುದರ ಬಗ್ಗೆಯೂ ಮಾತನಾಡದೇ ಕೇವಲ ಪಾಕಿಸ್ತಾನ, ಮುಸಲ್ಮಾನ, ಅಫಘಾನಿಸ್ತಾನ, ತಾಳಿ, ಮಂಗಳ ಸೂತ್ರದ ಬಗ್ಗೆ ಮಾತ್ರ ಮಾತನಾಡುತ್ತಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಶ್ರೀನಗರದಲ್ಲಿ ಹೆಜ್ಜೆ ಹೆಜ್ಜೆಗೂ ಚೆಕ್ಪೋಸ್ಟ್ ಇದೆ. ಒಂದು ಹುಳನೂ ತಪ್ಪಿಸಿಕೊಂಡು ಹೋಗೋಕೆ ಆಗಲ್ಲ. ಗೃಹ ಸಚಿವರನ್ನ ಕೇಳುತ್ತಿದ್ದೇನೆ, ದಾಳಿ ನಡೆದಾಗ ಯಾಕೆ ಒಬ್ಬ ಸೆಕ್ಯೂರಿಟಿ ಕೂಡಾ ಇಲ್ಲ.? ಇದರ ಬಗ್ಗೆ ಚರ್ಚೆ ಆಗಬೇಕೇ ವಿನಃ ಬೇರೆಯದ್ದಕ್ಕಲ್ಲ. ಮಾತಿಗೆ ಮುನ್ನ ತಮ್ಮ ವೈಫಲ್ಯ ಮುಚ್ಚಿಕೊಳ್ಳಲು ಹಿಂದೂ–ಮುಸ್ಲಿಂ ಅಂತಾರೆ. ಹಾಗಾದ್ರೆ ನಿಮ್ಮ ಅವಧಿಯಲ್ಲಿ ಹಿಂದೂಗಳಿಗೆ ಅನ್ಯಾಯ ಆಯ್ತು ಅಂತ ಒಪ್ಪಿಕೊಳ್ಳಿ. ಇಂತಹ ದೊಡ್ಡ ಘಟನೆ ನಡೆದರೂ ಪ್ರಧಾನಿ ಮೋದಿ ಬಿಹಾರ ಚುನಾವಣೆ ಪ್ರಚಾರದಲ್ಲಿ ಭಾಗವಹಿಸ್ತಾರೆ ಅಂತ ಕೇಂದ್ರದ ವಿರುದ್ಧ ಹರಿಹಾಯ್ದರು.

ಕಳೆದ 11 ವರ್ಷಗಳಲ್ಲಿ ಎಷ್ಟು ಭಯೋತ್ಪಾದಕ ಕೃತ್ಯಗಳು ನಡೆದಿವೆಯೋ, ಎಷ್ಟು ಜನ ಜೀವ ಕಳೆದುಕೊಂಡಿದ್ದಾರೋ ಅದರ ಬಗ್ಗೆ ಕೇಂದ್ರ ಸರ್ಕಾರ ಬಹಿರಂಗ ಚರ್ಚೆ ನಡೆಸಬೇಕು. ತಮ್ಮ ಆಡಳಿತ ಅವಧಿಯಲ್ಲಿ ಮೋದಿಯವರು ದೇಶಕ್ಕೆ ನೀಡಿದ ಕೊಡುಗೆ ಏನೂ ಇಲ್ಲ.

# ಕೆಎಎಸ್ ಪೂರ್ವಭಾವಿ ಮರುಪರೀಕ್ಷೆ ಮಾಡಲು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಗ್ರಹ

**ಬೆಂಗಳೂರು, ಏ.26–** ರಾಜ್ಯದಲ್ಲಿ ಇತ್ತೀಚೆಗೆ ನಡೆದ ಕೆಎಎಸ್ ಪೂರ್ವ ಬಾವಿ ಪರೀಕ್ಷೆಯಲ್ಲಿನ ಮರು ಪರೀಕ್ಷೆಯ 2 ಪತ್ರಿಕೆಗಳಲ್ಲಿ 79 ದೋಷಗಳಿದ್ದರೂ ಕೆಪಿಎಸ್ಸಿ ಕೇವಲ 5 ಪ್ರಶ್ನೆಗಳಿಗೆ ಮಾತ್ರ ಕೃಪಾಂಕ ನೀಡುವ ಮೂಲಕ ಕನ್ನಡ ಮಾಧ್ಯಮದ ಪರೀಕ್ಷಾರ್ಥಿಗಳಿಗೆ ಅನ್ಯಾಯ ಮಾಡಿದೆ. ಕೆಎಎಸ್ ಪೂರ್ವಭಾವಿ ಮರುಪರೀಕ್ಷೆ ಮಾಡ ಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಗ್ರಹಿಸಿದ್ದಾರೆ.

ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿರುವ ವಿಜಯೇಂದ್ರ, ಕೆಪಿಎಸ್ಸಿಯ ನಿರಂತರ ಎಡವಟ್ಟುಗಳನ್ನು ಸಹಿಸದೇ ಪರೀಕ್ಷಾರ್ಥಿಗಳು ನ್ಯಾಯಾಲಯದ ಮೊರೆ ಹೋಗಿದ್ದರು. ಈ ಹಿಂದೆ ತಾವೇ ಸದನದಲ್ಲಿ ಹೇಳಿದಂತೆ ನ್ಯಾಯಾಲಯದ ತೀರ್ಪು ಬಂದ ಕೂಡಲೇ ಪರೀಕ್ಷಾರ್ಥಿಗಳಿಗೆ ಆಗಿರುವ ಅನ್ಯಾಯ ಸರಿಪಡಿಸುವುದಾಗಿ ತಿಳಿಸಿದ್ದೀರಿ ಎಂದು ಪತ್ರದಲ್ಲಿ ವಿವರಿಸಿದ್ದಾರೆ.

ಕರ್ನಾಟಕ ಲೋಕಸೇವಾ ಆಯೋಗ ನಡೆಸುತ್ತಿ ರುವ ಬಹುತೇಕ ಪರೀಕ್ಷೆಗಳಲ್ಲಿ ಗೊಂದಲ, ಲೋಪಗಳು, ಭಾಷಾಂತರ ದೋಷಗಳು ಪುನರಾವರ್ತನೆ ಯಾಗುತ್ತಲೇ ಇರುವುದು ಅತ್ಯಂತ ಬೇಜವಾಬ್ದಾರಿ ಹಾಗೂ ನಾಚಿಕೆಗೇಡಿನ ವಿಷಯ ವಾಗಿದೆ. ಈ ಹಿಂದೆ ಕನ್ನಡ ಭಾಷಾ ಪರೀಕ್ಷಾರ್ಥಿಗಳ ಪ್ರಶ್ನೆ ಪತ್ರಿಕೆಗಳನ್ನು ಸಮರ್ಪಕವಾಗಿ ಭಾಷಾಂತರಿಸದೇ ಎಡವಟ್ಟು ಮಾಡಿ ಲಕ್ಷಾಂತರ ಪರೀಕ್ಷಾರ್ಥಿಗಳ ಆಕ್ರೋಶಕ್ಕೆ ಕಾರಣ ವಾಗಿತ್ತು. ಕರ್ನಾಟಕದ ಮಾತೃಭಾಷೆ ಯಲ್ಲಿಯೇ ದೋಷಪೂರಿತ ಪ್ರಶ್ನೆಗಳನ್ನು ನೀಡಿ ಕೆಎಎಸ್ ಪರೀಕ್ಷಾ ರ್ಥಿಗಳನ್ನು ಆತಂಕ ಹಾಗೂ ಗೊಂದಲಕ್ಕೆ ದೂಡುತ್ತಿರುವ ಆಯೋಗದ ನಡೆಯು ಕ್ಷಮೆಗೆ ಅರ್ಹವಲ್ಲ. ಸಂಬಂಧಿಸಿದವರ ಬೇಜವಾಬ್ದಾರಿತನ ಪದೇ ಪದೇ ಮರುಕಳಿಸುತ್ತಿರುವುದು ಕೆಪಿಎಸ್ಸಿ ವೈಫಲ್ಯ ಹಾಗೂ ರಾಜ್ಯ ಸರ್ಕಾರದ ಅಸಮರ್ಥ ಆಡಳಿತಕ್ಕೆ ಹಿಡಿದ ಕೈಗನ್ನಡಿ ಎಂದು ವಿಜಯೇಂದ್ರ



ಕಿಡಿಕಾರಿದ್ದಾರೆ.ಸದ್ಯ ನ್ಯಾಯಾಲಯ 34 ಅಭ್ಯರ್ಥಿಗಳಿಗೆ ಮರು ಪರೀಕ್ಷೆಗೆ ಹಾಜರಾಗಲು ಅವಕಾಶ ಕಲ್ಪಿಸಿದೆ. ಆದರೆ ಉಳಿದ ಅಭ್ಯರ್ಥಿಗಳ ಭವಿಷ್ಯದ ಬಗ್ಗೆ ಸರ್ಕಾರ ಗಂಭೀರವಾಗಿ ಚಿಂತಿಸಿ, ಎಲ್ಲಾ ಅಭ್ಯರ್ಥಿಗಳಿಗೂ ಮರುಪರೀಕ್ಷೆ ಬರೆಯಲು ಅವಕಾಶ ಕಲ್ಪಿಸುವುದು ನ್ಯಾಯೋಜಿತ ಕ್ರಮವಾಗಿದೆ. ಈ ನಿಟ್ಟಿನಲ್ಲಿ ತಾವು ಜರೂರು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸುವೆ. ತಮ್ಮ ಭವ್ಯ ಭವಿಷ್ಯದ ಕನಸು ಹೊತ್ತು ಪರೀಕ್ಷೆ ಎದುರಿಸುವ ಅವಕಾಶಕ್ಕಾಗಿ ಪರಿತಪಿಸುತ್ತಿರುವ ಯುವ ಜನರ ನಿರೀಕ್ಷೆಯನ್ನು ತಾವು ಹುಸಿಗೊಳಿಸುವುದಿಲ್ಲ ಎಂದು ನಂಬಿರುವೆ ಎಂದು ಪತ್ರದ ಮೂಲಕ ಸಿಎಂಗೆ ಮನವಿ ಮಾಡಿದ್ದಾರೆ.




ಜಮ್ಮು ಮತ್ತು ಕಾಶ್ಮೀರದಲ್ಲಿ ಜನರ ಮೇಲೆ ನಡೆದ ಭಯೋತ್ಪಾದಕ ದಾಳಿಗಳನ್ನು ಖಂಡಿಸಿ ಮುಸ್ಲಿಂ ಸಮುದಾಯದ ಮುಖಂಡರು ಶನಿವಾರ ಮೈಸೂರಿನಲ್ಲಿ ಪ್ರತಿಭಟನೆ ನಡೆಸಿದರು.

# ಸ್ವಾತಂತ್ರ್ಯ ಹೋರಾಟದ ಇತಿಹಾಸದಲ್ಲಿ ಚನ್ನಬಸಪ್ಪ ಕುಳಗೇರಿ ಅಮರ ನಾಯಕ: ಇಬ್ರಾಹಿಂ

**ಕಲಬುರಗಿ, ಏ.26–** ಕಲ್ಯಾಣ ಕರ್ನಾಟಕದ ಸ್ವಾತಂತ್ರ್ಯ ಹೋರಾಟದ ಇತಿಹಾಸದಲ್ಲಿಯೇ ಅಮರ ನಾಯಕನಾಗಿ ಗುರುತಿಸಿಕೊಂಡಿರುವ ಸ್ವಾತಂತ್ರ್ಯ ಯೋಧ ದಿವಂಗತ ಚನ್ನಬಸಪ್ಪ ಕುಳಗೇರಿ ಅವರ ಹೋರಾಟ ಮತ್ತು ಸೇವೆ ಇತಿಹಸದಲ್ಲಿ ಅಮರವಾಗಿರುತ್ತಾರೆ. ಅವರ ಸೇವೆಯನ್ನು ದಾಖಲಿಸಿರುವ ಕೃತಿ ಲೋಕಾರ್ಪಣೆ ಆಗಿದೆ ಎಂದು ಕೇಂದ್ರದ ಮಾಜಿ ಸಚಿವ ಸಿ.ಎಂ. ಇಬ್ರಾಹಿಂ ಅವರು ಹೇಳಿದರು.



ಕಲಬುರಗಿ ಜಿಲ್ಲೆಯ ಜೇವರ್ಗಿ ಅಂಬೇಡ್ಕರ್ ಭವನದಲ್ಲಿ ಆಯೋಜಿಸಿದ ಸ್ವಾತಂತ್ರ್ಯ ಹೋರಾಟಗಾರರ ಚನ್ನಬಸಪ್ಪ ಕುಳಗೇರಿ ಅವರ 97ನೇ ಜಯಂತೋತ್ಸವ 'ಕೆ.ಚನ್ನಬ ಸಪ್ಪ ಕುಳಗೇರಿ ಅವರ ಹೋರಾಟ, ಸೇವೆ, ಸಾಧನೆ'ಯನ್ನೊಳಗೊಂಡ ಕೃತಿಯನ್ನು ಸಿಎಂ ಇಬ್ರಾಹಿಮ್ ಲೋಕಾರ್ಪಣೆ ಮಾಡಿದರು. ವಿವಿಧ ಮಠಾಧಿಪತಿಗಳೂ ಭಾಗವಹಿಸಿದ್ದರು.

ಜಿಲ್ಲೆಯ ಜೇವರ್ಗಿ ಅಂಬೇಡ್ಕರ್ ಭವನದಲ್ಲಿ ಆಯೋಜಿಸಿದ ಸ್ವಾತಂತ್ರ್ಯ ಹೋರಾಟಗಾರರ ಚನ್ನಬಸಪ್ಪ ಕುಳಗೇರಿ ಅವರ 97ನೇ ಜಯಂತೋತ್ಸವ 'ಕೆ.ಚನ್ನಬಸಪ್ಪ ಕುಳಗೇರಿ ಅವರ ಹೋರಾಟ, ಸೇವೆ, ಸಾಧನೆ'ಯನ್ನೊಳಗೊಂಡ ಕೃತಿ ಲೋಕಾರ್ಪಣೆ ಸಂಭ್ರಮ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸ್ವಾತಂತ್ರ್ಯ ಪೂರ್ವದಲ್ಲಿ ಮಹಾತ್ಮಾ ಗಾಂಧೀಜಿ ಯವರ ಹರಿಜನೋದ್ಧಾರ ಕಾರ್ಯ ಕ್ರಮ ಹಮ್ಮಿಕೊಂಡು ಗ್ರಾಮೀಣ ಭಾಗದ ಜನರಲ್ಲಿ ಜಾಗೃತಿ ಮೂಡಿಸಿದ ಅವರು ಗಡಿ ಪ್ರದೇಶವಾದ ಕಲಬುರಗಿ ಪ್ರಾಂತ್ಯದಲ್ಲಿ ಬ್ರಿಟಿಷರ ವಿರುದ್ಧ ಹೋರಾಟಕ್ಕೆ ಕಿಡಿ ಹೊತ್ತಿಸಿದರು ಎಂದರು.

ಸ್ವಾತಂತ್ರ್ಯ ನಂತರವೂ ಜನ ಸೇವೆಯಲ್ಲಿ ನಿರಂತರ ತೊಡಗಿದ ನಾಯಕ ಹೈದರಾಬಾದ ಪ್ರಾಂತ್ಯ ಹಿಂದೂಸ್ತಾನಕ್ಕೆ ವಿಲೀನವಾದ ನಂತರವೂ ಹೋರಾಟದ ಬದುಕನ್ನೇ ಸಾಗಿಸಿದವರು. ಚನ್ನಬಸಪ್ಪ ಕುಳಗೇರಿ ಅವರು ಯುವಕರಾಗಿದ್ದಾಗ ಕಾಲೇಜು ಬಿಟ್ಟು ಕ್ವಿಟ್ ಕಾಲೇಜು ಚಳವಳಿ ನಡೆಸಿ, ವಂದೇ ಮಾತರಂ ಘೋಷಣೆಗಳೊಂದಿಗೆ ರಜಾಕರ ವಿರುದ್ಧ ಹೋರಾಟ ನಡೆಸಿದ್ದರು. ಆ ಮೂಲಕ ಅವರು ಪ್ರಾಂತ್ಯದ ಸ್ವಾತಂತ್ರ್ಯ ಚಳವಳಿಗೆ ಶಕ್ತಿಯುತ ದಿಕ್ಕು ನೀಡಿದ್ದರು. ತಮ್ಮ ಮುಂದಿನ ರಾಜಕೀಯ ಬದುಕಿನಲ್ಲಿ ಅವರು ಜೇವರ್ಗಿ ಕ್ಷೇತ್ರದಿಂದ ಹಲವಾರು ಬಾರಿ ಸ್ಪರ್ಧಿಸಿ ಜನಪರ ರಾಜಕಾರಣ ನಡೆಸಿದವರಾಗಿ ಗುರುತಿಸಿಕೊಂಡಿದ್ದರು ಎಂದು ಅವರು ಹೇಳಿದರು.

ಗದಗಿನ ತೋಂಟದ ಸಿದ್ಧರಾಮ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಸೊನ್ನದ ಡಾ. ಶಿವಾ ನಂದ್ ಮಹಾಸ್ವಾಮೀಜಿ, ನೆಲೋಗಿಯ ಸಿದ್ದಲಿಂಗ ಮಹಾ ಸ್ವಾಮೀಜಿ, ಯಡ್ರಾಮಿಯ ಸಿದ್ದಲಿಂಗ ಮಹಾ ಸ್ವಾಮೀಜಿ, ಕಡಕೋಳದ ಡಾ. ರುದ್ರಮುನಿ ಶಿವಾಚಾರ್ಯರು, ಆಂದೋಲದ ಸಿದ್ದಲಿಂಗ ಮಹಾ ಸ್ವಾಮೀಜಿ ವಹಿಸಿದ್ದರು.

# ಭದ್ರತಾ ವೈಫಲ್ಯದಿಂದ ದಾಳಿ ಎನ್ನುವುದರಲ್ಲಿ ಹುರುಳಿಲ್ಲ: ಕೇಂದ್ರ ಸಚಿವೆ ರಕ್ಷಾ ಖಡ್ಸೆ

**ಹುಬ್ಬಳ್ಳಿ, ಏ.26–** 'ಕಾಶ್ಮೀರದ ಪಹಲ್ಗಾಮ್ ದಾಳಿಯನ್ನು ಮುಂದಿಟ್ಟುಕೊಂಡು ಯಾರೂ ರಾಜಕಾರಣ ಮಾಡಬಾರದು. ಅಗತ್ಯ ಕ್ರಮ ಕೈಗೊಳ್ಳುವುದಾಗಿ ಪ್ರಧಾನಿ ನರೇಂದ್ರ ಮೋದಿ ಹೇಳಿದಾಗಲೂ ಕುಹುಕದ ಹೇಳಿಕೆ ನೀಡುತ್ತಿರುವುದು ಸರಿಯಲ್ಲ' ಎಂದು ಕೇಂದ್ರ ಯುವಜನ ಸಬಲೀಕರಣ ಮತ್ತು ಕ್ರೀಡಾ ಖಾತೆಯ ರಾಜ್ಯ ಸಚಿವೆ ರಕ್ಷಾ ಖಡ್ಸೆ ಹೇಳಿದರು.



ಶನಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಭಯೋತ್ಪಾದಕರಿಂದ ನಾಗರಿಕರ ಮೇಲೆ ದಾಳಿ ನಡೆದಾಗ ಇಡೀ ದೇಶ ಒಗ್ಗಟ್ಟಾಗಿರಬೇಕು. ಶತ್ರುಗಳಿಗೆ ತಕ್ಕ ಪಾಠ ಕಲಿಸಲು ರಣತಂತ್ರ ಹೆಣೆಯಬೇಕು. ಆದರೆ, ಕೆಲವರು ಟೀಕೆ ಮಾಡುತ್ತ ದೇಶದ ರಾಜಕಾರಣಕ್ಕೆ ಬಳಸಿಕೊಳ್ಳುತ್ತಿರುವುದು ಒಳ್ಳೆಯ ಬೆಳವಣಿಗೆಯಲ್ಲ' ಎಂದು ಅಸಮಾಧಾನ ವ್ಯಕ್ತಪಡಿಸಿದರು.

'ದೇಶದ ಪ್ರತಿಯೊಬ್ಬ ಪ್ರಜೆಗೂ ರಕ್ಷಣೆ ನೀಡುವುದು ನಮ್ಮ ಕರ್ತವ್ಯ. ಪಹಲ್ಗಾಮ್ ದಾಳಿಗೆ ಭಾರತ ಶೀಘ್ರದಲ್ಲಿಯೇ ತಕ್ಕ ಉತ್ತರ ನೀಡಲಿದೆ. 370ನೇ ವಿಧಿಯಡಿ ನೀಡಿದ್ದ ವಿಶೇಷ ಸ್ಥಾನಮಾನ ರದ್ದು ಪಡಿಸಿದ ನಂತರ ಅಲ್ಲಿನ ಜನರು ಹೊಸ ಜೀವನ ಕಂಡುಕೊಂಡಿದ್ದರು. ಕಾಶ್ಮೀರ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಉತ್ತಮ ಕ್ರಿಯಾ ಯೋಜನೆಗಳನ್ನು ಸಿದ್ಧಪಡಿಸುತ್ತಿದೆ. ಅಲ್ಲಿ ನಡೆಯುತ್ತಿದ್ದ ಉಗ್ರಗಾಮಿ ಚಟುವಟಿಕೆಗಳನ್ನು ಹತ್ತಿಕ್ಕಲು ಎಲ್ಲ ರೀತಿಯಿಂದಲೂ ಪ್ರಯತ್ನ ನಡೆಸುತ್ತಿದೆ. ಆದರೂ ಇಂತಹ ಘಟನೆಗಳು ನಡೆಯುತ್ತಿರುವುದು ನೋವಿನ ಸಂಗತಿ. ಭದ್ರತಾ ವೈಫಲ್ಯದಿಂದ ಈ ದಾಳಿ ನಡೆದಿದೆ ಎನ್ನುವುದರಲ್ಲಿ ಹುರುಳಿಲ್ಲ' ಎಂದರು.

# ಅನುಭವ ಮಂಟಪ ರಥಕ್ಕೆ ಅದ್ದೂರಿ ಸ್ವಾಗತ



ಕಲಬುರಗಿಗೆ ಆಗಮಿಸಿದ ಕೂಡಲ ಸಂಗಮ ಅನುಭವ ಮಂಟಪಕ್ಕೆ ಅದ್ದೂರಿ ಸ್ವಾಗತ ನೀಡಲಾಯಿತು. ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಮತ್ತು ಬಸವಾಭಿಮಾನಿಗಳು ಇದ್ದರು.

**ಕಲಬುರಗಿ, ಏ.26–** ಬಾಗಲಕೋಟೆಯ ಕೂಡಲ ಸಂಗಮದಲ್ಲಿ ಇದೇ ಏಪ್ರಿಲ್ 29 ಮತ್ತು 30 ರಂದು ಎರಡು ದಿನಗಳ ಕಾಲ "ಅನುಭವ ಮಂಟಪ–ಬಸವಾದಿ ಶರಣರ ವೈಭವ" ಕಾರ್ಯಕ್ರಮ ಆಯೋಜಿಸಿದ ಪ್ರಯುಕ್ತ ಈ ಬಗ್ಗೆ ನಾಡಿನಾದ್ಯಂತ ಸಂಚರಿಸಿ ವ್ಯಾಪಕ ಪ್ರಚುರಪಡಿಸಲು ಹೊರಟಿರುವ ರಥಯಾತ್ರೆಯು ಬೀದರ ದಿಂದ ನಗರಕ್ಕೆ ಆಗಮಿಸಿದ ಸಂದರ್ಭದಲ್ಲಿ ಇಲ್ಲಿನ ಜಗತ್ ವೃತ್ತದಲ್ಲಿ ಜಿಲ್ಲಾಡಳಿತದಿಂದ ಭವ್ಯ ಸ್ವಾಗತ ನೀಡಲಾಯಿತು.

ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಸೇರಿದಂತೆ ಅನೇಕ ಗಣ್ಯರು ರಥಕ್ಕೆ ಪೂಜೆ ಸಲ್ಲಿಸಿದಲ್ಲದೆ ಬಸವಣ್ಣ ಸೇರಿದಂತೆ ರಥದಲ್ಲಿರುವ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್, ಯೇಸುಕ್ರಿಸ್ತ, ನಾರಾಯಣ ಗುರು, ಶಿವಶರಣೆ ಅಕ್ಕ ಮಹಾದೇವಿ, ಬುದ್ಧ, ಸಂತ ಶಿಸುನಾಳ ಶರೀಫ್, ಗುರುನಾನಕ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು. ಡೊಳ್ಳು, ಲಂಬಾಣಿ ನೃತ್ಯ ಮೂಲಕ ವರ್ಣರಂಜಿತವಾಗಿ ರಥವನ್ನು ಬರಮಾಡಿಕೊಳ್ಳಲಾಯಿತು.

ವಿಧಾನ ಪರಿಷತ್ ಮಾಜಿ ಶಾಸಕ ಅಮರನಾಥ ಪಾಟೀಲ, ಕಲಬುರಗಿ ತಹಶೀಲ್ದಾರ ಕೆ.ಆನಂದಶೀಲ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ದತ್ತಪ್ಪ ಸಾಗನೂರ, ರಾಷ್ಟ್ರೀಯ ಬಸವದಳ ಘಟಕದ ಜಿಲ್ಲಾಧ್ಯಕ್ಷ ಆರ್.ಜಿ. ಶೆಟಗಾರ, ಪ್ರಮುಖರಾದ ಡಾ.ಸುಧಾ ಹಾಲಕಾ ಯಿ, ರಾಜಶೇಖರ್ ಯಂಕಂಚಿ, ಶಾಂತಪ್ಪ ಪಾಟೀಲ, ಶಾಂತರೆಡ್ಡಿ, ಅಶೋಕ ಗೂಳಿ, ಮನೋಹರ ಜೀವಣಗಿ, ಪ್ರಭುಲಿಂಗ ಮಹಾಗಾಂವಕರ್, ಎಸ್.ಸಿ–ಎಸ್.ಟಿ ನೌಕರರ ಸಂಘದ ರಾಜ್ಯಾಧ್ಯಕ್ಷ ಮಹೇಶ ಹುಬ್ಳಿ ಸೇರಿದಂತೆ ಬಸವಾದಿ ಶರಣರ ಅನುಯಾಯಿಗಳು ಇದ್ದರು. ನಂತರ ರಥವು ಜೇವರ್ಗಿ ಮಾರ್ಗವಾಗಿ ವಿಜಯಪುರ ಜಿಲ್ಲೆಗೆ ತನ್ನ ಮುಂದಿನ ಪಯಣ ಆರಂಭಿಸಿತು.

## ಯುವ ಕ್ರಾಂತಿ ಕಾರ್ಯಕರ್ತರ ತರಬೇತಿ ಶಿಬಿರ

# ಇತಿಹಾಸ-ಸಿದ್ಧಾಂತದ ಬಗ್ಗೆ ಸ್ಪಷ್ಟತೆ ಇದ್ದರೆ ಉತ್ತಮ ನಾಯಕರಾಗಿ ಬೆಳೆಯುತ್ತೀರಿ- ಸಿಎಂ ಕಿವಿಮಾತು

**ಬೆಂಗಳೂರು, ಏ.26–** ರಾಜೀವ್ ಗಾಂಧಿ ಅವರು ಕೊಟ್ಟ ಮೀಸಲಾತಿಯನ್ನು ವಿರೋಧಿಸಿ ನ್ಯಾಯಾಲಯದ ಮೆಟ್ಟಿಲೇರಿದ್ದು ಬಿಜೆಪಿಯ ರಾಮಾ ಜೋಯಿಸ್. ಆದರೆ ನ್ಯಾಯಾಲಯ ರಾಜೀವ್ ಗಾಂಧಿ ಅವರು ತಂದ ತಿದ್ದುಪಡಿಯನ್ನು ಎತ್ತಿ ಹಿಡಿದು, ಇದು ಸಂವಿಧಾನ ಬದ್ಧವಾಗಿದೆ ಎಂದು ಹೇಳಿತು. ಮೀಸಲಾತಿಯನ್ನು ವಿರೋಧಿಸಿದ್ದ ಬಿಜೆಪಿ ಮಂಡಲ್ ವರದಿಯನ್ನೂ ವಿರೋಧಿಸಿತು.

ಹೀಗಾಗಿ ಇತಿಹಾಸ ಮತ್ತು ಸಿದ್ಧಾಂತದ ಬಗ್ಗೆ ನಿಮಗೆ ಸ್ಪಷ್ಟತೆ ಇದ್ದರೆ ಮುಂದೆ ಉತ್ತಮ ನಾಯಕರಾಗಿ ಬೆಳೆಯುತ್ತೀರಿ. ಯುವ ಕಾಂಗ್ರೆಸ್ ಆಯೋಜಿಸಿದ್ದ ಇಂತಹ ಕಾರ್ಯಾಗಾರ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲೂ ನಡೆಯಬೇಕು ಎಂದು ಯುವ ಕಾಂಗ್ರೆಸ್ ಆಯೋಜಿಸಿದ್ದ "ಯುವ ಕ್ರಾಂತಿ" ಕಾರ್ಯಕರ್ತರ ತರಬೇತಿ ಶಿಬಿರದಲ್ಲಿ ಸಿಎಂ ಸಿದ್ದರಾಮಯ್ಯ ಯುವ ಕಾಂಗ್ರೆಸ್ ಕಾರ್ಯಕರ್ತರಿಗೆ ಕಿವಿಮಾತು ಹೇಳಿದರು.ಯುವ ಕಾಂಗ್ರೆಸ್ ಅಂದರೆ ಭಾರತದ ಸಂವಿಧಾನ ಮತ್ತು ಬಹುತ್ವದ ರಕ್ಷಣೆಗೆ ನಿಂತ ಯುವ ಸೈನ್ಯ. ನಾವು ಏಕೆ ಕಾಂಗ್ರೆಸ್ ಕಟ್ಟುತ್ತಿದ್ದೇವೆ, ಆರ್.ಎಸ್.ಎಸ್ ಮತ್ತು ಸಂಘ ಪರಿವಾರ ಹೇಗೆ ಭಾರತದ ಬಹುತ್ವ ಮತ್ತು ಸಂವಿಧಾನ ವಿರೋಧಿ ಎನ್ನುವ ಸ್ಪಷ್ಟತೆ ನಿಮಗೆ ಇರಬೇಕು.

ಈ ಸ್ಪಷ್ಟತೆ ಇಲ್ಲದವರು ಬಹಳ ವರ್ಷ ಕಾಂಗ್ರೆಸ್ ನಲ್ಲಿ ಉಳೀತಾರೆ ಎನ್ನುವುದು ಅನುಮಾನ. ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ, ಸಹಿಷ್ಣುತೆ ಹಾಗೂ ಸಹಬಾಳ್ವೆ ನಮ್ಮ ಸಂವಿಧಾನದ ಉಸಿರು. ಇದೇ ಭಾರತದ ಉಸಿರು ಕೂಡ ಆಗಿದೆ."ಅಧಿಕಾರ ಬಲಾಢ್ಯರ ಕೈಯಲ್ಲಿ ಇರಬಾರದು. ಜನ ಸಾಮಾನ್ಯರ ಕೈಯಲ್ಲಿ ಇರಬೇಕು" ಎಂದು ಅಂಬೇಡ್ಕರ್ ಹೇಳಿದ್ದರು. ಕಾಂಗ್ರೆಸ್ ಜನರ ಕೈಗೆ ಅಧಿಕಾರ ಮತ್ತು ಅವಕಾಶಗಳನ್ನು ನೀಡುತ್ತಿದೆ. ಬಿಜೆಪಿ ಬಲಾಢ್ಯರಿಗೆ ಅಧಿಕಾರ ಮತ್ತು ಅವಕಾಶ ನೀಡುತ್ತಿದೆ. ಇದು ಸಂವಿಧಾನ ವಿರೋಧಿ.ನಾನು ಎರಡು ಬಾರಿ ಮುಖ್ಯಮಂತ್ರಿಯಾಗಿ ಅಸಮಾನತೆಯನ್ನು ಕಡಿಮೆ ಮಾಡುವ ಕಾರ್ಯಕ್ರಮಗಳನ್ನು ರೂಪಿಸಿ ಜಾರಿ ಮಾಡಿದ್ದೇನೆ. ಸ್ವಾತಂತ್ರ್ಯ ದೊರೆತದ್ದು ಸಾರ್ಥಕ ಆಗಬೇಕಾದರೆ ಪ್ರತಿಯೊಬ್ಬರೂ ಆರ್ಥಿಕ ಮತ್ತು ಸಾಮಾಜಿಕ ಸಬಲತೆ ಪಡೆದುಕೊಳ್ಳಬೇಕು. ಕಟ್ಟ ಕಡೆಯ ಮನುಷ್ಯನಿಗೆ ಶಕ್ತಿ ಕೊಡುವುದೇ ಸರ್ವೋದಯದ ಆಶಯ. ಮೌಢ್ಯ, ಕಂದಾಚಾರ, ಕರ್ಮ ಸಿದ್ಧಾಂತವನ್ನು ಕೃತಕವಾಗಿ ಸೃಷ್ಟಿಸಿ ನೀರು ಗೊಬ್ಬರ ಹಾಕಿ ಗಟ್ಟಿ ಮಾಡಿಟ್ಟಿದ್ದಾರೆ. ದೇವರು ಒಬ್ಬರಿಗೊಂದು, ಮತ್ತೊಬ್ಬರಿಗೊಂದು ಮಾಡುವುದಿಲ್ಲ. ದೇವರ ಹೆಸರಲ್ಲಿ ಮೌಢ್ಯಗಳನ್ನು ಬಿತ್ತುವವರ ಬಗ್ಗೆ ಎಚ್ಚರವಿರಲಿ. ಸ್ಪಷ್ಟತೆ ಮತ್ತು ಬದ್ಧತೆ ಇದ್ದರೆ ಯಾರು ಏನೇ ಮಾಡಿದರೂ ನೀವು ಬದಲಾಗಲ್ಲ ಎಂದು ವಾಗ್ದಾಳಿ ನಡೆಸಿದರು.

# ವಚನ ಜಾತ್ರೆ ಸಮಾರೋಪ: ಗಡಿಯಲ್ಲಿ ಪರಭಾಷೆ ನಡುವೆ ಕನ್ನಡ ಕಟ್ಟಿದ ಸಂತ ಪಟ್ಟದ್ದೇವರು: ನಿಶ್ಚಲಾನಂದ ಸ್ವಾಮಿಜಿ



**ಬೀದರ್, ಏ.26–** ಒಂದೆಡೆ ಮಹಾರಾಷ್ಟ್ರ ಮತ್ತೊಂದೆಡೆ ತೆಲಂಗಾಣ ಗಡಿಭಾಗದಲ್ಲಿ ಧಾರ್ಮಿಕ ಸೇವೆ ಜತೆಗೆ ಕನ್ನಡ ಭಾಷೆ ಮತ್ತು ಸಾಹಿತ್ಯ ಕ್ಷೇತ್ರಕ್ಕೆ ಶತಾಯುಷಿ ಡಾ.ಚನ್ನಬಸವ ಪಟ್ಟದ್ದೇವರು ವಿಶಿಷ್ಟ ಕೊಡುಗೆ ನೀಡಿದ್ದಾರೆ ಎಂದು ಕೆಂಗೇರಿ ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ನಿಶ್ಚಲಾನಂದ ಸ್ವಾಮೀಜಿ ಹೇಳಿದರು.

ಜಿಲ್ಲೆಯ ಭಾಲ್ಕಿ ಹಿರೇಮಠ ಸಂಸ್ತಾನದ ಚನ್ನಬಸವಾಶ್ರಮ ಪರಿಸರದಲ್ಲಿ ಹಿರೇಮಠ ಸಂಸ್ಥಾನದ ವತಿಯಿಂದ ವಚನ ಜಾತ್ರೆ–2025 ಮತ್ತು ಶತಾಯುಷಿ ಡಾ.ಚನ್ನಬಸವ ಪಟ್ಟದ್ದೇವರ 26ನೆಯ ಸ್ಮರಣೋತ್ಸವ ನಿಮಿತ್ತ ಆಯೋಜಿಸಿದ್ದ ಪ್ರಶಸ್ತಿ ಪ್ರದಾನ ಸಮಾರಂಭ ಹಾಗೂ ಸಮಾರೋಪದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿ, ಪರಭಾಷೆಯ ಆಡಳಿತದಲ್ಲಿ ಕನ್ನಡ ಭಾಷೆ ಮತ್ತು ಸಾಹಿತ್ಯ ಕ್ಷೇತ್ರದ ಸಂರಕ್ಷಣೆಗೆ ಪೂಜ್ಯರು ತೋರಿದ ದಿಟ್ಟತನ ಮಾದರಿ ಎನಿಸಿದೆ ಎಂದರು.

ಬಸವಾದಿ ಶರಣರ ವಾರಸುದಾರರಾಗಿ ಪೂಜ್ಯರು ಶಿಕ್ಷಣ ವಂಚಿತರಿಗೆ ಅಕ್ಷರ, ಬಡವರಿಗೆ ಅನ್ನ ಮತ್ತು ದುರ್ಬಲ ವರ್ಗದವರಿಗೆ ಆಶ್ರಯ ಕಲ್ಪಿಸಿ ಮಹಾತ್ಮರಾಗಿದ್ದಾರೆ. ಸಿದ್ಧಗಂಗೆ, ಸುತ್ತೂರು, ಆದಿ ಚುಂಚನಗಿರಿ ಮಠದ ಮಾದರಿಯಲ್ಲಿ ಉತ್ತರ ಕರ್ನಾಟಕ ಭಾಗದಲ್ಲಿ ಭಾಲ್ಕಿ ಹಿರೇಮಠ ಸಂಸ್ಥಾನ ಕಾರ್ಯ

ನಿರ್ವಹಿಸುತ್ತಿರುವುದು ಹೆಮ್ಮೆ ತರಿಸಿದೆ. ಇಲ್ಲಿಯ ಭಕ್ತರು ಶ್ರೀಮಠದ ಬೆಳವಣಿಗೆಗೆ ಸದಾ ದುಡಿಯುತ್ತಿರುವುದು ಅಭಿಮಾನತರಿಸಿದೆ ಎಂದರು.

ಕವಲಗಿ ಜಗದ್ಗುರು ಶಿವಯೋಗಿ ಸಿದ್ದರಾಮೇಶ್ವರ ಮಹಾಸಂಸ್ಥಾನ ಮಠದ ಡಾ.ಅಭಿನವ ಸಿದ್ರಾಮೇಶ್ವರ ಸ್ವಾಮೀಜಿ ಸಾನ್ನಿಧ್ಯ ವಹಿಸಿ ಮಾತನಾಡಿದರು. ಚನ್ನಬಸವ ಶಿಖಾರವಾನೆ, ಮಲ್ಲಿಕಾರ್ಜುನ ನಾಗಮಾರಪಳ್ಳಿ ವಚನ ಸಂಗೀತ ನಡೆಸಿಕೊಟ್ಟರು. ಕುಮಾರಿ ಆದಿತಿ ಎ ಮೈಸೂರು, ಬೀದರ್ ನ ಅನುಭವ ಮಂಟಪ ಸಂಸ್ಕೃತಿ ವಿದ್ಯಾಲಯದ ಮಕ್ಕಳು ವಚನ ನೃತ್ಯ ನಡೆಸಿ ಕೊಟ್ಟರು. ಹಾಸ್ಯ ಕಲಾವಿದ ವೈಜಿನಾಥ ಸಜ್ಜನಶೆಟ್ಟಿ ನಿರೂಪಿಸಿದರು.

# ಪಹಲ್ಗಾಮ್ ವಿಧ್ವಂಸಕ ಕೃತ್ಯ; ಉಗ್ರವಾದಿಗಳಿಗೆ ಕಂಡಲ್ಲೇ ಗುಂಡು ಹಾಕಿ: ಶಾಸಕ ನಾರಾ ಭರತ್ ರೆಡ್ಡಿ

**ಬಳ್ಳಾರಿ, ಏ.26–** ಜಮ್ಮು ಕಾಶ್ಮೀರದ ಪೆಹಲಗಾಮ್'ಗೆ ಪ್ರವಾಸಕ್ಕೆ ತೆರಳಿದ್ದ ಭಾರತೀಯರ ಮೇಲೆ ಅಮಾನುಷ ದಾಳಿ ಮಾಡಿ ಹತ್ಯೆಗೈದ ಉಗ್ರವಾದಿಗಳು ಎಲ್ಲಿ ಕಾಣುತ್ತಾರೋ ಅಲ್ಲೇ ಗುಂಡು ಹೊಡೆಯುವ ಮೂಲಕ ಶಿಕ್ಷೆ ನೀಡಬೇಕೆಂದು ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು.

ಪೆಹಲಗಾಮಿನ ಉಗ್ರರ ದಾಳಿಯಲ್ಲಿ ಹತರಾದವರ ಆತ್ಮಕ್ಕೆ ಶಾಂತಿ ಕೋರಿ, ಉಗ್ರವಾದ ವಿರೋಧಿಸಿ – ಬಳ್ಳಾರಿ ಜಿಲ್ಲಾ ಕಾಂಗ್ರೆಸ್ ಸಮಿತಿ (ನಗರ) ವತಿಯಿಂದ ಮಹಾತ್ಮ ಗಾಂಧಿಯವರ ಪುತ್ಥಳಿಯಿಂದ ಗಡಿಗಿ ಚೆನ್ನಪ್ಪ ವೃತ್ತದವರೆಗೆ ಏರ್ಪಡಿಸಿದ್ದ ಆತ್ಮಜ್ಯೋತಿ ಮೆರಣಿಗೆಗೆ ಚಾಲನೆ ನೀಡಿ ಮಾತನಾಡಿದರು.ಪ್ರವಾಸಕ್ಕೆ ತೆರಳಿದ್ದವರು ಕುಟುಂಬಸ್ಥರು, ಯುವಕರು, ಮವ ವಿವಾಹಿತರು, ಅವರು ತಮ್ಮ ಬದುಕಿನ ಸುಂದರ ಕ್ಷಣ ಕಟ್ಟಿಕೊಳ್ಳುವ ಸಂದರ್ಭದಲ್ಲಿ ಅವರನ್ನು ಹತ್ಯೆಗೈದ ಉಗ್ರರ ಕೃತ್ಯ ಅತ್ಯಂತ ಅಮಾನವೀಯ ಎಂದರು.

ಉಗ್ರರ ಈ ದಾಳಿಗೆ ಕೇಂದ್ರ ಸರ್ಕಾರದ ಭದ್ರತಾ ವೈಫಲ್ಯಗಳೇ ಕಾರಣ, ಆಗಿರುವ ತಪ್ಪುಗಳನ್ನು ಸರ್ಕಾರ ಒಪ್ಪಿಕೊಳ್ಳಲಿ, ಮುಂದೆ ತಪ್ಪಾಗದಂತೆ ಕ್ರಮ ವಹಿಸಲಿ ಎಂದ ಅವರು, ಕಾಂಗ್ರೆಸ್ ಪಕ್ಷ ಭಾರತ ಸರ್ಕಾರದ ಜೊತೆಗಿದೆ, ಕೇಂದ್ರ ಸರ್ಕಾರಕ್ಕೆ ಎಲ್ಲ ಸಹಕಾರ ಕೊಡುವುದಾಗಿ ನಮ್ಮ ನಾಯಕ ರಾಹುಲ್ ಗಾಂಧಿ ಹೇಳಿದ್ದಾರೆ ಎಂದರು.

ಈಗ ಆಗಿರುವ ದಾಳಿಯಲ್ಲಿ ಭಾಗಿಯಾಗಿರುವ ಉಗ್ರರಿಗೆ, ಆ ಉಗ್ರರ ಗುಂಪಿಗೆ ಹೇಗೆ ಶಿಕ್ಷೆ ಕಲಿಸಬೇಕೆಂದರೆ ಮುಂಬರುವ ದಿನಗಳಲ್ಲಿ ಭಾರತದ ಮೇಲೆ ದಾಳಿ ಮಾಡಲು ಭಯ ಬೀಳಬೇಕು, ನಿದ್ದೆಯಲ್ಲೂ ಭಾರತ ನನೆಪಿಸಿಕೊಂಡರೆ ನಡುಗುವ ಹಾಗೆ ಶಿಕ್ಷೆ ನೀಡಬೇಕು ಎಂದು ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು.ರಾಜತಾಂತ್ರಿಕ ವಿಷಯಗಳ ಮೂಲಕ ಪಾಕಿಸ್ತಾನದ ಮೇಲೆ ಒತ್ತಡ ಹಾಕಿದರೆ ಸಾಲದು, ಈ ರೀತಿಯ ಘಟನೆಗಳು ಮಾಡುವವರನ್ನು ಅತ್ಯುಗ್ರ ಶಿಕ್ಷೆಗೆ ಒಳಪಡಿಸುವಂತಹ ಕಾನೂನು ಜಾರಿಗೆ




ತರಬೇಕು. ಉಗ್ರರ ದಾಳಿಗೆ ಪ್ರತಿಯಾಗಿ ಶತ್ರು ರಾಷ್ಟ್ರದ ಮೇಲೆ ಯುದ್ಧ ಸಾರಿದರೆ ಪರಿಹಾರ ಸಿಗುವುದಿಲ್ಲ, ಯಾರು ತಪ್ಪು ಮಾಡಿದ್ದಾರೋ ಅವರನ್ನು ಹುಡುಕಿ ಕಠಿಣ ಶಿಕ್ಷೆ ನೀಡಬೇಕು ಎಂದರು.

ಲಿಡ್ಕರ್ ಅಧ್ಯಕ್ಷ ಮುಂಡ್ರಿಗಿ ನಾಗರಾಜ್, ಮೇಯರ್ ಮುಲ್ಲಂಗಿ ನಂದೀಶ್, ಹುಮಾಯೂನ್ ಖಾನ್, ಎ.ಮಾನಯ್ಯ, ಕಲ್ಲುಕಂಭ ಪಂಪಾಪತಿ, ಎರುಕುಲಸ್ವಾಮಿ, ಮಂಜುಳಾ, ಶಮೀಮ್ ಜಕ್ಲಿ, ಚಂಪಾ ಚವ್ಹಾಣ್, ಎಂ.ರಾಜೇಶ್ವರಿ, ನೂರ್ ಮೊಹಮ್ಮದ್, ವಿವೇಕ್ ಪೇರಂ, ಮಿಂಚು ಸೀನಾ, ವಿ.ಕುಬೇರ, ಎಂ.ಪ್ರಭಂಜನ ಕುಮಾರ್, ಗಾದೆಪ್ಪ, ರಾಜಶೇಖರ್, ಆಸಿಫ್, ನಾಜು, ಜಬ್ಬಾರ್, ರಾಮಾಂಜನೇಯ, ಕಾಂಗ್ರೆಸ್ ವಕ್ತಾರ ವೆಂಕಟೇಶ ಹೆಗಡೆ, ಸರಗೂ ನಾಗು, ವಿಷ್ಣು ಬೋಯಪಾಟಿ, ನಾಗಭೂಷಣಗೌಡ, ಅಲ್ಲಾಭಕಷ, ಹುಸೇನ್ ಪೀರಾಂ, ಅಭಿಲಾಷ್, ಶಿವರಾಜ್, ಗುಡ್ಲೂರು ರವಿ, ಪಿ.ಜಗನ್, ಶಿವರಾಜ್, ಡಿ.ಸೂರಿ, ಚಾನಾಳ್ ಶೇಖರ್, ಯರಗುಡಿ ಸೋಮಣ್ಣ, ಕಣೇಕಲ್ ಮೆಹಬೂಬ ಸಾಬ, ರಾಕಿ, ಶಿವು, ಸಮೀರ್, ರಜಾಕ್, ಸಿದ್ಧೇಶ್, ಶಂಕರ್, ವೆಂಕಟ ನಾಯ್ಡು, ಲೋಕೇಶ್, ಛತ್ರಿ ವಾಸು, ಶಾಂತಮ್ಮ, ಯಶೋಧಾ, ವಿಜಯಲಕ್ಷ್ಮೀ, ಅಸುಂಡಿ ನಾಗರಾಜ ಹಲವರು ಭಾಗಿಯಾಗಿದ್ದರು.

## ಇನ್ಸ್ಟಾಗ್ರಾಮ್‌ನಲ್ಲಿ ರಾಯಚೂರು-ಚಾಮರಾಜನಗರ ನಂಟು

# ಯುವತಿ ಕೊರಳಿಗೆ ಮೂರು ಗಂಟು, ಪತಿ ಸೆರೆ

**ರಾಯಚೂರು, ಏ.26–** ನಾನೊಂದು ತೀರ ನೀನೊಂದು ತೀರ ಎನ್ನುವಂತೆ ಯುವಕ ಒಂದು ದಿಕ್ಕಿನ ಜಿಲ್ಲೆಯವನಾಗಿದ್ದರೆ, ಯುವತಿ ಮತ್ತೊಂದು ದಿಕ್ಕಿನವಳು. ಆದರೆ, ಇಬ್ಬರ ನಡುವೆ ಇನ್ಸ್ಟಾಗ್ರಾಮ್ ನಂಟು ಬೆಳೆಸಿತ್ತು. ಇದಾಗ ಸ್ವಲ್ಪ ದಿನಗಳಲ್ಲೇ ಯುವತಿ ಕೊರಳಿಗೆ ಮೂರು ಗಂಟು ಸಹ ಬಿದ್ದಿತ್ತು. ಆದರೆ, ಮದುವೆಯಾಗಿ ಆಕೆ ತುಂಬು ಗರ್ಭಿಣಿಯಾಗಿರುವ ಸಂದರ್ಭದಲ್ಲೇ ಅನುಮಾಸ್ಪದವಾಗಿ ಸಾವನ್ನಪ್ಪಿದ್ದಾಳೆ! ರಾಯಚೂರು ಜಿಲ್ಲೆಯ ಯುವಕನ್ನು ಪ್ರೀತಿಸಿ ಮದ್ವೆಯಾಗಿದ್ದ ಚಾಮರಾಜನಗರದ ಅನುಪಮ ಎನ್ನುವ 9 ತಿಂಗಳ ತುಂಬು ಗರ್ಭಿಣಿ ಮಹಿಳೆ ಮೃತದೇಹ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದೆ. ಸಿಂಧನೂರು ತಾಲೂಕಿನ ಬೂದಿಹಾಳದ ಗಂಡನ ಮನೆಯಲ್ಲಿ ಮಹಿಳೆ ಸಾವನ್ನಪ್ಪಿದ್ದು, ಈ ಸಂಬಂಧ ಪೊಲೀಸರು ಪತಿಯನ್ನು ಬಂಧಿಸಿದ್ದಾರೆ.

ಚಾಮರಾಜನಗರ ಮೂಲದ ಅನುಪಮಾ (20) ಮೃತ ಗರ್ಭಿಣಿ. ಅನುಪಮಾ ಹಾಗೂ ರಾಯಚೂರಿನ ಬೂದಿಹಾಳದ ನಾಗರಾಜ್ ಇನ್ಸ್‌ಸ್ಟಾಗ್ರಾಂನಲ್ಲಿ ಪರಿಚಯವಾಗಿದ್ದರು. ಇಬ್ಬರ ಪರಿಚಯ ಪ್ರೀತಿಗೆ ತಿರುಗಿದ ಬಳಿಕ 11 ತಿಂಗಳ ಹಿಂದೆ ಮದುವೆಯಾಗಿದ್ದರು. ಮದುವೆಯಾದ ಹೊಸದರಲ್ಲಿ ಎಲ್ಲವೂ ಚೆನ್ನಾಗಿಯೇ ಇತ್ತು. ಆದರೆ, ಅದೇನಾಯೋ ಏನು ಅನುಪಮ ಶವ ನೇಣುಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ಮೇಲ್ನೋಟಕ್ಕೆ ಆತ್ಮಹತ್ಯೆ ಎನ್ನಲಾಗಿದೆ. ಆದರೆ, ಜಾತಿ ಹಾಗೂ ವರದಕ್ಷಿಣೆ ಕಿರುಕುಳದಿಂದ ಬೇಸತ್ತು ಅನುಪಮ ಆತ್ಮಹತ್ಯೆ ಮಾಡಿ ಕೊಂಡಿದ್ದಾಳೆ ಎಂದು ಆಕೆ ಪೋಷಕರು ಆರೋಪಿಸಿದ್ದಾರೆ.

ನಾಗರಾಜ್ ಮನೆಯವರ ಜಾತಿ ಬೇರೆ, ವರದಕ್ಷಿಣೆ ತಂದಿಲ್ಲವೆಂದು ಕಿರುಕುಳ ನೀಡುತ್ತಿದ್ದರು. ಗಂಡನ ಮನೆಯವರ ಕಿರುಕುಳ, ಹಿಂಸೆಯಿಂದಲೇ ತಮ್ಮ ಮಗಳು ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ಮೃತ ಅನುಪಮಾ ತಂದೆ ಆರೋಪಿಸಿದ್ದು, ಅನುಪಮಾ ಪತಿ ನಾಗರಾಜ್ ಸೇರಿ 6 ಜನರ ವಿರುದ್ಧ ಸಿಂಧನೂರು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಕೊಲೆ ಪ್ರಕರಣ ದಾಖಲಿಸಿದ್ದಾರೆ. ಸದ್ಯ ಪೊಲೀಸರು ಪತಿ ನಾಗರಾಜ್‌ನನ್ನ ಪೊಲೀಸರು ವಶಕ್ಕೆ ಪಡೆದುಕೊಂಡು ವಿಚಾರಣೆಗೊಳಪಡಿಸಿದ್ದಾರೆ.

ಒಟ್ಟಿನಲ್ಲಿ ಒಂದು ತುದಿಯ ಜಿಲ್ಲೆಯಿಂದ ಮತ್ತೊಂದು ತುದಿಯ



ಜಿಲ್ಲೆಯ ಯುವಕನ ಪ್ರೇಮದ ಬಲೆಗೆ ಬಿದ್ದು ಇದೀಗ ದುರಂತ ಸಾವು ಕಂಡಿದ್ದು ವಿಪರ್ಯಾಸ. ಸಮಾಜ ಎಷ್ಟೇ ಆಧುನೀಕರಣ ಹೊಂದಿದರೂ ಪ್ರೇಮ ವಿವಾಹದಲ್ಲಿ ಸಮಸ್ಯೆಗಳು ತಪ್ಪಿದ್ದಲ್ಲ. ಒಂದಲ್ಲ ಒಂದು ಅಡ್ಡಿ ಅಡಚಣೆಗಳು ಬರುತ್ತವೆ. ಅವುಗಳನ್ನು ಮೆಟ್ಟಿ ನಿಂತರೆ ಮಾತ್ರ ಸಂಸಾರ ಸುಖಿಯಾಗಿರಲು ಸಾಧ್ಯ. ಒಂದು ವೇಳೆ ಸ್ವಲ್ಪ ಹೆಚ್ಚು ಕಮ್ಮಿಯಾಗಿ ಸಂಸಾರದ ಏರುಪೇರು ಉಂಟಾದರೆ ಈ ರೀತಿಯ ಅನಾಹುತಗಳು ಸಂಭವಿಸುತ್ತವೆ. ಪ್ರೀತಿಸಿ ಮದುವೆಯಾದ ಮೇಲೆ ಈ ಜಾತಿ ಸಂಬಂಧಗಳು ಅಡ್ಡಿ ಬಂದು ಅದೆಷ್ಟೋ ಸಂಸಾರಗಳು ಒಡೆದು ಹೋದ ಉದಾಹರಣೆಗಳು ಇವೆ. ಹಾಗೇ ಕೆಲವೊಂದು ಪ್ರೇಮ ವಿವಾಹ ಹೀಗೆ ಸಾವಿನಲ್ಲೂ ಅಂತ್ಯವಾಗಿವೆ. ಇನ್ನು ಕೆಲ ಪ್ರೇಮ ವಿವಾಹ ಅಮರವಾಗಿ ಉಳಿದಿವೆ.

# ಬಳ್ಳಾರಿಯ ಆರ್‌ವೈಎಂಇಸಿಯಲ್ಲಿ ಯೋಗ ಉಪನ್ಯಾಸ, ಯೋಗಾಭ್ಯಾಸ ಆಯೋಜನೆ



**ಬಳ್ಳಾರಿ, ಏ.26–** ಬಳ್ಳಾರಿಯಲ್ಲಿರುವ ಪ್ರತಿಷ್ಠಿತ ಮಹಾವಿದ್ಯಾಲಯದವಾದ ರಾವ್ ಬಹದ್ದೂರ್ ವೈ ಮಹಾಬಲೇಶ್ವರಪ್ಪತಾಂತ್ರಿಕ ಮಹಾವಿದ್ಯಾಲಯದಲ್ಲಿ ವಿವಿ ಸಂಘದ ರಾವ್ ಬಹದ್ದೂರ್ ವೈ.ಮಹಾಬಲೇಶ್ವರಪ್ಪ ತಾಂತ್ರಿಕ ಮಹಾವಿದ್ಯಾಲಯದ ಇ.ಇ.ಇ.ವಿಭಾಗ –ವಿದ್ಯುತ್ ಎಂಜಿನಿಯರಿಂಗ್ ವಿಭಾಗದ– 120 ವಿದ್ಯಾರ್ಥಿಗಳಿಗೆ , ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಪ್ರೋಟಕಾಲ್ ಪ್ರಕಾರ ಯೋಗ ಉಪನ್ಯಾಸ ಮತ್ತು ಯೋಗಭ್ಯಾಸವನ್ನು ಪತಾಂಜಲಿ ರಾಜ್ಯ ಸಮಿತಿ ಸದಸ್ಯರಾದ ಇಸ್ವಿ ಪಂಪಾಪತಿ , ಭಾರತ್ ಸ್ವಾಭಿಮಾನ ಉಪಾಧ್ಯಕ್ಷರಾದ ಮಹೇಶ್ ಗೌಡ್ರು, ಶಿಕ್ಷಕರ ಸಮಿತಿ ತರಬೇತಿಯ ಸಂಯೋಜಕರಾದ ಚಿದಂಬರಾವ್ ಮತ್ತು ಕಿಸಾನ್ ಸೇವಾ ಸಮಿತಿ ಸದಸ್ಯರಾದ ಮಂಜುನಾಥ್ ಸ್ವಾಮಿ, ವಿದ್ಯುತ್ ಎಂಜಿನಿಯರಿಂಗ್ ವಿಭಾಗದ ಮುಖ್ಯಸ್ಥರಾದ ಡಾ. ಕೊಟ್ರೇಶ್ ಮತ್ತು ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಯಶಸ್ವಿಗೊಳಿಸಿದರು.

ಪತಾಂಜಲಿ ರಾಜ್ಯ ಸಮಿತಿ ಸದಸ್ಯರಾದ ಇಸ್ವಿ ಪಂಪಾಪತಿ "ಯೋಗವು ದೈಹಿಕ ಮತ್ತು ಮಾನಸಿಕ ಯೋಗಕ್ಷೇಮಕ್ಕೆ ಮತ್ತು ಸುಧಾರಿತ ನಮ್ಯತೆ, ಕಡಿಮೆ ಒತ್ತಡ, ಹೆಚ್ಚಿದ ಶಕ್ತಿ ಸುಧಾರಿತ ಏಕಾಗ್ರತೆ, ಸುಧಾರಿತ ರಕ್ತಪರಿಚಲನೆ ಮತ್ತು ಹೃದಯರಕ್ತನಾಳದ ಆರೋಗ್ಯ, ಸುಧಾರಿತ ಜೀರ್ಣಕ್ರಿಯೆ ಮುಂತಾದ ಪ್ರಯೋಜನಗಳನ್ನು ನೀಡುತ್ತದೆ, ಇದು ನಿದ್ರೆಯ ಗುಣಮಟ್ಟವನ್ನು, ರೋಗ ನಿರೋಧಕ ಶಕ್ತಿಯನ್ನು ಮತ್ತು ಒಟ್ಟಾರೆ ಉತ್ತಮ ಆರೋಗ್ಯ ಮತ್ತು ಯೋಗಕ್ಷೇಮಕ್ಕೆ ಕೊಡುಗೆ ಅದು ನೀಡುತ್ತದೆ " ಅವರು ಹೇಳಿದರು,

# ಮೇ 9ಕ್ಕೆ ನಿರೀಕ್ಷಣಾ ಜಾಮೀನು ಅರ್ಜಿಯ ವಿಚಾರಣೆ



**ರಾಮನಗರ, ಏ.26–** ರಿಕ್ಕಿ ರೈ ಮೇಲಿನ ಗುಂಡು ಹಾರಾಟ ಪ್ರಕರಣದ 2ನೇ ಆರೋಪಿ, ಮುತ್ತಪ್ಪ ರೈ ಅವರ 2ನೇ ಪತ್ನಿ ಅನುರಾಧಾ ಸಲ್ಲಿಸಿದ್ದ ನಿರೀಕ್ಷಣ ಜಾಮೀನು ಅರ್ಜಿಯ ವಿಚಾರಣೆಯನ್ನು ಇಲ್ಲಿನ 3ನೇ ಹೆಚ್ಚುವರಿ ಸೆಷನ್ಸ್ ನ್ಯಾಯಾಲಯ ಮೇ 9ಕ್ಕೆ ಮುಂದೂಡಿದೆ.

ಏ.18ರ ತಡರಾತ್ರಿ ರಿಕ್ಕಿ ರೈ ಮೇಲೆ ನಡೆಸಿದ್ದ ಶೂಟ್‌ಔಟ್ ಪ್ರಕರಣದಲ್ಲಿ ಅನುರಾಧಾ ಮೇಲೆ ಸಂದೇಹ ವ್ಯಕ್ತಪಡಿಸಿ ಚಾಲಕ ಬಸವರಾಜು ಬಿಡದಿ ಠಾಣೆಗೆ ದೂರು ಸಲ್ಲಿಸಿದ್ದರು.ಈ ಹಿನ್ನೆಲೆಯಲ್ಲಿ ಅನುರಾಧಾ ಪರ ವಕೀಲರು ಎ.21ರಂದು ರಾಮನಗರ ಜಿಲ್ಲಾ ನ್ಯಾಯಾಲಯದಲ್ಲಿ ನಿರೀಕ್ಷಣ ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದರು.

# ಆಕಸ್ಮಿಕ ಬೆಂಕಿ: ಧಗಧಗನೆ ಹೊತ್ತಿ ಉರಿದ ಬಸ್, ಪ್ರಯಾಣಿಕರು ಪಾರು

**ನಾಗಮಂಗಲ, ಏ.26–** ಚಲಿಸುತ್ತಿದ್ದ ಖಾಸಗಿ ಬಸ್‌ನಲ್ಲಿ ಆಕಸ್ಮಿಕ ಬೆಂಕಿ ಕಾಣಿಸಿಕೊಂಡು ಬಸ್ ಧಗಧಗನೆ ಹೊತ್ತಿ ಉರಿದಿದೆ. ಬಸ್ಸಿನಲ್ಲಿದ್ದ 25 ಪ್ರಯಾಣಿಕರು ಪ್ರಾಣಾಪಾಯದಿಂದ ಪಾರಾಗಿರುವ ಘಟನೆ ತಾಲ್ಲೂಕಿನ ಕದಬಹಳ್ಳಿ ಬಳಿ ಶನಿವಾರ ನಸುಕಿನ ವೇಳೆ ನಡೆದಿದೆ. ಬೆಂಕಿ ಅವಘಡಕ್ಕೆ ನಿಖರ ಕಾರಣ ತಿಳಿದುಬಂದಿಲ್ಲ. ಬಿಂಡಗನವಿಲೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಪಹಲ್ಗಾಮ್ ಉಗ್ರರ ದಾಳಿ ಪಾಕ್ ಪ್ರೇರಿತ: ಶೆಟ್ಟರ್ ಆರೋಪ

**ಹುಬ್ಬಳ್ಳಿ, ಏ.26–** ಜಮ್ಮು–ಕಾಶ್ಮೀರದ ಪಹಲ್ಗಾವ್‌ನಲ್ಲಿ ನಡೆದ ಭಯಾನಕ ಭಯೋತ್ಪಾದಕ ದಾಳಿಯನ್ನು ಸಂಸದ ಜಗದೀಶ್ ಶೆಟ್ಟರ್ ತೀವ್ರವಾಗಿ ಖಂಡಿಸಿದ್ದಾರೆ. ಈ ದಾಳಿಯು ಪಾಕಿಸ್ತಾನದಿಂದ ಪ್ರೇರಿತ ಉಗ್ರರ ಕೃತ್ಯವಾಗಿದ್ದು, ಕಾಶ್ಮೀರದಲ್ಲಿ ಭಯದ ವಾತಾವರಣವನ್ನು ಸೃಷ್ಟಿಸುವ ಉದ್ದೇಶವನ್ನು ಹೊಂದಿದೆ ಎಂದು ಅವರು ಆರೋಪಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಕೈಗೊಂಡ ಕ್ರಮಗಳಿಂದ ಜಮ್ಮು–ಕಾಶ್ಮೀರದಲ್ಲಿ ಇತ್ತೀಚಿನ ದಿನಗಳಲ್ಲಿ ಶಾಂತಿಯುತ ವಾತಾವರಣ ನೆಲೆಗೊಂಡಿತ್ತು. ಇದರಿಂದಾಗಿ ದೇಶ–ವಿದೇಶದಿಂದ ಅನೇಕ ಪ್ರವಾಸಿಗರು ಕಾಶ್ಮೀರಕ್ಕೆ ಭೇಟಿ ನೀಡಲು ಆರಂಭಿಸಿದ್ದರು. ಆದರೆ, ಪಾಕಿಸ್ತಾನದ ಬೆಂಬಲದಿಂದ ಉಗ್ರರು ಈ ದಾಳಿಯನ್ನು ನಡೆಸಿ ಶಾಂತಿಯನ್ನು ಕದಡಿದ್ದಾರೆ ಎಂದು ಜಗದೀಶ್ ಶೆಟ್ಟರ್ ಅವರು ತಿಳಿಸಿದರು.

ಈ ದಾಳಿಯಲ್ಲಿ ಹಿಂದೂಗಳನ್ನೇ ಗುರಿಯಾಗಿಸಿರುವುದು ಮತ್ತಷ್ಟು ಅಪಾಯಕಾರಿ ಬೆಳವಣಿಗೆಯಾಗಿದೆ.

ಕಾಸ್ಮೀರದಲ್ಲಿ 370 ವಿಧಿಯನ್ನು ತೆರವುಗೊಳಿಸಿದ ನಂತರ ಶಾಂತಿ ಮತ್ತು ಅಭಿವೃದ್ಧಿ ರಾಷ್ಟವಾಗಿ ಬೆಳೆಯುತ್ತಿರುವುದನ್ನು ಸಹಿಸಲಾಗದ ಪಾಕಿಸ್ತಾನವು ಈ ಕುತಂತ್ರವನ್ನು ರೂಪಿಸಿದೆ. ಪಾಕಿಸ್ತಾನದ ಆರ್ಥಿಕ ಮತ್ತು ರಾಜಕೀಯ ಅವನತಿಯು ಆರಂಭವಾಗಿದೆ. ಈ ದಾಳಿಯ ಮೂಲಕ ಭಾರತದ ಶಾಂತಿಯನ್ನು ಭಂಗಗೊಳಿಸಲು ಯತ್ನಿಸಲಾಗಿದೆ ಎಂದು ಜಗದೀಶ್ ಶೆಟ್ಟರ್ ಅವರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ದೇಶದ ಜನತೆ ಕಾಶ್ಮೀರದಲ್ಲಿ ಶಾಂತಿ ನೆಲೆಸಬೇಕು ಎಂದು ಬಯಸುತ್ತಾರೆ. ಈ ದಾಳಿಯಲ್ಲಿ ಮೃತರಾದವರ ಕುಟುಂಬಗಳೊಂದಿಗೆ ಇಡೀ ದೇಶ ಮತ್ತು ಭಾರತ ಸರ್ಕಾರವಿದೆ. ಈಗಾಗಲೇ ಭಾರತೀಯ ಸೇನೆಯು ಇಬ್ಬರು ಉಗ್ರರನ್ನು ಹತ್ಯೆಗೊಳಿಸಿದೆ. ಪ್ರಧಾನಿ ಮೋದಿ ಶೀಘ್ರವೇ ಈ ದಾಳಿಗೆ ತಕ್ಕ ಉತ್ತರವನ್ನು ನೀಡಲಿದ್ದಾರೆ ಎಂದು ಶೆಟ್ಟರ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಭದ್ರತಾ ವ್ಯವಸ್ಥೆಯನ್ನು ಶ್ಲಾಘಿಸಿದ ಅವರು, ಪ್ರವಾಸಿಗರೇ ಕಾಶ್ಮೀರದ ಭದ್ರತಾ ವ್ಯವಸ್ಥೆಯನ್ನು ಒಪ್ಪಿಕೊಂಡಿದ್ದಾರೆ. ಆದರೂ ಈ ಘಟನೆ ಸಂಭವಿಸಿದೆ. ಕಳೆದ 70 ವರ್ಷಗಳಿಂದ ಕಾಶ್ಮೀರದಲ್ಲಿ ಶಾಂತಿಯು ಸವಾಲಾಗಿತ್ತು. ಆದರೆ, ಮೋದಿ ಸರ್ಕಾರದ ಅವಧಿಯಲ್ಲಿ ಶಾಂತಿಯುತ ವಾತಾವರಣ ಸೃಷ್ಟಿಯವಾಗಿತ್ತು. ಈ ದಾಳಿಯು ಆ ಶಾಂತಿಗೆ ಧಕ್ಕೆ ತಂದಿದೆ ಎಂದು ವಿಷಾದ ವ್ಯಕ್ತಪಡಿಸಿದ್ದಾರೆ.



ಉಗ್ರರನ್ನು ಮತ್ತು ಅವರನ್ನು ಪೋಷಿಸುವ ಪಾಕಿಸ್ತಾನದ ನೆಲೆಗಳನ್ನು ಸಂಪೂರ್ಣವಾಗಿ ನಾಶಪಡಿಸಬೇಕು. ಭಾರತವು ಬಲಿಷ್ಠ ರಾಷ್ಟವಾಗಿ ಮುನ್ನಡೆಯುತ್ತಿದ್ದು, ಇಂತಹ ಕೃತ್ಯಗಳಿಗೆ ಯಾವುದೇ ಕಾರಣಕ್ಕೂ ಜಾಗವಿಲ್ಲ ಎಂದು ಜಗದೀಶ್ ಶೆಟ್ಟರ್ ಒತ್ತಿಹೇಳಿದರು.




ಜಮ್ಮು ಮತ್ತು ಕಾಶ್ಮೀರದಲ್ಲಿ ಜನರ ಮೇಲೆ ನಡೆದ ಭಯೋತ್ಪಾದಕ ದಾಳಿಯನ್ನು ಖಂಡಿಸಿ ಹಿಂದೂ ಜಾಗರಣ ವೇದಿಕೆ ಸದಸ್ಯರು ಶನಿವಾರ ಬಾಗಲಕೋಟೆಯಲ್ಲಿ ಪ್ರತಿಭಟನೆ ನಡೆಸಿದರು.

### ಕಾಶ್ಮೀರದಲ್ಲಿ ಪ್ರವಾಸಿಗರ ಮೇಲಿನ ದಾಳಿ ಖಂಡನೆ

## ಪಾಕ್ ಮೇಲೆ ಯುದ್ಧ ಸಾರಿ ಬುದ್ಧಿ ಕಲಿಸಿ: ಎಬಿವಿಪಿ ಆಗ್ರಹ

**ಬೀದರ್, ಏ.26–** ಮೇಲಿಂದ ಮೇಲೆ ಉಗ್ರರನ್ನು ಬಿಟ್ಟು ದೇಶದಲ್ಲಿ ಅಮಾಯಕರನ್ನು ಕೊಲ್ಲುತ್ತಿರುವ ಮತ್ತು ಪೆಹಲ್ಗಾಮ್‌ನಲ್ಲಿ ಹಿಂದೂಗಳನ್ನು ಗುರುತಿಸಿ ಅಮಾನವೀಯ ಪೈಶಾಚಿಕ ಕೃತ್ಯ ಎಸಗಿರುವ ಪಾಕ್ ಪ್ರಚೋದಿತ ಉಗ್ರರನ್ನು ಹತ್ತಿಕ್ಕಲು ಪಾಕ್ ಮೇಲೆ ಯುದ್ಧ ಸಾರಿ ಇನ್ನೆಂದೂ ತಲೆ ಎತ್ತದಂತೆ ಮಡಬೇಕೆಂದು ಆಗ್ರಹಿಸಿ ನಗರದಲ್ಲಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಬೃಹತ್ ಪ್ರತಿಭಟನೆ ನಡೆಸಿತು.

ವಿದ್ಯಾರ್ಥಿ ಪರಿಷತ್ ಬೀದರ ಘಟಕ ವತಿಯಿಂದ ನಗರದ ಅಂಬೇಡ್ಕರ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿವರೆಗೆ ಭಯೋತ್ಪಾದಕರ ದಾಳಿಯನ್ನು ತೀವ್ರವಾಗಿ ಖಂಡಿಸಿ ಬೃಹತ್ ಪ್ರತಿಭಟನೆ ನಡೆಸಿ, ಜಮ್ಮು ಮತ್ತು ಕಾಶ್ಮೀರ ಭಾರತದ ಅವಿಭಾಜ್ಯ ಅಂಗವೆಂಬುದು ಸಾರ್ವಕಾಲಿಕ ಸತ್ಯ, ಅಲ್ಲಿನ ಪ್ರತ್ಯೇಕವಾದದ ಮನಃಸ್ಥಿತಿಯನ್ನು ಬದಲಾಯಿಸಲು ಹಾಗೂ ಜನ–ಜೀವನ ಸ್ಥಿತಿಗತಿಗಳನ್ನು ಸ್ಥಿರಗೊಳಿಸಿ ಶಾಂತಿಯುತ ಕಾಶ್ಮೀರ ವೆಂಬುದನ್ನು ಖಚಿತಪಡಿಸಿ ಕೊಳ್ಳಲು ಕೇಂದ್ರ ಸರ್ಕಾರ ಪಾಕ್ ಮೇಲೆ ಯುದ್ಧ ಸಾರುವುದು ಅನಿವಾರ್ಯ.

ಕೇಂದ್ರ ಸರ್ಕಾರ ಈಗಾಗಲೇ ಸಾಕಷ್ಟು ಕ್ರಮಗಳನ್ನು ತೆಗೆದು ಕೊಂಡಿದ್ದರೂ ಸಹ ಅಲ್ಲಿನ ಭಯೋತ್ಪಾದಕರ ನುಸುಳುಕೋರರ ಹಾವಳಿ ತಡೆಗಟ್ಟಲು ಸಾಧ್ಯವಾಗಿಲ್ಲ. ಇತ್ತೀಚೆಗೆ ವಲಸೆ ಕಾರ್ಮಿಕರ ಮೇಲಿನ ದಾಳಿಗಳು ಮಾರುಕಟ್ಟೆಗಳಲ್ಲಿ




ದಾಳಿಗಳು ಹಾಗೂ ಇಂದು ನಡೆದಿರುವ ಪ್ರವಾಸಿಗರ ಮೇಲಿನ ದಾಳಿ ಗಮನಿಸಿದರೆ ಕಾಶ್ಮೀರದ ಶಾಂತಿ ಮತ್ತು ಭಾರತ ದೊಂದಿಗಿನ ಏಕತೆಗೆ ಉಗ್ರರು ಅರ್ಥಾತ್ ಪ್ರತ್ಯೇಕವಾದಿಗಳು ತೀವ್ರ ಸವಾಲುವೊಡ್ಡುತ್ತಿರುವುದು ಕಳವಳಕಾರಿಯದ ಸಂಗತಿಯಾಗಿದೆ.

ಆದ್ದರಿಂದ ಕೇಂದ್ರ ಸರ್ಕಾರ ಉಗ್ರವಾದವನ್ನು ಹತ್ತಿಕ್ಕಲು, ಉಗ್ರರನ್ನು ಪೋಷಿಸಿಕೊಂಡು ಬರುತ್ತಿರುವ ಪಾಕ್ ರಾಷ್ಟ್ರವನ್ನೇ ಧ್ವಂಸಗೊಳಿಸುವ ಕಠಿಣ ಕ್ರಮಗಳನ್ನು ಕೈಗೊಂಡು ತಕ್ಕ ಉತ್ತರವನ್ನು ನೀಡಬೇಕೆಂದು ಜಿಲ್ಲಾ ಸಂಘಟನಾ ಕಾರ್ಯದರ್ಶಿ ಹೇಮಂತ ಆಗ್ರಹಿಸಿದರು.

ಈ ದುಃಖಕರ ಸಂದರ್ಭದಲ್ಲಿ ಭಾರತೀಯ ಹಿಂದೂ ನಾಗರಿಕರೆಲ್ಲರೂ ಜಾತಿ ಭೇದಗಳನ್ನು ಬಿಟ್ಟು ಒಗ್ಗಟ್ಟಾಗಿ ನಿಲ್ಲಬೇಕು ಹಾಗೂ ಇಸ್ಲಾಮಿಕ್ ಭಯೋತ್ಪಾದನೆಯ ವಿರುದ್ಧ ಧ್ವನಿ ಎತ್ತಬೇಕು. ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಉಗ್ರಾಮಿಗಳ ದಾಳಿಗೆ ಒಳಗಾಗಿರುವ ಕುಟುಂಬಗಳಿಗೆ ಸಾಂತ್ವನ ನೀಡಿ ಧೈರ್ಯ ತುಂಬಬೇಕು. ಭಾರತೀಯ ನೆಲದಲ್ಲಿ, ಭಾರತೀಯ ನಾಗರೀಕರ ಮೇಲಿನ ಇಂತಹ ದಾಳಿಗಳು ಸಹಿಸಲು ಅಸಾಧ್ಯ ಹಾಗೂ ಭಯೋತ್ಪಾದಕರ ವಿರುದ್ಧ ಶೂನ್ಯ ಸಹಿಷ್ಣುತೆಯೊಂದಿಗೆ ಭಯೋತ್ಪಾದನೆಯನ್ನು ಮೂಲದಿಂದ ಕಿತ್ತೊಗೆಯಲು ಮಾನ್ಯ ಪ್ರಧಾನ ಮಂತ್ರಿಗಳು ಹಾಗೂ ಕೇಂದ್ರ ಸರ್ಕಾರ ಕ್ರಮ ಕೈಗೊಳ್ಳಬೇಕೆಂದು ವಿದ್ಯಾರ್ಥಿ ಪರಿಷತ್ ಆಗ್ರಹಿಸಿದರು.

ಕಾರ್ಯದರ್ಶಿ ಆನಂದ, ಪವನ್ ಕುಂಬಾರ, ನಾಗರಾಜ, ಪವನ್ ಪಾಂಚಾಲ, ಸ್ನೇಹ ಹಿರೇಮಠ, ಲಿಂಗದೇವ ಗುತ್ತಿ ಸದಸ್ಯ, ಕಾಲೇಜಿನ ಉಪನ್ಯಾಸಕರು ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಯತ್ನಾಳ್ ವಿರುದ್ಧ ಭೀಮು ಮಾಶ್ಯಾಳ ನೇತೃತ್ವದಲ್ಲಿ ಪ್ರತಿಭಟನೆ



**ವಿಜಯಪುರ, ಏ.26–** ದಿನಾಂಕ 28–4–2025 ರಂದು ವಿಜಯಪುರ ನಗರದಲ್ಲಿ ಕೆಲವು ಮುಸ್ಲಿಂ ಸಂಘಟನೆಗಳು ಬಸನಗೌಡ ಪಾಟೀಲ್ (ಯತ್ನಾಳ) ಶಾಸಕರು ವಿಜಯಪುರ ನಗರ ಇವರ ವಿರುದ್ಧ ಪ್ರತಿಭಟನೆಯನ್ನು ಹಮ್ಮಿಕೊಂಡಿದ್ದು ಈ ಪ್ರತಿಭಟನೆಯಲ್ಲಿ ಯಾವುದೆ ಅಹಿತಕರ ಘಟನೆ ನಡೆಯದಂತೆ ಹಾಗೂ ನಗರ ಶಾಸಕರಿಗೆ ಸಾಮಾಜಿಕ ಜಾಲತಾಣಗಳ ಮುಖಾಂತರ ವಿಡಿಯೋ ಹಾಗೂ ಆಡಿಯೋ ಹರಿಬಿಟ್ಟು ಪ್ರಾಣ ಬೆದರಿಕೆಗಳನ್ನು ಹಾಕುತ್ತಿದ್ದು, ಕಾರಣ ನಗರ ಶಾಸಕರಿಗೆ ವೈಯ್ಯಕ್ತಿಕವಾಗಿ ಹಾಗೂ ಅವರ ಒಡೆತನದ ಶಿಕ್ಷಣ ಸಂಸ್ಥೆಗಳು, ಬ್ಯಾಂಕುಗಳು ಹಾಗೂ ಅವರ ನಿವಾಸಕ್ಕೆ ಹೆಚ್ಚಿನ ಭದ್ರತೆಯನ್ನು ನೀಡಬೇಕೆಂದು ಯುವ ಮುಖಂಡ ಭೀಮು ಮಾಶ್ಯಾಳ ನೇತೃತ್ವದಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕರು ವಿಜಯಪುರ ಜಿಲ್ಲೆ ಇವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದರು.

## ಪ್ರಾಥಮಿಕ ಹಂತದಿಂದಲೇ ಮೌಲ್ಯಾಧಾರಿತ ಪಠ್ಯದ ಶಿಕ್ಷಣ ಅಗತ್ಯ: ಡಾ.ಜಾಧವ

**ಕಲಬುರಗಿ, ಏ.26–** ಇಂದಿನ ಶೈಕ್ಷಣಿಕ ವ್ಯವಸ್ಥೆಯಲ್ಲಿ ಪ್ರಾಥಮಿಕ ಶಿಕ್ಷಣದಿಂದಲೇ ನೈತಿಕ ಹಾಗೂ ಮೌಲ್ಯಾಧಾರಿತ ಶಿಕ್ಷಣ ವಿಷಯದ ಪಠ್ಯದ ಅಗತ್ಯವಿದೆ ಎಂದು ಭೂತಾನ್ ರಾಯಲ್ ಯುನಿವರ್ಸಿಟಿಯ ಮಾಜಿ ಪ್ರಾಧ್ಯಾಪಕ ಪ್ರೊ ಉಮೇಶ್ ಜಾಧವ್ ಹೇಳಿದರು.

ನಗರದ ಪಿಡಿಎ ಇಂಜಿನಿಯರಿಂಗ್ ಕಾಲೇಜಿನ ಸ್ಯಾಕ್ ಸಭಾಂಗಣದಲ್ಲಿ ಅಖಿಲ ಭಾರತೀಯ ತಾಂತ್ರಿಕ ಶಿಕ್ಷಣ ಪರಿಷತ್ ವತಿಯಿಂದ ನಡೆದ ಸಾರ್ವತ್ರಿಕ ಮಾನವ ಮೌಲ್ಯಗಳ ನಿರ್ವಹಣಾ ಅಭಿವೃದ್ಧಿ ಕಾರ್ಯಕ್ರಮ ದಲ್ಲಿ ಎರಡನೆ ದಿನದಂದು ನಡೆದ ಕುಟುಂಬದಲ್ಲಿ ಸಾಮರಸ್ಯ ನಂಬಿಕೆ ಗೌರವ ಎಂಬ ವಿಷಯ ಕುರಿತು ಮಾತನಾಡುತ್ತಿದ್ದರು

ಇಂದಿನ ವಿದ್ಯಾರ್ಥಿಗಳಿಗೆ ಕುಟುಂಬ,ಪರಸ್ಪರ ಸಂಬಂಧಗಳು, ಸಾಮರಸ್ಯ ಮತ್ತು ಗೌರವ ಎಂಬುದನ್ನು ಪ್ರಾಥಮಿಕ ಶಿಕ್ಷಣ ಹಂತದಿಂದಲೇ ತಿಳಿಸಿಕೊಡಬೇಕಾದ ಅನಿವಾರ್ಯತೆ ಸೃಷ್ಟಿಯಾಗಿದೆ ಕುಟುಂಬದಲ್ಲಿ ಸಾಮರಸ್ಯ ಎಂದರೆ ಎಲ್ಲರೂ ಚೆನ್ನಾಗಿ ಹೊಂದಿಕೊಳ್ಳು ವುದು, ಪರಸ್ಪರ ಬೆಂಬಲಿಸುವುದು ಮತ್ತು ಒಬ್ಬರನೊಬ್ಬರು ನಂಬಿಕೆಯಿಂದ



ಕಲಬುರಗಿ ನಗರದ ಪಿಡಿಎ ಇಂಜಿನಿಯರಿಂಗ್ ಕಾಲೇಜಿನ ಸ್ಯಾಕ್ ಸಭಾಂಗಣದಲ್ಲಿ ಅಖಿಲ ಭಾರತೀಯ ತಾಂತ್ರಿಕ ಶಿಕ್ಷಣ ಪರಿಷತ್ ವತಿಯಿಂದ ನಡೆದ ಸಾರ್ವತ್ರಿಕ ಮಾನವ ಮೌಲ್ಯಗಳ ನಿರ್ವಹಣಾ ಅಭಿವೃದ್ಧಿ ಕಾರ್ಯಕ್ರಮದಲ್ಲಿ ಎರಡನೆ ದಿನದಂದು ನಡೆದ ಕುಟುಂಬದಲ್ಲಿ ಸಾಮರಸ್ಯ ನಂಬಿಕೆ ಗೌರವ ಎಂಬ ವಿಷಯ ಕುರಿತು ಭೂತಾನ್ ರಾಯಲ್ ವಿಶ್ವವಿದ್ಯಾಲಯದ ವಿಶ್ರಾಂತ ಪ್ರಾಧ್ಯಾಪಕ ಪ್ರೊ.ಉಮೇಶ ಜಾಧವ ಮಾತನಾಡಿದರು.

ಧನಾತ್ಮಕವಾದ ಯೋಚನೆಗಳಿಂದ ಕೂಡಿದ ಚರ್ಚೆಗಳಿಂದ ಮನೆಯಲ್ಲಿ ಸಂತೋಷ, ಶಾಂತಿಯುತ ವಾತಾವರಣವಿರುತ್ತದೆ. ಭಾವನೆಗಳು ನಿರ್ದಿಷ್ಟವಾಗಿರುತ್ತವೆ ಮತ್ತು ಸಂಬಂಧದಲ್ಲಿ 'ಮೌಲ್ಯ'ಗಳನ್ನು ಹೊಂದಿರುತ್ತವೆ. ಒಬ್ಬರೊಂದಿಗಿನ ಇನ್ನೊಬ್ಬರ ಭಾವನೆಗಳು ನಿರ್ದಿಷ್ಟ ವಾಗಿರುತ್ತವೆ, ಅವುಗಳನ್ನು ಗುರುತಿಸಬಹುದು, ಅರ್ಥ ಮಾಡಿಕೊಳ್ಳ ಬಹುದು ಮತ್ತು ಸಂತೋಷಪಡಿಸ ಬಹುದು. ನಾವು ಅವುಗಳನ್ನು ಅರ್ಥಮಾಡಿಕೊಳ್ಳದಿದ್ದರೆ, ನಮಗೆ ಸಮಸ್ಯೆಗಳಾಗುತ್ತವೆ. ನಾವು ಎಂದಿಗೂ ಇನ್ನೊಬ್ಬರನ್ನು ತೃಪ್ತಿಪಡಿಸಲು ಸಾಧ್ಯವಿಲ್ಲ ಎಂದು ನಮಗೆ ಅನಿಸುತ್ತದೆ ಮತ್ತು ಇದು ನಮ್ಮ ಹತ್ತಿರದ ಸಂಬಂಧಗಳಲ್ಲಿಯೂ ಸಹ ನಮ್ಮನ್ನು ದ್ವೇಷದಿಂದ ಕಾಣುವಂತೆ ಮಾಡುತ್ತದೆ ಎಂದು ಹೇಳಿದರು.

ಪರಿಣಾಮಕಾರಿ ಸಂವಹನವು ಕುಟುಂಬದೊಳಗಿನ ಸಾಮರಸ್ಯದ ಮೂಲಾಧಾರ ವಾಗಿದೆ. ಮುಕ್ತ ಮತ್ತು ಪ್ರಾಮಾಣಿಕ ಸಂವಹನವು ವಿಶ್ವಾಸವನ್ನು ಬೆಳೆಸುತ್ತದೆ, ತಿಳುವಳಿಕೆ ಯನ್ನು ಉತ್ತೇಜಿಸುತ್ತದೆ ಮತ್ತು ಸಂಘರ್ಷಗಳನ್ನು ಸೌಹಾರ್ದ ಯುತವಾಗಿ ಪರಿಹರಿಸುತ್ತದೆ. ಕುಟುಂಬ ದೊಳಗೆ ಸಾಮರಸ್ಯವನ್ನು ಕಾಪಾಡಿ ಕೊಳ್ಳಲು ಪರಸ್ಪರ ಗೌರವವು ಅತ್ಯಗತ್ಯ. ಪ್ರತಿಯೊಬ್ಬ ಕುಟುಂಬದ ಸದಸ್ಯರನ್ನು ಅವರ ಪ್ರತ್ಯೇಕತೆ, ಅಭಿಪ್ರಾಯಗಳು ಮತ್ತು ಕೊಡುಗೆ ಗಳಿಗಾಗಿ ಗೌರವಿಸಬೇಕು.

ಪರಸ್ಪರರ ಗಡಿಗಳು, ಆಯ್ಕೆಗಳು ಮತ್ತು ವೈಯಕ್ತಿಕ ಸ್ಥಳವನ್ನು ಗೌರವಿಸುವುದು ಭದ್ರತೆ ಮತ್ತು ಸ್ವೀಕಾರದ ಭಾವನೆಯನ್ನು ಬೆಳೆಸುತ್ತದೆ ಎಂದು ಹೇಳಿದರು ಒಟ್ಟಾರೆಯಾಗಿ ಇಂದಿನ ಪ್ರಾಥಮಿಕ ಶಿಕ್ಷಣ ವ್ಯವಸ್ಥೆಯಿಂದಲೆ ಮೌಲ್ಯ ಶಿಕ್ಷಣ ಆವಶ್ಯಕತೆ ಇದೆ ಎಂದು ಪ್ರತಿಪಾದಿಸಿದರು.

ಕಾರ್ಯಕ್ರಮದಲ್ಲಿ ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿಗಳಾದ ಉದಯ ಕುಮಾರ್ ಚಿಂಚೋಳಿ, ಎಐಸಿಟಿಇ ಹ್ಯೂಮನ್ ವ್ಯಾಲ್ಯೂ ವಿಭಾಗದ ವೈಸ್ ಚೇರ್ಮನ್ ರಾಜು ಅಸ್ಥಾನಾ ,ಸಹ ಸಂಯೋಜಕರಾದ ಡಾ ಅನಿತಾ ಮಾನೆ, ಸೌಮ್ಯ ಪರಿವೀಕ್ಷಕರಾದ ಡಾ.ಶಶಿಕಾಂತ ಕುರೋಡಿ ಕಾರ್ಯ ಕ್ರಮದ ಸಂಘಟಕ ರಾದ ಸಂಘಟಕರಾದ ಡಾ ಅಮರೇಶ ಪಾಟೀಲ್, ಶ್ರೀಶೈಲ್ ಪತಾಟೆ ಉಪಸ್ಥಿತರಿದ್ದರು.

## ಮೇ1 ರಿಂದ ಆದಿಶಂಕರಾಚಾರ್ಯ ಜಯಂತಿ ಆಚರಣೆ- ಪಿ.ಎ.ಮುರಳಿ



**ಬಳ್ಳಾರಿ, ಏ.26–** ಬಳ್ಳಾರಿಯ ಸಂಗನಕಲ್ಲು ರಸ್ತೆಯಲ್ಲಿರುವ ಶ್ರೀ ಶಾರದಾ ಶಂಕರ ಮಠದಲ್ಲಿ ಶ್ರೀ ಜಗದ್ಗುರು ಶಂಕರ ಭಗವತ್ಪಾದಾ ಚಾರ್ಯರ ಜಯಂತ್ಯುತ್ಸವದ ಅಂಗ ವಾಗಿ ವಿಶ್ವಾವಸುನಾಮ ಸಂವತ್ಸರದ ವೈಶಾಖ ಮಾಸ ಶುದ್ಧ ಚತುರ್ಥಿ ಹಾಗೂ ಪಂಚಮಿ ಮೇ1, 2ರಂದು ಶ್ರೀ ಜಗದ್ಗುರು ಮಹಾಸ್ವಾಮಿ ಗಳವರ ಆದೇಶಾನುಸಾರ ವಿಜೃಂಭಣೆಯಿಂದ ಜಯಂತ್ಯುತ್ಸವ ನಡೆಸಲು ಭಕ್ತರು ಸಂಕಲ್ಪಿಸಿದ್ದಾರೆ. ಶೃಂಗೇರಿ ಶ್ರೀ ಜಗದ್ಗುರು ಶಂಕರಾಚಾರ್ಯ ಮಹಾಸಂಸ್ಥಾನಂ ದಕ್ಷಿಣಾಮ್ನಾಯ ಶೃಂಗೇರಿ ಶ್ರೀ ಶಾರದಾ ಪೀಠದ ಶ್ರೀಮತ್ಪರಮಹಂ ಸೇತ್ಯಾದಿ ಸಮಸ್ತ ಬಿರುದಾವಳಿ ವಿರಾಜಮಾನರಾಗಿರುವ ಶೃಂಗೇರಿ ಶ್ರೀ ಶಾರದಾ ಪೀಠಾಧೀಶ್ವರರಾದ ಜಗದ್ಗುರು ಶ್ರೀ ಭಾರತೀ ತೀರ್ಥ ಮಹಾಸನ್ನಿಧಾನಂಗಳವರ ಮತ್ತು ತತ್ತರ ಕಮಲ ಸಂಜಾತರಾದ ಜಗದ್ಗುರು ಶ್ರೀ ವಿಧುಶೇಖರ ಭಾರತೀ ಸನ್ನಿಧಾನಂಗಳವರ ಪರಮಾನುಗ್ರಹದಿಂದ ಬಳ್ಳಾರಿ ಮಹಾನಗರದ ಸಂಗನಕಲ್ಲು ರಸ್ತೆಯಲ್ಲಿ ಸ್ಥಾಪಿಸಲಾಗಿರುವ ಶ್ರೀ ಶೃಂಗೇರಿ ಶಾರದಾ ಶಂಕರ ಮಠದಲ್ಲಿ ಅತ್ಯಂತ ಶ್ರದ್ಧಾಭಕ್ತಿಯಿಂದ ಜಯಂತ್ಯುತ್ಸವ ಆಚರಿಸಲಾಗುತ್ತಿದ್ದು ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಆಚಾರ್ಯರ ಕೃಪೆಗೆ ಪಾತ್ರರಾಗಲು ಕೋರಿದೆ. ಸಂಜೆ 4–30ರಿಂದ ಶ್ರೀ ಶಂಕರ ಭಗವತ್ಪಾದರ ಭಾವಚಿತ್ರದ ಭವ್ಯ ಶೋಭಾ ಯಾತ್ರೆ ಜರುಗಲಿದೆ. ಸಂಗನಕಲ್ಲು ರಸ್ತೆಯ ಶಂಕರಮಠದಲ್ಲಿ ಎರಡು ದಿನ ಪೂಜೆ, ಅಭಿಷೇಕಾದಿಗಳು ಜರುಗಲಿವೆ. ಪ್ರವಚನ, ವೇದ ಪಾರಾಯಣ, ಸಾಮೂಹಿಕ ಭಜನೆ, ಸಾಮೂಹಿಕ ಉಪನಯನಗಳು ಜರುಗಲಿದ್ದು ಸಕಲ ಭಕ್ತಾದಿಗಳು ಈ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಭಗವತ್ಪಾದರ ಕೃಪೆಗೆ ಪಾತ್ರರಾಗುವಂತೆ ಆಡಳಿತಾಧಿಕಾರಿ ಪಿ.ಎ.ಮುರಳಿ ಅವರು ಕೋರಿದ್ದಾರೆ.

## ಸಿಇಟಿ ಪರೀಕ್ಷೆ ಜನಿವಾರ ಪ್ರಕರಣ: ವಿದ್ಯಾರ್ಥಿ ಮುಂದೆ ಎರಡು ಆಯ್ಕೆ ಇಟ್ಟ ಸರ್ಕಾರ

**ಬೀದರ್, ಏ.26–** ನಗರದ ವಿದ್ಯಾರ್ತಿ ಸುಚಿವೃತ ಕುಲಕರ್ಣಿಗೆ ಇತ್ತೀಚೆಗೆ ನಡೆದ ಸಿಇಟ ಪರೀಕ್ಷೆಯಲ್ಲಿ ಜನಿವಾರ ತೆಗೆಯುವ ವಿವಾದಕ್ಕೆ ಸಂಬಂಧಿಸಿದಂತೆ ಆತ ಪರೀಕ್ಷೆಗೆ ಹಾಜರಾಗುವುದು ಆಗಿರಲಿಲ್ಲ. ಈ ವಿಷಯ ರಾಜ್ಯದಲ್ಲಿ ಸಾಕಷ್ಟು ಚರ್ಚೆಗೆ ಹುಟ್ಟು ಹಾಕಿತ್ತು. ಜನಿವಾರ ತೆಗೆಯುವುದಿಲ್ಲ ಎಂದು ವಿದ್ಯಾರ್ಥಿ ಪರೀಕ್ಷೆ ನಿರಾಕರಿಸಿದ್ದ. ಈಗ ವಿದ್ಯಾರ್ಥಿ ಮುಂದೆ ಸರ್ಕಾರ ಎರಡು ಆಯ್ಕೆಗಳನ್ನು ಇಟ್ಟಿದೆ.

ಆತನಿಗೆ ಗಣಿತ ಪರೀಕ್ಷೆ ಬರೆಯಲು ಅವಕಾಶ ಸಿಕ್ಕಿರಲಿಲ್ಲ. ಹೀಗಾಗಿ ಸರ್ಕಾರ ಎರಡು ಪ್ರಮುಖ ಅವಕಾಶ ನೀಡಿದೆ.

**ಆಯ್ಕೆ ಒಂದು:** ಭೌತವಿಜ್ಞಾನ ಹಾಗೂ ರಸಾಯನ ವಿಜ್ಞಾನ



ವಿಷಯಗಳಲ್ಲಿ ಪಡೆದ ಸರಾಸರಿ ಅಂಕಗಳನ್ನು ಗಣಿತ ವಿಷಯಕ್ಕೆ ನೀಡುವುದು.

**ಆಯ್ಕೆ ಎರಡು:** ಮತ್ತೊಮ್ಮೆ ಪರೀಕ್ಷೆ ಬರೆಯುವುದು.

ಸುಚಿವೃತ ಕುಲಕರ್ಣಿ ಬೀದರ್‌ನ ಮನ್ನಳ್ಳಿ ರಸ್ತೆಯಲ್ಲಿರುವ ಸಾಯಿಸ್ಫೂರ್ತಿ ಕಾಲೇಜಿಗೆ ಸಿಇಟಿ ಪರೀಕ್ಷೆ ಬರೆಯಲು ತೆರಳಿದ್ದರು. ಈ ವೇಳೆ, ಅಲ್ಲಿನ ಸಿಬಂದಿ ಜನಿವಾರ ತೆಗೆದು ಪರೀಕ್ಷೆ ಹಾಜರಾಗುವಂತೆ ಸೂಚಿಸಿದ್ದರು. ಇದಕ್ಕೆ ಒಪ್ಪದ ಸುಚಿವೃತ ಕುಲಕರ್ಣಿ ಯವರು ಜನಿವಾರ ತೆಗೆಯದೆ ವಾಪಸ್ ಮನೆಗೆ ಹೋಗಿದ್ದ. ಪರೀಕ್ಷೆ ಯಿಂದ ವಂಚಿತನಾದ ವಿದ್ಯಾರ್ಥಿ ಸುಚಿವ್ರತ್ ಕುಲಕರ್ಣಿ ಮನೆಗೆ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಭೇಟಿ ನೀಡಿ, ಅವರಿಗೆ ಭಾಲ್ಕಿಯಲ್ಲಿ ತಮ್ಮ ಸಂಸ್ಥೆಯ ಬಿಕೆಟಿಇ ಇಂಜಿನೀಯರಿಂಗ್ ಕಾಲೇಜ್‌ನಲ್ಲಿ ಉಚಿತವಾಗಿ ಇಂಜಿನಿಯ ರಿಂಗ್ ಸೀಟ್ ಕೊಡಿಸುವುದಾಗಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಭರವಸೆ ನೀಡಿದ್ದರು.

ಈಗ ಸರ್ಕಾರ ನೀಡಿರುವ ಎರಡು ಆಯ್ಕೆಗಳು ಸುಚಿವ್ರತ ಕುಲಕರ್ಣಿ ಮುಂದಿದ್ದು, ಅವನ ಆಯ್ಕೆಯನ್ನು ಸರ್ಕಾರಕ್ಕೆ ಜಿಲ್ಲಾಧಿಕಾರಿ ಗಳ ಮೂಲಕ ತಿಳಿಸಬೇಕಿದೆ.

### ರಸ್ತೆ ಮೇಲೆ ಪಾಕ್ ಧ್ವಜ ಅಂಟಿಸಿದ ಭಜರಂಗದಳ

## ಧ್ವಜಗಳನ್ನು ತೆರವುಗೊಳಿಸಿದ ಮುಸ್ಲಿಮ್ ಮಹಿಳೆಯರು

**ಕಲಬುರಗಿ, ಏ.26–** ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದ ಉಗ್ರರ ದಾಳಿಯನ್ನು ಖಂಡಿಸಿ ನಗರದ ವಿವಿಧೆಡೆ ಭಜರಂಗದಳದ ಕಾರ್ಯಕರ್ತರು ಪ್ರತಿಭಟನೆ ನಡೆಸಿ, ಪಾಕ್‌ನ ಧ್ವಜಗಳನ್ನು ರಸ್ತೆಯ ಮೇಲೆ ನೆಲಕ್ಕೆ ಅಂಟಿಸುವ ಮೂಲಕ ಆಕ್ರೋಶ ಹೊರಹಾಕಿದರು.

ಬಜರಂಗದಳದ ಕಾರ್ಯ ಕರ್ತರು ವಾಹನಗಳ ದಟ್ಟ ಸಂಚಾರ ಇರುವ ನಗರದ ಜಗತ್ ವೃತ್ತ, ಆಳಂದ್ ನಾಕಾ, ಮಾರ್ಕೆಟ್ ಚೌಕ್, ಸಾತ್ ಗುಂಬಜ್ ಸೇರಿದಂತೆ 20ಕ್ಕೂ ಹೆಚ್ಚಿನ ಸ್ಥಳಗಳಲ್ಲಿ ಹಾಗೂ ಶೌಚಾಲಯಗಳಲ್ಲಿ ಪಾಕಿಸ್ತಾನದ ಧ್ವಜಗಳನ್ನು ಅಂಟಿಸಿದ್ದಾರೆ ಎನ್ನಲಾಗಿದೆ.

ಈ ಸಂದರ್ಭದಲ್ಲಿ ನಗರ ಪೋಲಿಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ., ಅವರು ಮಾತನಾಡಿ, ಕಾಶ್ಮೀರದಲ್ಲಿನ ಭಯೋತ್ಪಾದನಾ ಕೃತ್ಯ ಖಂಡಿಸಿ, ವಿವಿಧ ಸಂಘಟನೆಗಳು ವಿವಿಧ ರೀತಿಯಲ್ಲಿ ಪ್ರತಿಭಟನೆಗಳು ನಡೆಸುತ್ತಿವೆ. ನಗರದಲ್ಲೂ ಕೆಲ ಕೆಲವರು ಅನುಮತಿ ಇಲ್ಲದೆ ಪಾಕಿಸ್ತಾನ್ ಧ್ವಜ ಅಂಟಿಸಿರುವುದು ಕಂಡುಬಂದಿದೆ. ಇದರಿಂದ ದ್ವೇಷ ಭಾವನೆ ಹರಡಿದಂತಾಗುತ್ತದೆ ಎಂದು ತಿಳಿಸಿದರು.

ಮಾಹಿತಿ ತಿಳಿಯುತ್ತಿದ್ದಂತೆಯೇ ಪಾಕಿಸ್ತಾನ್ ಧ್ವಜ ರಸ್ತೆಗೆ ಅಂಟಿಸಿ ಭಜರಂಗದಳದ ಆರು ಜನ ಕಾರ್ಯಕರ್ತರನ್ನು ವಶಕ್ಕೆ ಪಡೆಯಲಾಗಿದೆ. ಪ್ರತಿಭಟನೆ ಮಾಡು ವಾಗ ಸಂಬಂಧಿಸಿದ ಪೋಲಿಸ್ ಠಾಣೆಯಿಂದ ಅನುಮತಿ



ಕಲಬುರಗಿಯಲ್ಲಿ ಭಜರಂಗದಳ ಕಾರ್ಯಕರ್ತರು ಪೆಹಲ್ಗಾಮ್‌ನಲ್ಲಿ ಪಾಕ್ ಉಗ್ರರಗಾಮಿಗಳು ಅಪ್ರಚೋದಿತ ದಾಳಿ ಮತ್ತು ಅಮಾಯಕ ಹಿಂದೂಗಳನ್ನು ಗುಂಡಿಕ್ಕಿ ಕೊಂದಿರುವುದನ್ನು ವಿರೋಧಿಸಿ ರಸ್ತೆಯ ಮೇಲೆ ವಾಹನಗಳು ಚಲಿಸುವ ಸ್ಥಳದಲ್ಲಿ ಪಾಕ್ ಧ್ವಜಗಳನ್ನು ಅಂಟಿಸಿ ಅವುಗಳ ಮೇಲೆ ವಾಹನಗಳು ಚಲಿಸುವಂತೆ ಮಾಡಿದರು. ಮುಸ್ಲಿಮ್ ಮಹಿಳೆಯರು ಅವುಗಳನ್ನು ಎತ್ತಿ ಕೊಂಡೊಯ್ದರು.

ಪಡೆಯಬೇಕಾತ್ತು. ಆ ಅನುಮತಿಯನ್ನು ಬಜರಂಗದ ದಳದ ಕಾರ್ಯಕರ್ತರು ಪಡೆದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ಗೊಂದಲ ನಿರ್ಮಾಣ: ನಗರದ ಹೃದಯ ಭಾಗದಲ್ಲಿರುವ ಜಗತ್ ವೃತ್ತದಲ್ಲಿನ ಅಂಬೇಡ್ಕರ್ ಪ್ರತಿಮೆಯ ಎದುರಿಮ ರಸ್ತೆಯಲ್ಲಿ ಅಡ್ಡಲಾಗಿ ಪಾಕಿಸ್ತಾನ್ ಧ್ವಜಗಳನ್ನು ಅಂಟಿಸಿದಾಗ, ಸಾರ್ವಜನಿಕ ವಲಯದಲ್ಲಿ ತೀವ್ರ ಆತಂಕ ಹಾಗೂ ಗೊಂದಲ ಉಂಟಾಗಿತ್ತು. ಪಾಕಿಸ್ತಾನ್ ಧ್ವಜವನ್ನು ಅಂಟಿಸಿದವರು ಯಾರು? ಎಂಬ ಪ್ರಶ್ನೆ ಕಾಡತೊಡಗಿತು. ಕಳೆದ ಎರಡು ದಿನಗಳ ಹಿಂದೆಯೇ ಜಗತ್ ವೃತ್ತದ ಬಳಿಯೇ ವಕ್ಫ್ ತಿದ್ದುಪಡಿ ಕಾಯ್ದೆ ವಿರೋಧಿಸಿ ಮುಸ್ಲಿಂ ಸಂಘಟನೆಗಳ ಕಾರ್ಯಕರ್ತರು ಬೃಹತ್ ಪ್ರತಿಭಟನೆ ಮಾಡಿದ್ದರು. ಹೀಗಾಗಿ ಅವರ ಮೇಲೆ ಅನುಮಾನಗಳೂ ಸಹ ಕೆಲವರು ವ್ಯಕ್ತಪಡಿಸಿದರು.

ಆದಾಗ್ಯೂ, ಪಾಕಿಸ್ತಾನ್ ಧ್ವಜಗಳನ್ನು ರಸ್ತೆಗೆ ಅಂಟಿಸಿದ್ದು, ಅದರ ಮೇಲೆ ವಾಹನಗಳು ಸಂಚರಿಸುತ್ತಿರುವುದು ಹಾಗೂ ಪಾದಾಚಾರಿಗಳು ತುಳಿದುಕೊಂಡು ಹೋಗುತ್ತಿರುವುದನ್ನು ಕಂಡ ಹಲವರು, ಇದು ಮುಸ್ಲಿಂರ ಕೈವಾಡವಲ್ಲ, ಬದಲಿಗೆ ಹಿಂದೂ ಸಂಘಟನೆಗಳ ಕಾರ್ಯಕರ್ತರ ಕೈವಾಡ ಎಂದೂ ಅಭಿಪ್ರಾಯಪಟ್ಟರು.

ಇನ್ನೊಂದೆಡೆ ರಸ್ತೆಗೆ ಹಾಕಲಾದ ಪಾಕಿಸ್ತಾನ್ ಧ್ವಜದ ಮೇಲೆ ಪಿಕೆಎಂಕೆಬಿ ಎಂದು ಸಹ ಬರೆಯಲಾಗಿತ್ತು. ಇದೂ ಸಹ ಸಾಕಷ್ಟು ಚರ್ಚೆಗೆ ಗ್ರಾಸವಾಗಿತ್ತು. ಮತ್ತೊಂದೆಡೆ ಬಿಜೆಪಿ ಮುಖಂಡ ಮಣಿಕಂಠ್ ರಾಠೋಡ್ ಅವರು ಪ್ರಿಯಾಂಕ್ ಖರ್ಗೆ ಅವರಿಗೆ ಟೀಕೆ ಮಾಡುವಾಗ ಅವರ ಹೆಸರು ಬರೆಯದೇ ಪಿಕೆ ಎಂದೂ ಹಾಗೂ ಮಲ್ಲಿಕಾರ್ಜುನ್ ಖರ್ಗೆಯವರ ಹೆಸರು ಬಳಸುವಾಗ ಎಂಕೆ ಎಂದೂ ಸಹ ಬಳಕೆ ಮಾಡುತ್ತಿದ್ದರು. ಹೀಗಾಗಿ ಪಾಕ್ ಧ್ವಜಗಳನ್ನು ರಸ್ತೆಯಲ್ಲಿ ಅಂಟಿಸಿರುವ ಕೃತ್ಯದ ಹಿಂದೆ ಮಣಿಕಂಠ್ ರಾಠೋಡ್ ಇಲ್ಲವೇ ಅವರ ಬೆಂಬಲಿಗರ ಕೈವಾಡವಿದೆ ಎಂಬ ಚರ್ಚೆಗಳೂ ಸಹ ಆರಂಭಗೊಂಡಿದ್ದವು.

ರಸ್ತೆಗಳಲ್ಲಿ ಅಂಟಿಸಿರುವ ಧ್ವಜಗಳನ್ನು ಮುಸ್ಲಿಮ್ ಮಹಿಳೆಯರು ಹೆಕ್ಕಿ ತೆಗೆಯುತ್ತಿರುವುದನ್ನು ಕಂಡ ಕೆಲವರು, ಇವರಿಗಿನ್ನೂ ಪಾಕಿಸ್ತಾನದ ಮೇಲೆಯೇ ಭಕ್ತಿ ಎಂದು ಆಡಿಕೊಂಡರು. ಯಾವುದನ್ನೂ ಗಮನಿಸದೇ ಮಹಿಳೆಯರು ಧ್ವಜಗಳನ್ನು ರಸ್ತೆಗಳಿಂದ ಕಿತ್ತು ತೆಗೆಯುತ್ತಿದ್ದರು.

### ಇಂದು ಕಾಶ್ಮೀರದಲ್ಲಿ, ನಾಳೆ ನಮ್ಮ ಮೇಲೆ

## ಹಿಂದೂಗಳು ಎಚ್ಚರದಿಂದಿರಲು ಮಂತ್ರಾಲಯ ಶ್ರೀ ಸಲಹೆ

**ರಾಯಚೂರು, ಏ.26–** ಜಮ್ಮು ಮತ್ತು ಕಾಶ್ಮೀರದ ಪೆಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ಉಗ್ರರು ನಡೆಸಿದ ಗುಂಡಿನ ದಾಳಿ ಯನ್ನು ಮಂತ್ರಾಲಯ ಮಠದ ಪೀಠಾದಿಪತಿ ಶ್ರೀ ಸುಬುಧೇಂದ್ರ ತೀರ್ಥರು ತೀವ್ರವಾಗಿ ಖಂಡಿಸಿದ್ದಾರೆ.



ರಾಯಚೂರಲ್ಲಿ ಮಂತ್ರಾಲಯ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದ ಪೀಠಾಧಿಪತಿ ಶ್ರೀ ಸುಬುಧೇಂದ್ರ ತೀರ್ಥರು ಮಾಧ್ಯಮಗಳೊಂದಿಗೆ ಮಾತನಾಡಿದರು.

ಇಂದು ಕಾಶ್ಮೀರ ದಲ್ಲಿ ನಡೆದಿದೆ ನಾಳೆ ನಮ್ಮ ಭಾಗದಲ್ಲೂ ಇಂಥ ಉಗ್ರರ ದಾಳಿ ನಡೆಯ ಬಹುದು. ಈ ದಾಳಿಯಲ್ಲಿ ಕರ್ನಾ ಟಕದ ಮೂವರು ಸೇರಿದಂತೆ ಹಲವರು ಮೃತಪಟ್ಟಿದ್ದಾರೆ. ಅಮಾಯಕ ಪ್ರವಾಸಿಗರ ಮೇಲಿನ ದಾಳಿ ಮತ್ತು ಹಿಂದೂಗಳನ್ನೇ ಗುರಿಯಾಗಿಸಿಕೊಂಡು, ಪತ್ನಿ–ಮಕ್ಕಳ ಎದುರಲ್ಲೇ ಪುರುಷರ ಹತ್ಯೆ ನಡೆದಿದೆ ಎಂಬ ಮಾಹಿತಿ ಲಭ್ಯವಾಗಿದೆ. ಇದು ಅಮಾನವೀಯ ಎಂದು ಮಂತ್ರಾಲುಯ ಶ್ರೀ ರಾಘವೇಂದ್ರ ಸ್ವಾಮಗಳ ಮಠದ ಶ್ರೀ ಸುಬುಧೇಂದ್ರ ತೀರ್ಥರು ಹೇಳಿದರು.

ನಗರದಲ್ಲಿಂದು ಮಾಧ್ಯಮ ಗಳೊಂದಿಗೆ ಮಾತನಡಿದ ಅವರು, ನಾವು ಭಾರತೀಯರು ಶಾಂತಿಪ್ರಿಯರು. ನಮ್ಮ ದೇಶದಲ್ಲಿ ಎಲ್ಲರೂ ಒಂದೇ ತಾಯಿಯ ಮಕ್ಕಳು. ಜಾತಿ, ಧರ್ಮದ ಭೇದವಿಲ್ಲದೆ ಒಗ್ಗಟ್ಟಿನಿಂದ ಬದುಕುತ್ತೇವೆ. ಆದರೆ, ಬೇರೆ ದೇಶಗಳಿಂದ ಬಂದವರು ನಮ್ಮಲ್ಲಿ ಜಾತಿ, ಧರ್ಮದ ಹೆಸರಿನಲ್ಲಿ ಅಶಾಂತಿ ಮತ್ತು ದುಷ್ಕೃತ್ಯಗಳನ್ನು ಸೃಷ್ಟಿಸುತ್ತಿದ್ದಾರೆ. ಇದಕ್ಕೆ ಎಲ್ಲಾ ಭಾರತೀಯರು ಒಂದಾಗಿ ಎದುರಿಸ ಬೇಕು ಎಂದು ಕರೆ ನೀಡಿದರು.

**ಇಂದು ಕಾಶ್ಮೀರದಲ್ಲಿ ನಾಳೆ ನಮ್ಮ ಮೇಲೆ:** ಎಲ್ಲಾ ಹಿಂದೂಗಳು ಜಾಗೃತರಾಗಿರಬೇಕು. ನಮ್ಮ ಹೆಣ್ಣು ಮಕ್ಕಳು, ಧರ್ಮ, ದೇವಸ್ಥಾನಗಳನ್ನು ರಕ್ಷಿಸಿಕೊಳ್ಳಬೇಕು. ಇಂದು ಕಾಶ್ಮೀರದಲ್ಲಿ ದಾಳಿ ನಡೆದಿದೆ, ಮುಂದೊಂದು ದಿನ ನಮ್ಮ ಊರಿನಲ್ಲಿ ಆಗಬಹುದು. ನಾವು ಎಚ್ಚರಿಕೆಯಿಂದ ಇರಬೇಕು ಎಂದು ಸಲಹೆ ನೀಡಿದರು.

ಹಣದಿಂದ ಮೃತರು ವಾಪಸ್ ಬರೋದಿಲ್ಲ: ದಾಳಿಯಲ್ಲಿ ಮೃತ ಪಟ್ಟವರ ಆತ್ಮಕ್ಕೆ ಶಾಂತಿ ಕೋರಿದ ಶ್ರೀಗಳು, ಕರ್ನಾಟಕದ ಮೂವರು ಮೃತಪಟ್ಟಿರುವ ಬಗ್ಗೆ ವಿಷಾದ ವ್ಯಕ್ತಪಡಿಸಿದರು.

ಮೃತರ ಕುಟುಂಬಗಳಿಗೆ ಸಾಂತ್ವನ ನೀಡುವ ನಿಟ್ಟಿನಲ್ಲಿ, ಶ್ರೀ ರಾಘವೇಂದ್ರ ಸ್ವಾಮಿಗಳ ಪ್ರಸಾದ ರೂಪದಲ್ಲಿ ಆ ಮೂರು ಕುಟುಂಬಗಳಿಗೆ ತಲಾ ಒಂದು ಲಕ್ಷ ರೂಪಾಯಿ ನೀಡುತ್ತೇವೆ. ಹಣದಿಂದ ಮೃತರು ವಾಪಸ್ ಬರುವುದಿಲ್ಲ, ಆದರೆ ಈ ಕುಟುಂಬಗಳ ಬೆಂಬಲಕ್ಕೆ ನಾವು ಇದ್ದೇವೆ ಎಂದು ಧೈರ್ಯ ನೀಡುವ ಸಂಕೇತವಾಗಿ ನೀಡು ತ್ತಿದ್ದೇವೆ ಎಂದು ಶ್ರೀ ಸುಬುಧೇಂದ್ರ ತೀರ್ಥರು ಹೇಳಿದರು.


ಎಂ.ಕೃಷ್ಣಪ್ಪ
ಶಾಸಕರು ಹಾಗೂ ಮಾಜಿ ಸಚಿವರು
ವಿಜಯನಗರ ವಿಧಾನಸಭಾ ಕ್ಷೇತ್ರ , ಬೆಂಗಳೂರು
27 ಏಪ್ರಿಲ್ 2025
ಯುವಕರ ಕಣ್ಮಣಿ, ಗೋವಿಂದರಾಜ ನಗರ
ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರಾದ
ಪ್ರಿಯಕೃಷ್ಣ
ಅವರಿಗೆ
ಜನ್ಮದಿನದ
ಶುಭಾಶಯಗಳು
ಶುಭಕೋರುವವರು:
ಅಭಿಮಾನಿಗಳು ಹಾಗೂ ಹಿತೈಷಿಗಳು ವಿಜಯನಗರ
ವಿಧಾನಸಭಾ ಕ್ಷೇತ್ರ ಮತ್ತು ಗೋವಿಂದರಾಜನಗರ
ವಿಧಾನಸಭಾ ಕ್ಷೇತ್ರ, ಬೆಂಗಳೂರು